ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 150 ಸಂಚಿಕೆ- 150 | PAGE-8 ಪುಟ-8 | ಗುರುವಾರ 24.07.2025 | RS.2/- ಬೆಲೆ 2/-

# ಜಿಎಸ್‌ಟಿ ತೆರಿಗೆ : 3 ವರ್ಷದ ಬಾಕಿ ವಸೂಲಿ ಮಾಡಲ್ಲ: ಸಿಎಂ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.23: ಜಿಎಸ್ ಟಿ ನೋಟಿಸ್ ಪಡೆದ ವರ್ತಕರಿಂದ 3 ವರ್ಷದ ತೆರಿಗೆ ಬಾಕಿ ವಸೂಲಾತಿ ಮಾಡುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಬುಧವಾರ ಘೋಷಣೆ ಮಾಡಿದ್ದಾರೆ.ಈ ಹಿನ್ನೆಲೆಯಲ್ಲಿ ಜುಲೈ 25ರಂದು ಕರೆ ನೀಡಲಾಗಿದ್ದ ಪ್ರತಿಭಟನೆ ಹಿಂಪಡೆಯಲು ಸಣ್ಣ ವರ್ತಕರು ಒಪ್ಪಿಕೊಂಡಿದ್ದಾರೆ. ಯುಪಿಐ ಅಡಿ ರೂ. 40 ಲಕ್ಷಕ್ಕೂ ಅಧಿಕ ವಹಿವಾಟು ಮಾಡಿರುವವರಿಗೆ ರಾಜ್ಯ ಸರ್ಕಾರದ ವಾಣಿಜ್ಯ ತೆರಿಗೆ ಇಲಾಖೆಯು ನೋಟಿಸ್ ಜಾರಿ ಮಾಡಿದ್ದಕ್ಕೆ ಭಾರೀ ಟೀಕೆ ವ್ಯಕ್ತವಾಗಿತ್ತು. ಬೆಂಗಳೂರು ನಗರದ ವರ್ತಕರು ಸೇರಿದಂತೆ ರಾಜ್ಯಾದ್ಯಂತ ಅಂದು ಯುಪಿಐ ಪಾವತಿ ಬಂದ್ ಮಾಡಲು ಕರೆ ನೀಡಲಾಗಿತ್ತು.

ವರ್ತಕ ಸಂಘದ ಪ್ರತಿನಿಧಿಗಳೊಂದಿಗೆ ಸಿಎಂ ಸಭೆ: ಇದರ ಬೆನ್ನಲ್ಲೇ ಇಂದು ತೆರಿಗೆ ಇಲಾಖೆಯ ಅಧಿಕಾರಿಗಳು, ವರ್ತಕ ಸಂಘದ ಪ್ರತಿನಿಧಿಗಳ ಜೊತೆ ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನೋಟಿಸ್ ನೀಡಿದ ವರ್ತಕರಿಂದ ಬಾಕಿ ತೆರಿಗೆಯನ್ನು ವಸೂಲಿ ಮಾಡುವುದಿಲ್ಲ. ಆದರೆ ವರ್ತಕರು ನೋಂದಣಿ ಮಾಡಿಕೊಳ್ಳಬೇಕು. ಈಗ ಕೊಟ್ಟಿರುವ ನೋಟೀಸ್ ಮೇಲೆ ವಸೂಲಾತಿ, ಕ್ರಮ ಕೈಗೊಳ್ಳುವುದಿಲ್ಲ ಎಂದು ಹೇಳಿದ್ದಾರೆ. ಫ್ರೀಡಂ ಪಾರ್ಕ್‌ನಲ್ಲಿ ಮುಷ್ಕರ ಅಥವಾ ಪ್ರತಿಭಟನೆ ನಡೆಸದಂತೆ ವ್ಯಾಪಾರಿಗಳಿಗೆ ಹೇಳಿದ್ದೇನೆ. ತಮ್ಮ ಪ್ರತಿಭಟನೆಯನ್ನು ಹಿಂಪಡೆಯಲು ಅವರು ಒಪ್ಪಿದ್ದಾರೆ ಎಂದು ಮುಖ್ಯಮಂತ್ರಿ ಸುದ್ದಿಗಾರರಿಗೆ ತಿಳಿಸಿದರು.

ಜಿಎಸ್‌ಟಿ ನೀತಿ ನಿಯಮಗಳ ರಚನೆಯಲ್ಲಿ ರಾಜ್ಯಗಳ ಪಾತ್ರ ಇಲ್ಲ: ಸಣ್ಣ ವ್ಯಾಪಾರಿಗಳಲ್ಲಿ ಜಿಎಸ್‌ಟಿ ನೊಟೀಸ್ ಕುರಿತು ಗೊಂದಲ ಇದೆ. ಸಾಲದ ಮೊತ್ತ ಕೂಡಾ ಇದರಲ್ಲಿ ಸೇರಿಕೊಂಡಿದೆ. ವೈಯಕ್ತಿಕ ವಹಿವಾಟು ಹಣ ಸಹ ಇದರಲ್ಲಿ ಸೇರಿದೆ. ಜಿಎಸ್‌ಟಿ ಯನ್ನು ಕೇಂದ್ರ ಹಣಕಾಸು ಸಚಿವರ ಅಧ್ಯಕ್ಷತೆಯ ಜಿಎಸ್‌ಟಿ ಕೌನ್ಸಿಲ್ ನಿರ್ಧರಿಸುತ್ತದೆ. ಇದಕ್ಕೆ ಸಂಬಂಧಿಸಿದ ಎಲ್ಲ ನೀತಿ–ನಿಯಮಾವಳಿಗಳನ್ನು ಕೇಂದ್ರ ಸರ್ಕಾರವೇ ರಚಿಸಿದೆ. ಅವುಗಳ ಪಾಲನೆ ಮಾಡುವುದಷ್ಟೇ ರಾಜ್ಯ ಸರ್ಕಾರಗಳ ಕರ್ತವ್ಯವಾಗಿದೆ ಎಂದು ವಿವರಿಸಿದರು.

ಈ ನೀತಿ–ನಿಯಮಾವಳಿಗಳ ರಚನೆಯಲ್ಲಿ ರಾಜ್ಯಗಳ ಪಾತ್ರ ಇಲ್ಲ. ರಾಜ್ಯ ಸರ್ಕಾರ ಸಂಗ್ರಹಿಸುವ ಜಿಎಸ್‌ಟಿಯಲ್ಲಿ ಶೇಕಡಾ 50ರಷ್ಟು ಮೊತ್ತ ಮಾತ್ರ ರಾಜ್ಯಕ್ಕೆ ನೀಡಲಾಗುತ್ತದೆ. ಕರ್ನಾಟಕ ಸರ್ಕಾರ ತೆರಿಗೆ ಸಂಗ್ರಹವನ್ನು ಉತ್ತಮ ರೀತಿಯಲ್ಲಿ ಮಾಡುತ್ತಿದೆ. ಜಿಎಸ್ ಟಿ ಸಂಗ್ರಹದಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದೆ ಎಂದು ಹೇಳಿದರು.

ಜಿಎಸ್‌ಟಿ ನೊಟೀಸ್ ಗಳನ್ನು ನಿಯಮಾನುಸಾರವಾಗಿಯೇ ನೀಡಲಾಗಿದೆ. ಆದರೆ ವ್ಯಾಪಾರಿಗಳಿಗೆ ಪರಿಹಾರ ತೆರಿಗೆ ಪಾವತಿಸಲು ಅವಕಾಶ ನೀಡಬೇಕು. ಮಧ್ಯವರ್ತಿಗಳಿಗೆ ಅವಕಾಶ ನೀಡದೆ, ವ್ಯಾಪಾರಿಗಳು ನೇರವಾಗಿ ಇಲಾಖೆ ಸಂಪರ್ಕಿಸಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಕೆಲವು ಪ್ರತಿನಿಧಿಗಳು ಮನವಿ ಮಾಡಿದ್ದಾರೆ. ಸಣ್ಣ ವ್ಯಾಪಾರಿಗಳಿಗೆ ನೆರವಾಗುವಂತೆ ಸಹಾಯವಾಣಿ ಆರಂಭಿಸಬೇಕು. ಜಿಎಸ್‌ಟಿ ಕುರಿತು ಸರಿಯಾಗಿ ಮಾಹಿತಿ ಇಲ್ಲದ ಕಾರಣ ಗೊಂದಲ ಉಂಟಾಗಿದೆ. ಜಾಗೃತಿ ಕಾರ್ಯಕ್ರಮ ಕೈಗೊಳ್ಳಬೇಕು. ಒಂದು ಬಾರಿಗೆ ಹಳೆಯ ಬಾಕಿಯನ್ನು ಮನ್ನಾ ಮಾಡಬೇಕು ಎಂದು ಮನವಿ ಸಲ್ಲಿಸಿದ್ದಾರೆ. ಯುಪಿಐ ಅಡಿ ರೂ. 40 ಲಕ್ಷಕ್ಕೂ ಅಧಿಕ ವಹಿವಾಟು

(2ನೇ ಪುಟ ನೋಡಿ)

## ಅಳಿವಿನ ಅಂಚಿನಲ್ಲಿದೆ ಜಾನಪದ ಮೂಲ ಸಂಸ್ಕೃತಿ: ಎಸ್‌ಪಿ ಪ್ರದೀಪ ಗುಂಟಿ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.23 : ಮೊಬೈಲ್ ಬಳಕೆ ಪ್ರಾರಂಭವಾದ ನಂತರ ನಮ್ಮ ಜಾನಪದ ಮೂಲ ಸಂಸ್ಕೃತಿ ಮರೆತು ಹೋಗಿದೆ. ಮಕ್ಕಳಿಗೆ ಶಾಲೆಯಲ್ಲಿ ಗುರುಗಳು, ಮನೆಯಲ್ಲಿ ಪಾಲಕರು ಮಕ್ಕಳ ಭವಿಷ್ಯದ ಹಿತದೃಷ್ಠಿಯಿಂದ ಕಾರ್ಯಪ್ರವೃತ್ತರಾಗಬೇಕು. ಮಕ್ಕಳಿಗೆ ಉತ್ತಮವಾದ ರೀತಿಯ ಸಂಸ್ಕೃತಿಯನ್ನು ಕಲಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ತಿಳಿಸಿದರು.

ಅವರು ಬುಧುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ

(2ನೇ ಪುಟ ನೋಡಿ)

## ರಾಯಚೂರ ಸಿಟಿಯಲ್ಲಿ ರೋಬೋಟಿಕ್ ಸ್ಕ್ಯಾವೆಂಜರ್ ಬಳಕೆಗೆ ಚಾಲನೆ




ಮಲ್ಲಮ್ಮನುಡಿ ವಾರ್ತೆ ರಾಯಚೂರು ಜು 23: ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ರೂಪಿಸಿರುವ ವಿಶ್ವದ ಮೊದಲ ರೋಬೋಟಿಕ್ ಸ್ಕ್ಯಾವೆಂಜರ್ ಬ್ಯಾಂಡಿಕೂಟ್ ಯಂತ್ರದ ಬಳಕೆಗೆ

(2ನೇ ಪುಟ ನೋಡಿ)

## ಶಿಷ್ಟಾಚಾರ ಉಲ್ಲಂಘನೆ; ಸುಳ್ಳು ಆರೋಪ



ಮಲ್ಲಮ್ಮನುಡಿ ವಾರ್ತೆ ಹುಮನಾಬಾದ್ : ಪಟ್ಟಣದ ತಹಸೀಲ್ ಕಚೇರಿಯಲ್ಲಿ ನಡೆದ ಲ್ಯಾಪ್ ಟಾಪ್ ವಿತರಣೆ ಕಾರ್ಯಕ್ರಮ ಶಾಸಕರಿಲ್ಲದೆ ಉದ್ಘಾಟನೆ ಮಾಡಿ ಶಿಷ್ಟಾಚಾರ ಉಲ್ಲಂಘನೆ ಮಾಡಲಾಗಿದೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಆರೋಪಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿದ ಅವರು, ತಹಸೀಲ್ ಕಚೇರಿಯಲ್ಲಿ ಜು.22ರಂದು ಬೆಳಗ್ಗೆ 11:30ಕ್ಕೆ ನಿಗದಿಪಡಿಸಿದ ಲ್ಯಾಪ್ ಟಾಪ್ ವಿತರಣೆ ಕಾರ್ಯಕ್ರಮಕ್ಕೆ ಶಾಸಕ ಡಾ. ಸಿದ್ದು ಪಾಟೀಲ್ ಅರ್ಧ ಗಂಟೆ ವಿಳಂಬ ಮಾಡಿ 12 ಗಂಟೆಗೆ ಬಂದಿದ್ದಾರೆ. ಆದ್ದರಿಂದ ನನ್ನ ಆರೋಗ್ಯ ತಪಾಸಣೆಗಾಗಿ ಸಮಯ ಕಾಯ್ದಿರಿಸಲಾಗಿತ್ತು. ಈ ಹಿನ್ನಲೆ ನಾನು ಔಪಚಾರಿಕವಾಗಿ ಲ್ಯಾಪ್ ಟಾಪ್ ವಿತರಣೆ ಮಾಡಿದ್ದೇನೆ. ಅದು ಹೇಗೆ ಶಿಷ್ಟಾಚಾರ ಉಲ್ಲಂಘನೆ ಆಗುತ್ತದೆ ಎಂದು ಪ್ರಶ್ನಿಸಿದರು.

## ಸೆ. 22ರಿಂದ ಜಾತಿ ಗಣತಿ ಮರು ಸಮೀಕ್ಷೆ

ಬೆಂಗಳೂರು:ಜು.23: ರಾಜ್ಯ ಸರ್ಕಾರ ಹೊಸದಾಗಿ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ(ಜಾತಿ ಗಣತಿ) ಯನ್ನು ಮತ್ತೊಮ್ಮೆ ನಡೆಸಲು ನಿರ್ಧರಿಸಿದ್ದು, ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ ಒಪ್ಪಿಗೆ ಸೂಚಿಸಿದ್ದಾರೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತ ಪೂರ್ವಭಾವಿ ಸಭೆಯಲ್ಲಿ ಸೆಪ್ಟಂಬರ್ 22ರಿಂದ ಅಕ್ಟೋಬರ್ 7ರವರೆಗೆ ಅಂದರೆ 15 ದಿನಗಳ ಕಾಲ ಸಮೀಕ್ಷೆ ನಡೆಸಲು ನಿರ್ಧರಿಸಲಾಗಿದೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಜಾತಿ ಗಣತಿ ಮರು ಸಮೀಕ್ಷೆ ನಡೆಸಲಿದ್ದು, ಅಕ್ಟೋಬರ್ ಅಂತ್ಯದೊಳಗೆ ವರದಿ ಸಲ್ಲಿಸುವಂತೆ ಸಿಎಂ ಸಿದ್ದರಾಮಯ್ಯ ಅವರು ಸೂಚಿಸಿದ್ದಾರೆ.

"ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದೆ. ಅದರಂತೆ, ರಾಜ್ಯದ ಎಲ್ಲಾ 7 ಕೋಟಿ ಜನರ ಸಮೀಕ್ಷೆಯನ್ನು ನಡೆಸಲಾಗುವುದು. ಜಾತಿ ತಾರತಮ್ಯವನ್ನು ಹೋಗಲಾಡಿಸುವುದು ಜನಗಣತಿಯ ಮುಖ್ಯ ಉದ್ದೇಶವಾಗಿದೆ" ಎಂದು ಸಭೆಯ ನಂತರ ಮುಖ್ಯಮಂತ್ರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಆರ್ಥಿಕ ಸ್ಥಿತಿ ಮತ್ತು ಭೂ ಮಾಲೀಕತ್ವದ ಬಗ್ಗೆ ಸಮಗ್ರ ಡೇಟಾವನ್ನು ಸಂಗ್ರಹಿಸುವುದು ಸಮೀಕ್ಷೆಯ ಗುರಿಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

"ಈ ಬಾರಿ ನಡೆಸುವ ಸಮೀಕ್ಷೆಯು ದೇಶದಲ್ಲಿ ಮಾದರಿ ಸಮೀಕ್ಷೆಯಾಗಬೇಕು". "ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ 15 ದಿನಗಳ ಕಾಲ ಸಮೀಕ್ಷೆ ನಡೆಸಲು ನಿರ್ಧರಿಸಲಾಗಿದೆ. ಅಕ್ಟೋಬರ್ ಅಂತ್ಯದೊಳಗೆ ಸಮೀಕ್ಷೆಯ ವರದಿಯನ್ನು ಸಲ್ಲಿಸಬೇಕು. ತರಬೇತಿ ಸೇರಿದಂತೆ ಸಮೀಕ್ಷೆಗೆ ಪೂರ್ವಭಾವಿ ಸಿದ್ಧತೆಗಳನ್ನು ಇಂದಿನಿಂದಲೇ ಪ್ರಾರಂಭಿಸಲು ಸೂಚನೆಗ ನೀಡಲಾಗಿದೆ" ಎಂದು ಅವರು ತಿಳಿಸಿದ್ದಾರೆ.

ಇಂದು ನಡೆದ ಸಭೆಯಲ್ಲಿ, ಸಮೀಕ್ಷೆಯ ಬಗ್ಗೆ ಯಾವುದೇ ದೂರುಗಳು ಬರದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು ಮತ್ತು ಯಾರೂ ಈ ಕಾರ್ಯದಿಂದ ಹೊರಗುಳಿಯದಂತೆ ನೋಡಿಕೊಳ್ಳಲಾಗುವುದು ಎಂದು ಸಿದ್ದರಾಮಯ್ಯ ಒತ್ತಿ ಹೇಳಿದ್ದಾರೆ.

(2ನೇ ಪುಟ ನೋಡಿ)

## ಬೀದರ ಸೇರಿ ರಾಜ್ಯಾದ್ಯಂತ ಭ್ರಷ್ಟ ಅಧಿಕಾರಿಗಳ ಮೇಲೆ ಲೋಕಾ ದಾಳಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.23: ಅಕ್ರಮ ಆಸ್ತಿ ಪ್ರಕರಣದಲ್ಲಿ ಕರ್ನಾಟಕ ಲೋಕಾಯುಕ್ತರು ಬುಧವಾರ ರಾಜ್ಯಾದ್ಯಂತ ಹಲವಾರು ಸರ್ಕಾರಿ ಅಧಿಕಾರಿಗಳ ಮೇಲೆ ದಾಳಿ ನಡೆಸಿದ್ದಾರೆ. ದಾಳಿ ಮೇಳೆ ಭ್ರಷ್ಟ ಅಧಿಕಾರಿಗಳ ಮನೆಯಲ್ಲಿ ಕೋಟ್ಯಾಂತರ ಮೌಲ್ಯದ ಚಿನ್ನಾಭರಣ ಮತ್ತು ಕಂತೆ ಕಂತೆ ನೋಟುಗಳನ್ನು ನೋಡಿ

(2ನೇ ಪುಟ ನೋಡಿ)

## ಸರ್ಕಾರದ ಗ್ಯಾರಂಟಿಗಳಿಂದ ಹೆಚ್ಚಾದ ತಲಾದಾಯ : ಶರಣ್ ಪ್ರಕಾಶ್ ಪಾಟೀಲ್



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು: ಜು.23:ನಮ್ಮ ಕಾಂಗ್ರೆಸ್ ಸರ್ಕಾರ ನೀಡಿರುವ ಗ್ಯಾರಂಟಿ ಯೋಜನೆಗಳಿಂದ ಕರ್ನಾಟಕದಲ್ಲಿ ತಲಾದಾಯ ಹೆಚ್ಚಾಗಿದೆ. ನಾವೀಗ ದೇಶಕ್ಕೆ ನಂಬರ್ ಒನ್ ಸ್ಥಾನದಲ್ಲಿದ್ದೇವೆ ಎಂದು ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ತಿಳಿಸಿದರು.

ಬೆಂಗಳೂರಿನಲ್ಲಿ ಮಾತಾಡಿದ ಅವರು, 50 ಸಾವಿರ ಕೋಟಿ ರೂ. ಹಣ ನೇರವಾಗಿ ಜನರಿಗೆ ತಲುಪುತ್ತಿದೆ. ಕರ್ನಾಟಕದಲ್ಲಿ ಜನಸ್ನೇಹಿ ಸರ್ಕಾರವಿದೆ. ಜನೋಪಯೋಗಿ ಆರ್ಥಿಕ ನೀತಿಗಳಿಂದ ಸುಧಾರಣೆಯಾಗುತ್ತಿದೆ. ನಮ್ಮ ಕಾಂಗ್ರೆಸ್ ಸರ್ಕಾರದ ಅಧಿಕಾರದಲ್ಲಿ ಭೂ ಸುಧಾರಣಾ ಕಾಯಿದೆ ಸೇರಿದಂತೆ ಒಳ್ಳೊಳ್ಳೆಯೋಜನೆಗಳು ಅನುಷ್ಠಾನಕ್ಕೆ ಬಂದಿವೆ. ಇದು ತಲಾದಾಯ ಹೆಚ್ಚಳಕ್ಕೆ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಕಾರಣವಾಗಿದೆ ಎಂದರು.

ಜಿಎಸ್‌ಟಿ ಕೇಂದ್ರದ ನಿರ್ಧಾರ:

ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ನೀಡಿರುವ ನಿರ್ಧಾರ ಕೇಂದ್ರ ಸರ್ಕಾರದ ನಿರ್ಣಯದಂತೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದರು. ಜಿಎಸ್‌ಟಿ ಮಂಡಳಿ ಮುಖ್ಯಸ್ಥರು, ಹಣಕಾಸು ಸಚಿವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೆಲವು ನಿರ್ಣಯಗಳನ್ನು ತೆಗೆದುಕೊಳ್ಳಲಾಗಿದೆ. ಅದರಂತೆ ಇಂಪ್ಲಿಮೆಂಟ್ ಮಾಡಲಾಗುತ್ತದೆ. ಜಿಎಸ್‌ಟಿ ಎಲ್ಲವನ್ನು ಕೇಂದ್ರ ಸರ್ಕಾರ ಕಲೆಕ್ಟ್ ಮಾಡುತ್ತದೆ, ಬಳಿಕ ರಾಜ್ಯಗಳಿಗೆ ಹಂಚಿಕೆ ಮಾಡುತ್ತದೆ. ನಾವು ಹೇಗೆ ನೋಟಿಸ್ ಕೊಡಲು ಸಾಧ್ಯ? ಎಲ್ಲ ನಿರ್ಧಾರವನ್ನು ಕೇಂದ್ರ ಸರ್ಕಾರವೇ ಮಾಡಿದೆ ಎಂದು ವಿವರಿಸಿದರು.

## ಪ್ರತಿಪಕ್ಷಗಳಿಂದ ಪ್ರತಿಭಟನೆ: 3ನೇ ದಿನವೂ ಸಂಸತ್ ಕಲಾಪ ಮುಂದೂಡಿಕೆ



ಮಲ್ಲಮ್ಮನುಡಿ ವಾರ್ತೆ ನವದೆಹಲಿ: ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಮತ್ತು ಆಪರೇಷನ್ ಸಿಂಧೂರ ಸೇರಿದಂತೆ ಹಲವಾರು ವಿಷಯಗಳ ಕುರಿತು ಚರ್ಚೆಗೆ ಒತ್ತಾಯಿಸಿ ಪ್ರತಿಪಕ್ಷಗಳು ಕಲಾಪಕ್ಕೆ ಅಡ್ಡಿಪಡಿಸುತ್ತಲೇ ಇದ್ದುದರಿಂದ ಸಂಸತ್ತಿನ ಉಭಯ ಸದನಗಳ ಕಲಾಪವನ್ನು ಬುಧವಾರ ಸತತ ಮೂರನೇ ದಿನವೂ ಮುಂದೂಡಲಾಯಿತು.

ಪ್ರಶ್ನೋತ್ತರ ಅವಧಿಯಲ್ಲಿ ಫಲಕಗಳನ್ನು ಹಿಡಿದು, ಘೋಷಣೆಗಳನ್ನು ಕೂಗುತ್ತಾ, ವಿರೋಧ ಪಕ್ಷದ ಸದಸ್ಯರು ಲೋಕಸಭೆಯಲ್ಲಿ ಸದನದ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದ್ದರಿಂದ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

ಇದಕ್ಕೂ ಮೊದಲು ಮಧ್ಯಾಹ್ನ 2 ಗಂಟೆಯವರೆಗೆ ಕಲಾಪ ಮುಂದೂಡಲಾಯಿತು. ಪ್ರತಿಪಕ್ಷಗಳ ಪ್ರತಿಭಟನೆ ಮತ್ತು ಘೋಷಣೆ ಕೂಗುವುದನ್ನು ಮುಂದುವರೆಸಿದವು. ಹೀಗಾಗಿ ಸ್ಪೀಕರ್ ಕಲಾಪವನ್ನು ಮುಂದೂಡಿದರು.

ವಿರೋಧ ಪಕ್ಷದ ಸದಸ್ಯರು "SIR WAPAS LO(Roll Back SIR)" ಎಂದು ಘೋಷಣೆಗಳನ್ನು ಕೂಗಿದರು.

ಪ್ರತಿಭಟನಾ ನಿರತ ಸಂಸದರು ಬೀದಿಗಳಲ್ಲಿ ವರ್ತಿಸಿದಂತೆ ಸದನದಲ್ಲಿ ವರ್ತಿಸುತ್ತಿದ್ದಾರೆ ಎಂದು ಸ್ಪೀಕರ್ ಓಂ ಬಿರ್ಲಾ ಕಿಡಿ ಕಾರಿದರು ಮತ್ತು ಅವರ ವಿರುದ್ಧ "ಕಠಿಣ" ಕ್ರಮ

(2ನೇ ಪುಟ ನೋಡಿ)

## ಉಪ ರಾಷ್ಟ್ರಪತಿ ಚುನಾವಣೆ ಪ್ರಕ್ರಿಯೆ ಆರಂಭ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.23: ಜಗದೀಪ್ ಧನಕರ್ ಅವರ ರಾಜೀನಾಮೆಯಿಂದ ತೆರವಾದ ಉಪ ರಾಷ್ಟ್ರಪತಿ ಸ್ಥಾನಕ್ಕೆ ಚುನಾವಣೆ ನಡೆಸುವ ಪ್ರಕ್ರಿಯೆಯನ್ನು ಭಾರತೀಯ ಚುನಾವಣಾ ಆಯೋಗ ಬುಧವಾರ ಪ್ರಾರಂಭಿಸಿದೆ.

ಗೃಹ ಸಚಿವಾಲಯ, ಜುಲೈ 22, 2025 ರಂದು ಹೊರಡಿಸಿದ ಗೆಜೆಟ್ ಅಧಿಸೂಚನೆಯ ಮೂಲಕ ಧನಕರ್ ಅವರ ರಾಜೀನಾಮೆ ಅಂಗೀಕರಿಸಿರುವುದನ್ನು ಅಧಿಕೃತವಾಗಿ ತಿಳಿಸಿದ್ದು, ಈ ಮೂಲಕ ಸಾಂವಿಧಾನಿಕ ಖಾಲಿ ಹುದ್ದೆಯನ್ನು ಭರ್ತಿ ಮಾಡಲು ಚುನಾವಣಾ ಪ್ರಕ್ರಿಯೆಗೆ ದಾರಿ ಮಾಡಿಕೊಟ್ಟಿದೆ ಎಂದು ಚುನಾವಣಾ ಆಯೋಗ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

"ಸಂವಿಧಾನದ 324ನೇ ವಿಧಿಯ ಪ್ರಕಾರ, ಉಪರಾಷ್ಟ್ರಪತಿ ಹುದ್ದೆಗೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಸಂಸ್ಕೃತಿ: ಎಸ್‌ಪಿ ಪ್ರದೀಪ ಗುಂಟಿ

ಬೀದರ ಹಾಗೂ ಸೆಂಟ್ ಜೋಸೆಫ್ ಕನ್ನಡ ಮಾಧ್ಯಮ ಪ್ರೌಢ ಶಾಲೆ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ಸೆಂಟ್ ಜೋಸೆಫ್ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಸಭಾಣಂಗಣದಲ್ಲಿ ಹಮ್ಮಿಕೊಂಡಿದ್ದ ಚಿಗುರು ಬಾಲ ಪ್ರತಿಭೆಗಳ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಬೀದರ ಅಪರ ಜಿಲ್ಲಾಧಿಕಾರಿಗಳಾದ ಸುರೇಖಾ ಮಾತನಾಡಿ, ಮಕ್ಕಳು ದೇಶದ ಸಂಪತ್ತು ಮಕ್ಕಳು ದೇಶಿ ಕಲೆಗಳತ್ತ ಗಮನ ಹರಿಸಬೇಕು, ಸಂಗೀತದಿಂದ ಮಾನಸಿಕ ನೆಮ್ಮದಿ ಹೊಂದಲು ಸಾಧ್ಯವಾಗುತ್ತದೆ. ಮಕ್ಕಳು ಸಂಗೀತ, ನೃತ್ಯ, ಜಾನಪದ ಕಲೆ ಮುಂತಾದವುಗಳಲ್ಲಿ ಓದಿನ ಜೊತೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಪ್ರಾಸ್ತಾವಿಕ ಮಾತನಾಡಿ, ಜಿಲ್ಲೆಯ ಚಿಗುರು ಕಾರ್ಯಕ್ರಮದಲ್ಲಿ 08 ರಿಂದ 14 ವರ್ಷ ವಯೋಮಾನದ ಪ್ರತಿಭಾವಂತ ಮಕ್ಕಳಿಗೆ ಅವಕಾಶ ನೀಡಲಾಗುವುದು. ಕಲೆ ಉಳಿಸಿ ಕಲೆ ಬೆಳೆಸುವ ನಿಟ್ಟಿನಲ್ಲಿ ಇಲಾಖೆಯಿಂದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಜಾನಪದ ಅಕಾಡೆಮಿ ವಿಜಯಕುಮಾರ ಸೋನಾರೆ ಮಾತನಾಡಿ, ಮಕ್ಕಳು ಇವತ್ತು ಪಾರಂಪಾರಿಕ ವಾದ್ಯಪರಿಕರಗಳನ್ನು ಬಳಸಿ ಸಂಗೀತ ವಿದ್ಯೆಯಬೇಕೆಂದು ತಿಳಿಸಿದರು.

ಚಿಗುರು ಕಾರ್ಯಕ್ರಮದಲ್ಲಿ ವಾದ್ಯಸಂಗೀತ ಕು.ಪ್ರತೀಕ ಸ್ವಾಮಿ ಮತ್ತು ತಂಡ, ಕು.ವೇದಾ ಮತ್ತು ತಂಡ, ಸುಗಮ ಸಂಗೀತ ಕು. ಪ್ರತೀಕ್ಷಾ ಮತ್ತು ತಂಡ ಸಮೂಹ ನೃತ್ಯ ಕು.ವಿದ್ವಾನ ಮತ್ತು ತಂಡ ಜಾನಪದ ಗಾಯನ ಕು.ಭಾಗ್ಯಲಕ್ಷ್ಮೀ ಮತ್ತು ತಂಡ ಕು.ಯುಕ್ತ ಅರಳಿ ಮತ್ತು ತಂಡ ಏಕಪಾತ್ರ ಅಭಿನಯ ಪಾತ್ರ ಕು.ದಿವ್ಯಾ (ಅಕ್ಕ ಮಹಾದೇವಿ ಪಾತ್ರ) ನಾಟಕ ಕು.ದೃಷ್ಠಿ ಮತ್ತು ತಂಡ ಚಿಟಗುಪ್ಪಾ ಅಂಗುಲಿಮಾಲಾ ಮನ ಪರಿವತನೆ ಕಲಾ ಪ್ರದರ್ಶನಗಳು ನೀಡಿದರು.

ಈ ಕಾರ್ಯಕ್ರಮದಲ್ಲಿ ಬೀದರ ಸೆಂಟ್ ಜೋಸೆಫ್ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಫಾದರ ವಿಲ್ಸನ್ ಫರ್ನಾರ್ಂಡೀಸ್, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಕರ್ನಾಟಕ ಜಾನಪದ ಅಕಾಡೆಮಿ ವಿಜಯಕುಮಾರ ಸೋನಾರೆ, ಬೀದರ ಜಿಲ್ಲೆಯ ಹಿರಿಯ ಜಾನಪದ ಕಲಾವಿದ ಶಂಭುಲಿಂಗ ವಾಲ್ದೊಡ್ಡಿ, ಪಶು ವೈದ್ಯಾಧಿಕಾರಿ ಗೌತಮ ಅರಳಿ, ಬಸವರಾಜ ಮೂಲಗೆ, ದೇವಿದಾಸ ಜೋಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿಗಳು, ಸೆಂಟ್ ಜೋಸೆಫ್ ಸಂಯುಕ್ತ ಪ.ಪೂ ಮಹಾವಿದ್ಯಾಲಯ ಬೀದರನ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸ್ಕ್ಯಾವೆಂಜರ್ ಬಳಕೆಗೆ ಚಾಲನೆ

ರಾಯಚೂರ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಜುಲೈ 23ರಂದು ಚಾಲನೆ ನೀಡಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ಪಾಲಿಕೆಯ ಕಚೇರಿ ಮುಂದಿನ ರಸ್ತೆಯಲ್ಲಿನ ಮ್ಯಾನ್‌ಹೋಲ್‌ನ್ನು ನೂತನ ರೋಬೋಟಿಕ್ ಸ್ಕ್ಯಾವೆಂಜರ್ ಯಂತ್ರದ ಮೂಲಕ ಶುಚಿಗೊಳಿಸುವುದನ್ನು ಖುದ್ದು ವೀಕ್ಷಣೆ ನಡೆಸಿ ಮಾತನಾಡಿದ ಆಯುಕ್ತರು, ಕರ್ನಾಟಕ ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿ ಈ ನೂತನ ಯಂತ್ರವನ್ನು ಬಳಕೆಗೆ ತಂದ ಹೆಗ್ಗಳಿಕೆಗೆ ರಾಯಚೂರ ಮಹಾನಗರ ಪಾಲಿಕೆಯು ಪಾತ್ರವಾಗಿದೆ. ಸಾರ್ವಜನಿಕ ಸೇವಾ ಕಾರ್ಯಗಳನ್ನು ಸುಧಾರಿಸುವಲ್ಲಿ ಹಾಗೂ ಸುರಕ್ಷತೆಯನ್ನು ಖಚಿತಪಡಿಸುವಲ್ಲಿ ಈ ಯಂತ್ರವು ಪ್ರಮುಖ ಪಾತ್ರ ವಹಿಸುತ್ತದೆ. ಮತ್ತು ಪ್ರತಿಯೊಬ್ಬ ವ್ಯಕ್ತಿಯ ಘನತೆಯನ್ನು ಎತ್ತಿಹಿಡಿಯುವಲ್ಲಿ ಹೊಸ ಯಂತ್ರವನ್ನು ಬಳಸಿಕೊಂಡ ಕೀರ್ತಿಗೆ ರಾಯಚೂರು ಮಹಾನಗರ ಪಾಲಿಕೆಯು ಪಾತ್ರವಾಗಿದೆ ಎಂದು ಹೇಳಲು ತಮಗೆ ಸಂತಸವಾಗುತ್ತಿದೆ ಎಂದು ತಿಳಿಸಿದರು.

ರಾಯಚೂರನ್ನು ಸ್ವಚ್ಛ, ಸುರಕ್ಷಿತ ಮತ್ತು ಸ್ಮಾರ್ಟ್ ನಗರ ಮಾಡಬೇಕು ಎಂಬುದು ನಮ್ಮ ಗುರಿಯಾಗಿದೆ. ಈ ದಿಶೆಯಲ್ಲಿ ನಾವು ಹೊಸ ಹೊಸ ಪ್ರಯೋಗ ಮಾಡುತ್ತಿದ್ದೇವೆ. ಹಸ್ತಚಾಲಿತ ಸ್ಕ್ಯಾವೆಂಜಿಂಗ್ ದುರಾವಸ್ಥೆಯನ್ನು ನಿರ್ಮೂಲನೆ ಮಾಡುವುದು ಮತ್ತು ಕಾರ್ಮಿಕರ ಜೀವ ರಕ್ಷಣೆ ಮಾಡಬೇಕು ಎಂಬುದಕ್ಕೆ ಮಹಾನಗರ ಪಾಲಿಕೆಯು ಬದ್ಧವಾಗಿದೆ. ಈ ಬ್ಯಾಂಡಿಕೂಟ್ ಬಳಕೆಯ ಮೂಲಕ ರಾಯಚೂರು ನಗರವು ಹೊಸ ನಾವೀನ್ಯತೆ ಹೊಂದಿ ನಮ್ಮ ರಾಜ್ಯದ ಹಾಗೂ ದೇಶದ ಬೇರೆ ಬೇರೆ ನಗರಗಳಿಗೆ ಮಾದರಿಯಾಗಿ ಹೊರಹೊಮ್ಮಲಿದೆ ಎಂದು ತಿಳಿಸಿದರು.

ಬ್ಯಾಂಡಿಕೂಟ್ ಕೇವಲ ಒಂದು ಯಂತ್ರವಲ್ಲ; ಇದು ಪ್ರಗತಿ, ಘನತೆ ಮತ್ತು ಸುರಕ್ಷತೆಯನ್ನು ಪ್ರತಿನಿಧಿಸುತ್ತದೆ. ಜವಾಬ್ದಾರಿಯುತ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ನೈರ್ಮಲ್ಯ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಭಾರತೀಯ ಡೀಪ್‌ಟೆಕ್ ಕಂಪನಿ ಜೆನ್‌ರೋಬೋಟಿಕ್ಸ್ ಅಭಿವೃದ್ಧಿಪಡಿಸಿದ ಬ್ಯಾಂಡಿಕೂಟ್ ಯಂತ್ರವು ಮಾರುಕಟ್ಟೆಯಲ್ಲಿ ಲಭ್ಯವಿರುವ ಅತ್ಯಂತ ಮುಂದುವರಿದ ಮತ್ತು ಪರಿಣಾಮಕಾರಿಯಾದ ಯಂತ್ರವಾಗಿದೆ. ಮಾನವ ಚಲನೆಯನ್ನು ಅನುಕರಿಸುವ ಈ ರೋಬೋಟಿಕ್ ಯಂತ್ರವು ತೋಳು ಬಳಸಿ ಮಾನವರಂತೆ ಕಾರ್ಯ ನಿರ್ವಹಿಸುತ್ತದೆ. ಮಾನವ ಪ್ರವೇಶವಿಲ್ಲದೆ ಮ್ಯಾನ್‌ಹೋಲ್‌ಗಳನ್ನು ನಿಖರವಾಗಿ ಮತ್ತು ಪರಿಣಾಮಕಾರಿಯಾಗಿ ಸ್ವಚ್ಛಗೊಳಿಸಲು ಅನುವು ಮಾಡಿಕೊಡುತ್ತದೆ. ಅಪಾಯಕಾರಿ ಅನಿಲಗಳನ್ನು ಪತ್ತೆಹಚ್ಚಲು ವಿಷಕಾರಿ ಅನಿಲ ಸಂವೇಧಕಗಳು ಮತ್ತು ಕಡಿಮೆ–ಬೆಳಕಿನ ಪರಿಸ್ಥಿತಿಗಳಲ್ಲಿ ಕಾರ್ಯಾಚರಣೆಗಳಿಗಾಗಿ ಮಹತ್ವದ ಕ್ಯಾಮೆರಾಗಳನ್ನು ಈ ರೋಬೋಟ್ ಹೊಂದಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಪ್ರಭಾರ ಅಧ್ಯಕ್ಷರಾದ ಸಾಜೀದ್ ಸಮೀರ್ ಹಾಗು ಪಾಲಿಕೆಯ ಸದಸ್ಯರು ಹಾಗೂ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿ, ಸಿಬ್ಬಂದಿ ಇದ್ದರು.

## ಬಾಕಿ ತೆರಿಗೆ ವಸೂಲಿ ಮಾಡಲ್ಲ: ಸಿಎಂ

ಮಾಡಿರುವವರಿಗೆ ಮಾತ್ರ ಜಿಎಸ್‌ಟಿ ನೋಟೀಸ್ ನೀಡಲಾಗಿದೆ ಎಂದು ಹೇಳಿದರು.

ಅಗತ್ಯ ವಸ್ತುಗಳಿಗೆ ತೆರಿಗೆ ವಿನಾಯಿತಿ:ಹಾಲು, ತರಕಾರಿ, ಮಾಂಸ, ಹಣ್ಣಿನಂತಹ ಅಗತ್ಯ ಆಹಾರ ವಸ್ತುಗಳಿಗೆ ತೆರಿಗೆ ವಿನಾಯಿತಿ ಇದ್ದು, ಅಂತಹ ವ್ಯಾಪಾರಿಗಳಿಗೆ ನೋಟೀಸ್ ಕೊಟ್ಟಿದ್ದರೂ, ಅವರಿಂದ ತೆರಿಗೆ ವಸೂಲು ಮಾಡುವುದಿಲ್ಲ. ಆದರೆ ಯಾರು ಕಾಯ್ದೆ ಪ್ರಕಾರ ತೆರಿಗೆ ಕಟ್ಟಬೇಕಾಗಿದೆಯೋ ಅವರು ಕಟ್ಟಬೇಕು. ಯಾರಿಗಾದರೂ ನಿಯಮಬಾಹಿರವಾಗಿ ಹಳೆಯ ತೆರಿಗೆ ಬಾಕಿಗಾಗಿ ನೀಡಿದ್ದರೆ ಆ ಹಳೆ ತೆರಿಗೆ ಬಾಕಿಯನ್ನು ಮನ್ನಾ ಮಾಡಲಾಗುವುದು. ಆದರೆ ಅವರೆಲ್ಲರೂ ಕಡ್ಡಾಯವಾಗಿ ಜಿಎಸ್ ಟಿ ನೋಂದಣಿಮಾಡಬೇಕು ಎಂದು ಹೇಳಿದರು.

ವ್ಯಾಪಾರಿಗಳಿಗೆ ನೆರವಾಗಲು ಸಹಾಯವಾಣಿ:

ರಾಜ್ಯದಲ್ಲಿ ಕೇವಲ 9 ಸಾವಿರ ವ್ಯಾಪಾರಿಗಳಿಗೆ ಕಳೆದ 2–3 ವರ್ಷಗಳ ಅವಧಿಗೆ ಸಂಬಂಧಿಸಿದಂತೆ 18 ಸಾವಿರ ನೋಟೀಸ್ ಜಾರಿಗೊಳಿಸಲಾಗಿದೆ. ವ್ಯಾಪಾರ ವಹಿವಾಟುಗಳನ್ನು ನಡೆಸಲು ಕಾನೂನುಬದ್ಧವಾಗಿ ಸರ್ಕಾರ ಎಲ್ಲಾ ನೆರವು ನೀಡಲಿದೆ. ತೆರಿಗೆ ಸರಿಯಾಗಿ ಪಾವತಿಸಲು ಸಹಕಾರ ನೀಡಲಿದೆ. ವ್ಯಾಪಾರಿಗಳಿಗೆ ತೊಂದರೆ ನೀಡಬೇಕೆಂಬುವುದು ಸರ್ಕಾರದ ಉದ್ದೇಶವಲ್ಲ. ಸರ್ಕಾರ ಸಣ್ಣ ವ್ಯಾಪಾರಿಗಳ ಪರವಾಗಿದೆ. ಸರ್ಕಾರ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಿದ್ದು, ಯಾರಿಗೂ ತೊಂದರೆಯಾಗದಂತೆ ಖಾತ್ರಿಪಡಿಸಲಾಗುವುದು. ವ್ಯಾಪಾರಿಗಳಿಗೆ ನೆರವು ನೀಡಲು ಈಗಲೇ ಸಹಾಯವಾಣಿ ಇದ್ದು, ಇದನ್ನು ಇನ್ನಷ್ಟು ಪರಿಣಾಮಕಾರಿ ಮಾಡಲಾಗುವುದು ಎಂದು ತಿಳಿಸಿದರು.

## ಜಾತಿ ಗಣತಿ ಮರು ಸಮೀಕ್ಷೆ

"ಕಾಂತರಾಜು ಆಯೋಗವು ಈ ಹಿಂದೆ 54 ಪ್ರಶ್ನೆಗಳನ್ನು ಸಿದ್ಧಪಡಿಸುವ ಮೂಲಕ ಸಮೀಕ್ಷೆಯನ್ನು ಕೈಯಾರೆ ನಡೆಸಿತ್ತು. ಈ ಬಾರಿ, ಸಮೀಕ್ಷೆಯಲ್ಲಿ ಹೆಚ್ಚಿನ ಅಂಶಗಳನ್ನು ಸೇರಿಸಲಾಗುವುದು ಮತ್ತು ಮೊಬೈಲ್ ಅಪ್ಲಿಕೇಶನ್ ಬಳಸಿ ಸಮೀಕ್ಷೆಯನ್ನು ನಡೆಸಲಾಗುವುದು" ಎಂದು ಅವರು ತಿಳಿಸಿದ್ದಾರೆ.

ನೆರೆಯ ತೆಲಂಗಾಣದಲ್ಲಿ ನಡೆಸಲಾದ ಸಾಮಾಜಿಕ ಮತ್ತು ಶೈಕ್ಷಣಿಕ ಜನಗಣತಿಯನ್ನು ಅಧ್ಯಯನ ಮಾಡಲು ಸೂಚನೆಗಳನ್ನು ನೀಡಲಾಗಿದೆ ಮತ್ತು ಸಮೀಕ್ಷೆಯ ಕಾರ್ಯವನ್ನು ಮೇಲ್ವಿಚಾರಣೆ ಮಾಡಲು ಉನ್ನತ ಮಟ್ಟದ ಸಮಿತಿ ರಚಿಸಲು ಸಹ ನಿರ್ಧರಿಸಲಾಗಿದೆ.

ಸಮೀಕ್ಷೆಯಲ್ಲಿ ಕೇಳಬೇಕಾದ ಪ್ರಶ್ನೆಗಳನ್ನು ಅಂತಿಮಗೊಳಿಸಲು ತಜ್ಞರ ಸಮಿತಿಯ ಸಹಾಯದಿಂದ ವೈಜ್ಞಾನಿಕ ಮತ್ತು ಪಾರದರ್ಶಕ ವಿಧಾನದ ಅಗತ್ಯವನ್ನು ಸಿಎಂ ಒತ್ತಿ ಹೇಳಿದ್ದಾರೆ.

ಸಮೀಕ್ಷೆಯ ಕಾರ್ಯಕ್ಕೆ 1.65 ಲಕ್ಷ ಗಣತಿದಾರರು ಸೇರಿದಂತೆ ಮಾನವ ಸಂಪನ್ಮೂಲದ ಅಗತ್ಯವಿದೆ ಎಂದ ಸಿಎಂ ಸಿದ್ದರಾಮಯ್ಯ, ಶಿಕ್ಷಕರ ಜೊತೆಗೆ, ಇತರ ಇಲಾಖೆಗಳ ಸಿಬ್ಬಂದಿಯನ್ನು ಸಹ ಹೊಸ ಸಮೀಕ್ಷೆಗೆ ಬಳಸಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಸಭೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ, ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯಕ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಮತ್ತು ಶಾಸಕ ಪೊನ್ನಣ್ಣ ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಸಂಸತ್ ಕಲಾಪ ಮುಂದೂಡಿಕೆ

ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು."ನಿಮ್ಮನ್ನು ಆಯ್ಕೆ ಮಾಡಿದ ಜನರ ಆಶಯಗಳು ಮತ್ತು ಆಕಾಂಕ್ಷೆಗಳನ್ನು ಪ್ರತಿಬಿಂಬಿಸುವ ರೀತಿಯಲ್ಲಿ ನೀವು ವರ್ತಿಸಬೇಕು. ಜನರ ಜೀವನವನ್ನು ಸುಲಭಗೊಳಿಸುವ ವಿಷಯಗಳ ಕುರಿತು ಚರ್ಚೆ ನಡೆಸಬೇಕು. ಆದರೆ ನೀವು ಸಂಸತ್ತಿನಲ್ಲೂ ಬೀದಿಯಲ್ಲಿ ವರ್ತಿಸುವಂತೆ ವರ್ತಿಸುತ್ತಿದ್ದೀರಿ" ಎಂದು ಸ್ಪೀಕರ್ ಆಕ್ರೋಶ ವ್ಯಕ್ತಪಡಿಸಿದರು.

ಇನ್ನು ಮೇಲ್ಮನೆಯಲ್ಲೂ ಇದೇ ರೀತಿಯ ದೃಶ್ಯಗಳು ಕಂಡುಬಂದವು. ಹೀಗಾಗಿ ರಾಜ್ಯಸಭಾ ಕಲಾಪವನ್ನು ಎರಡು ಬಾರಿ ಮುಂದೂಡಲಾಯಿತು. ನಂತರ ಮಧ್ಯಾಹ್ನ 2 ಗಂಟೆಗೆ ದಿನದ ಎಲ್ಲಾ ಕಲಾಪಗಳನ್ನು ಸ್ಥಗಿ–ತಗೊಳಿಸಿ ನಾಳೆಗೆ ಮುಂದೂಡಲಾಯಿತು.

ಬಿಹಾರದಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ, ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ ಕುರಿತು ಉಭಯ ಸದನಗಳಲ್ಲಿ ಚರ್ಚಿಸುವಂತೆ ಆಗ್ರಹಿಸಿ ಕಳೆದ ಮೂರು ದಿನಗಳಿಂದ ಪ್ರತಿಪಕ್ಷಗಳು ಪ್ರತಿಭಟಿಸುತ್ತಿವೆ.ಪ್ರತಿಪಕ್ಷಗಳ ಬೇಡಿಕೆಯನ್ನು ಪರಿಗಣಿಸುತ್ತಿಲ್ಲ. ಇದರಿಂದ ಕಲಾಪಕ್ಕೆ ಅಡ್ಡಿಯಾಗುತ್ತಿದೆ. ಕಲಾಪಕ್ಕೆ ಅಡ್ಡಿಯಾದರೆ, ಅದರ ಅತಿದೊಡ್ಡ ಫಲಾನುಭವಿ ಸರ್ಕಾರ ಎಂದು ತೃಣಮೂಲ ಕಾಂಗ್ರೆಸ್(ಟಿಎಂಸಿ) ಸಂಸದ ಡೆರೆಕ್ ಒ ಬ್ರಿಯಾನ್ ಹೇಳಿದ್ದಾರೆ.

## ಅಧಿಕಾರಿಗಳ ಮೇಲೆ ಲೋಕಾ ದಾಳಿ

ಲೋಕಾಯುಕ್ತ ಅಧಿಕಾರಿಗಳೇ ಶಾಕ್ ಆಗಿದ್ದಾರೆ.ಏಕಕಾಲಕ್ಕೆ ಬೆಂಗಳೂರು, ಶಿವಮೊಗ್ಗ, ಚಿಕ್ಕಮಗಳೂರು,ಆನೇಕಲ್, ಗದಗ, ಧಾರವಾಡ, ಕೊಪ್ಪಳ ಮತ್ತು ಕಲಬುರಗಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ದಾಳಿಗಳು ಬಿಬಿಎಂಪಿ ಗೋವಿಂದರಾಜನಗರದ ಸಹಾಯಕ ಎಂಜಿನಿಯರ್; ಸಾವಯವ ಕೃಷಿಯ ಸಹಾಯಕ ಸಂಶೋಧನಾ ನಿರ್ದೇಶಕ; ಪಟ್ಟಣ ಪುರಸಭೆಯ ಲೆಕ್ಕಪತ್ರ ಅಧಿಕಾರಿ, ಆನೇಕಲ್; ಪಟ್ಟಣ ಪುರಸಭೆಯಮುಖ್ಯ ಅಧಿಕಾರಿ; ಗದಗದಲ್ಲಿ ಪಟ್ಟಣ ಪೊಲೀಸ್ ಇನ್ಸ್‌ಪೆಕ್ಟರ್; ಧಾರವಾಡದಲ್ಲಿ ಮಲಪ್ರಭಾ ಯೋಜನೆಯ ಎಂಜಿನಿಯರ್;ಮತ್ತು ಕಲಬುರಗಿಯ ಆರ್‌ಡಿಪಿಆರ್‌ನ ಮಾಜಿ ಎಂಜಿನಿಯರ್ ಮತ್ತು ಕಲಬುರಗಿಯ ಪಿಡಿಒ ಅವರನ್ನು ಗುರಿಯಾಗಿರಿಸಿಕೊಂಡಿವೆ. ಬೆಂಗಳೂರಿನಲ್ಲಿರುವ ಐಎಎಸ್ ಅಧಿಕಾರಿ ಸೇರಿದಂತೆ ಹಲವಾರು ಸರ್ಕಾರಿ ಅಧಿಕಾರಿಗಳಮೇಲೆ ಕರ್ನಾಟಕ ಲೋಕಾಯುಕ್ತ ಬುಧವಾರ ರಾಜ್ಯಾದ್ಯಂತ ದಾಳಿ ನಡೆಸಿದ್ದು, ಅಕ್ರಮ ಆಸ್ತಿ ಪ್ರಕರಣಗಳಿಗೆ ಸಂಬಂಧಿಸಿದಂತೆಅವರ ನಿವಾಸಗಳ ಮೇಲೆ ದಾಳಿ ನಡೆಸಲಾಗಿದೆ. ಬೆಂಗಳೂರಿನಲ್ಲಿರುವ ಮೂವರುಸರ್ಕಾರಿ ಅಧಿಕಾರಿಗಳ ನಿವಾಸಗಳ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಬೆಂಗಳೂರು ನಗರದ ವಿಶೇಷ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಐಎಎಸ್ ಅಧಿಕಾರಿ ವಸಂತಿ ಅಮರ್, ಪಟ್ಟಣ ಯೋಜನಾ ಸಹಾಯಕ ನಿರ್ದೇಶಕಿ ಮಾರುತಿ ಬಾಗ್ಲಿ ಮತ್ತು ಬಿಬಿಎಂಪಿಯ ಕಾರ್ಯನಿರ್ವಾಹಕ ಎಂಜಿನಿಯರ್ ಯರಿಯಪ್ಪ ರೆಡ್ಡಿ ಅವರ ಮನೆಗಳ ಮೇಲೆ ದಾಳಿ ನಡೆಸಲಾಗಿದೆ. ವಸಂತಿ ಅಮರ್ ಸರ್ಕಾರಿ ಭೂಮಿಯನ್ನು ಅಕ್ರಮವಾಗಿ ಇತರರ ಹೆಸರಿಗೆ ವರ್ಗಾಯಿಸಿದ ಆರೋಪವಿದೆ. ಯರಿಯಪ್ಪ ರೆಡ್ಡಿ ಇತ್ತೀಚೆಗೆ 10 ಲಕ್ಷ ರೂ. ಲಂಚ ಸ್ವೀಕರಿಸುವಾಗ ಸಿಕ್ಕಿಬಿದ್ದಿದ್ದರು. ಎಸ್ಪಿ ವಂಶಿ ಕೃಷ್ಣ ನೇತೃತ್ವದ ಲೋಕಾಯುಕ್ತ ತಂಡವು ಆರೋಪಗಳ ತನಿಖೆ ನಡೆಸುತ್ತಿದೆ. ಮೂವರು ಅಧಿಕಾರಿಗಳ ನಿವಾಸಗಳಲ್ಲಿ ದಾಖಲೆಗಳನ್ನು ಪರಿಶೀಲಿಸುತ್ತಿದೆ. ಬಿಬಿಎಂಪಿ ಮತ್ತು ಬಿಡಿಎಯಲ್ಲಿ ಭ್ರಷ್ಟಾಚಾರ ಮತ್ತು ಅಕ್ರಮಗಳ ಮೂಲಕ ಅಧಿಕಾರಿಗಳು ಕೋಟ್ಯಂತರ ರೂಪಾಯಿಗಳನ್ನು ಸಂಗ್ರಹಿಸಿದ್ದಾರೆ ಎಂಬ ಆರೋಪವಿದೆ.ಲೋಕಾಯುಕ್ತ ಅಧಿಕಾರಿಗಳ ಪೈಕಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಸುನೀಲ್ ಕುಮಾರ್ ಅವರ ನಿವಾಸ ಮತ್ತು ಕಚೇರಿಯ ಮೇಲೆ ದಾಳಿ ನಡೆಸಲಾಗಿದೆ. ಲೋಕಾಯುಕ್ತ ಅಧಿಕಾರಿಗಳ ಪ್ರಕಾರ, ಸುನೀಲ್ ಕುಮಾರ್ ಅವರ ಕಲಬುರಗಿಯಲ್ಲಿರುವ ನಿವಾಸ ಮತ್ತು ಕಚೇರಿಯ ಮೇಲೆ ದಾಳಿ ನಡೆಸಲಾಗಿದೆ. ಲೋಕಾಯುಕ್ತ ಅಧಿಕಾರಿಗಳುಶೋಧದ ಸಮಯದಲ್ಲಿ ದೊರೆತ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಸುನೀಲ್ ಕುಮಾರ್ ಕಲಬುರಗಿ ಜಿಲ್ಲಾ ಪಂಚಾಯತ್‌ನ ಎಂಜಿನಿಯರಿಂಗ್ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.ಲೋಕಾಯುಕ್ತರ ಪ್ರಕಾರ, ಬೀದರ್‌ನ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕ ಮಾರುತಿ ಬಾಗ್ಲಿ ಅವರ ನಿವಾಸದಲ್ಲಿ ಚಿನ್ನಾಭರಣಗಳು, ನಗದು, ಕೈಗಡಿಯಾರಗಳು ಮತ್ತು ಇತರ ವಸ್ತುಗಳು ಪತ್ತೆಯಾಗಿವೆ. ಲೋಕಾಯುಕ್ತ ಉಪ ಎಸ್‌ಪಿ ಹನುಮಂತರಾಯ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಲೋಕಾಯುಕ್ತ ತಂಡವು ಬೀದರ್‌ನ ಜೈಲ್ ಕಾಲೋನಿಯ ಎಸ್‌ಬಿಪಿ ನಗರದಲ್ಲಿರುವ ಅವರ ನಿವಾಸದ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸುತ್ತಿದೆ.ಲೋಕಯುಕ್ತರು ಕೊಪ್ಪಳದ ಎರಡು ಸ್ಥಳಗಳ ಮೇಲೆ ದಾಳಿ ನಡೆಸಿ ಶೇಕು ಚೌಹಾಣ್ ಅವರಿಗೆ ಸೇರಿದ ಎರಡು ಮನೆಗಳು, ಒಂದು ಅಭಿಷೇಕ್ ಲೇಔಟ್ ಮತ್ತು ಇನ್ನೊಂದು ಕೀರ್ತಿ ಕಾಲೋನಿಯಲ್ಲಿರುವ ಮನೆಗಳ ಮೇಲೆ ದಾಳಿ ನಡೆಸಿದ್ದಾರೆ. ಬಳ್ಳಾರಿಯ ಕಲ್ಲುಕಂಬ ಎಂಬ ಅವರ ಊರಿನಲ್ಲಿರುವ ಮನೆಯಲ್ಲಿ ಕೆಲವು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಕೊಪ್ಪಳದಲ್ಲಿರುವ ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ತೆರಿಗೆ ಉಪನಿರ್ದೇಶಕ ಶೇಕು ಚೌಹಾಣ್ ಅವರ ಮನೆ ಮತ್ತು ಕಚೇರಿಯ ಮೇಲೂ ಲೋಕಾಯುಕ್ತರು ದಾಳಿ ನಡೆಸಿದ್ದಾರೆ. ಆದಾಯ ಮೂಲಗಳನ್ನು ಮೀರಿ ಆಸ್ತಿ ಸಂಪಾದಿಸಿದ ಆರೋಪವಿದೆ. ಅಧಿಕಾರಿಗಳು 52 ಲಕ್ಷ ರೂ. ನಗದು, 1 ಕೆಜಿ ಚಿನ್ನ, 3 ಕೆಜಿ ಬೆಳ್ಳಿ ಮತ್ತು 13 ನಿವೇಶನಗಳಿಗೆ ಸಂಬಂಧಿಸಿದ ದಾಖಲೆಗಳು, 6.5 ಎಕರೆ ಭೂಮಿ ಮತ್ತು ಮೂರು ಮನೆಗಳ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

## ಚುನಾವಣೆ ಪ್ರಕ್ರಿಯೆ ಆರಂಭ

ಚುನಾವಣೆ ನಡೆಸಲು ಚುನಾವಣಾ ಆಯೋಗಕ್ಕೆ ಅಧಿಕಾರವಿದೆ. ಈ ಚುನಾವಣೆಗಳು 1952 ರ ರಾಷ್ಟ್ರಪತಿಮತ್ತು ಉಪರಾಷ್ಟ್ರಪತಿ ಚುನಾವಣಾ ಕಾಯ್ದೆ ಮತ್ತು 1974 ರ ರಾಷ್ಟ್ರಪತಿ ಮತ್ತು ಉಪರಾಷ್ಟ್ರಪತಿ ಚುನಾವಣಾ ನಿಯಮಗಳಿಂದ ನಿಯಂತ್ರಿಸಲ್ಪಡುತ್ತವೆ" ಎಂದು ಚುನಾವಣಾ ಆಯೋಗ ತಿಳಿಸಿದೆ.ಉಪ ರಾಷ್ಟ್ರಪತಿ ಚುನಾವಣೆಗೆ ಪೂರ್ವಸಿದ್ಧತಾ ಕಾರ್ಯಗಳು ಈಗಾಗಲೇ ಆರಂಭವಾಗಿವೆ ಮತ್ತು ಚುನಾವಣೆಗೆ ಅಧಿಕೃತ ವೇಳಾಪಟ್ಟಿಯನ್ನು "ಚುನಾವಣಾ ಪೂರ್ವ ಚಟುವಟಿಕೆಗಳು ಪೂರ್ಣಗೊಂಡ ನಂತರ ಶೀಘ್ರದಲ್ಲೇ ಪ್ರಕಟಿಸಲಾಗುವುದು" ಎಂದು ಚುನಾವಣಾ ಆಯೋಗ ತಿಳಿಸಿದೆ.ಉಪ ರಾಷ್ಟ್ರಪತಿಯನ್ನು ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರು ಆಯ್ಕೆ ಮಾಡುತ್ತಾರೆ. ಮೇಲ್ಮನೆಯ ನಾಮನಿರ್ದೇಶಿತ ಸದಸ್ಯರು ಸಹ ಮತ ಚಲಾಯಿಸಲು ಅರ್ಹರಾಗಿರುತ್ತಾರೆ.ಬಿಜೆಪಿ ನೇತೃತ್ವದ ಎನ್?ಡಿಎ ಲೋಕಸಭೆಯಲ್ಲಿ 293 ಸದಸ್ಯರ ಬೆಂಬಲವನ್ನು ಹೊಂದಿದೆ( 542 ಸದಸ್ಯರು) ರಾಜ್ಯಸಭೆಯಲ್ಲಿ 129 ಸದಸ್ಯರ ಬೆಂಬಲವನ್ನು ಹೊಂದಿದೆ. ಇನ್ನು ನಾಮನಿರ್ದೇಶಿತ ಸದಸ್ಯರುಗಳನ್ನು ಸೇರಿಸಿದರೆ, ಆಡಳಿತ ಒಕ್ಕೂಟವು 786 ಸದಸ್ಯರಲ್ಲಿ 422 ಸದಸ್ಯರ ಬೆಂಬಲವನ್ನು ಹೊಂದಿದೆ.

## ಪದವಿ ಪೂರ್ವ ಕಾಲೇಜು ಕೊಠಡಿಗಳ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜು.23:ಕುಕನೂರ ಇಂದು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಕೊಠಡಿಗಳ ಉದ್ಘಾಟನೆಯನ್ನು ಸಿಎಂ ಆರ್ಥಿಕ ಸಲಹೆಗಾರ ಹಾಗೂ ಶಾಸಕ ಬಸವರಾಜ ರಾಯರೆಡ್ಡಿ ಅವರು ನೇರವರಿಸಿ, ಬೇರೆ ಕೆಲಸ ನಿಮಿತ್ಯ ರಾಯರೆಡ್ಡಿಯವರು ವೇದಿಕೆ ಕಾರ್ಯಕ್ರಮವನ್ನು ಮಾಡದೆ ನಿರ್ಗಮಿಸಿದರು.

ಈ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಹಿರಿಯ ಮುಖಂಡ ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಯಂಕಣ್ಣ ಯರಾಶಿ, 'ದೇಶದಲ್ಲಿ ಯಲಬುರ್ಗಾ ವಿಧಾನಸಭಾ ಕ್ಷೇತ್ರವು ಶಿಕ್ಷಣ, ಆರೋಗ್ಯ, ರಸ್ತೆಗಳು ಜೊತೆಗೆ ಮೂಲಭೂತ ಸೌಕರ್ಯಗಳಲ್ಲಿ ಯಾವುದೇ ರೀತಿ ರಾಜಿ ಇಲ್ಲದೆ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ ಇಂತಹ ಕ್ರಿಯಾಶೀಲ ಶಾಸಕರನ್ನು ಪಡೆದಿದ್ದು ನಾವೇ ಧನ್ಯರು ಎಂದು ಹೇಳಿದರು.

ಇದೇ ವೇಳೆಯಲ್ಲಿ ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದು ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.

ಈ ವೇಳೆಯಲ್ಲಿ ತಹಶೀಲ್ದಾರ್ ಬಸವರಾಜ್ ತೇನಳ್ಳಿ,ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ ಪಾಟೀಲ್ ಬಿರಾದಾರ್, ಸಿಪಿಐ ಮೌನೇಶ್ ಪಾಟೀಲ್, ಪಿಎ??? ಟಿ ಗುರುರಾಜ್, ಪಟ್ಟಣ ಪಂಚಾಯತ್ ಅಧ್ಯಕ್ಷೆ ಲಲಿತಮ್ಮ ಯಡಿಯಾಪೂರ್, ಪಟ್ಟಣ ಪಂಚಾಯತ ಉಪಾಧ್ಯಕ್ಷ ಪ್ರಶಾಂತ್ ಆರ್‌ಬೇಳ್ಳಿನ್,ಗಗನ ನೋಟಗಾರ,ಪಟ್ಟಣಪಂಚಾಯತ ಮುಖ್ಯಾಧಿಕಾರಿ ನಬಿಬ್‌ಸಾಬ್ ಕಂದಗಲ್, ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕ ಜಗದೀಶ್ ಜಿ.ಹೆಚ್,ಕಾಲೇಜು ಪ್ರಾಂಶುಪಾಲ ಈಶಪ್ಪ ಮಳಗಿ, ಇಲಾಖೆಯ ಅಧಿಕಾರಿಗಳು, ತಾಲೂಕಾಗ್ಯಾರೆಂಟಿಯೋಜನೆಗಳ ಅನುಷ್ಠನ ಸಮಿತಿ ತಾಲೂಕಾ ಅಧ್ಯಕ್ಷ ಸಂಗಮೇಶ್ ಗುತ್ತಿ, ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹನಮಂತಗೌಡ ಚೆ–ಂಡೂರು, ರೈಮಾನ್ ಸಾಬ್ ಮಕಪ್ಪನವರ್, ಕಾರ್ತಿಕ್ ಜಾದವ್, ಮಹಮ್ಮದ್ ರಫಿ ಮಂಡಲಗಿರಿ,ಹಾಗೂ ಇತರರು ಹಾಜರಿದ್ದರು.

## ಮಕ್ಕಳ ವ್ಯಕ್ತಿತ್ವ ರೂಪಿಸುವಲ್ಲಿ ಕಲೆ ನೃತ್ಯ ಸಂಗೀತದ ಪಾತ್ರ ಮಹತ್ವದ್ದು: ಸ್ವಾಮಿರಾವ ಕುಲಕರ್ಣಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.23:ನುಪುರ ಸಂಸ್ಕೃತಿ ನೃತ್ಯ ಮತ್ತು ಸಂಗೀತ ಸಂಸ್ಥೆ ಕಲಬುರಗಿ ಹಾಗೂ ಸಂಸ್ಕಾರ ಭಾರತಿ ಕಲಬುರಗಿ ವತಿಯಿಂದ ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸಂಜೆ ಗೆಜ್ಜೆಪೂಜೆ ಮತ್ತು ಗುರುವಂದನಾ ಕಾರ್ಯಕ್ರಮ ಜರುಗಿತು. ದೀಪ ಪ್ರಜ್ವಲಿಸುವ ಮೂಲಕ ಹಿರಿಯ ಸಾಹಿತಿ ಡಾ ಸ್ವಾಮಿರಾವ್ ಕುಲಕರ್ಣಿ ಅವರು ಉದ್ಘಾಟಿಸಿದರು. ನಂತರ ನಟರಾಜನ ಮೂರ್ತಿಗೆ ಪೂಜೆ ಸಲ್ಲಿಸಲಾಯಿತು. ಮಕ್ಕಳು ನೃತ್ಯ ಸಂಗೀತ ಕಲಿಯಬೇಕು ಅವುಗಳಿಂದ ಒಳ್ಳೆಯ ಸಂಸ್ಕಾರ ಬರುವುದಲ್ಲದೆ ನಮ್ಮ ಸಂಸ್ಕೃತಿಯನ್ನು ಮುಂದುವರಿಸಿಕೊಂಡು ಹೋಗಬಹುದು ನೃತ್ಯ ನಮ್ಮನ್ನು ಆರೋಗ್ಯವಾಗಿ ಇರಿಸುತ್ತದೆ. ಅಲ್ಲದೆ ನೈತಿಕ ಮೌಲ್ಯಗಳನ್ನು ಒಳಗೊಂಡ ವ್ಯಕ್ತಿತ್ವವನ್ನು ರೂಪಿಸುತ್ತದೆ ಎಂದು ಸ್ವಾಮಿರಾವ ಕುಲಕರ್ಣಿ ಅವರು ನಿಜ ಜೀವನದಲ್ಲಿ ನಡೆದ ಕೆಲವು ಘಟನೆಗಳನ್ನು ಹೇಳುವ ಮುಖಾಂತರ ಮಕ್ಕಳಿಗೆ ಪ್ರೇರಣೆ ಪ್ರೋತ್ಸಾಹದ ನುಡಿಗಳನ್ನು ಮಾತನಾಡಿದರು. ಮುಖ್ಯ ಅತಿಥಿ ಕೇಂದ್ರೀಯ ವಿಶ್ವವಿದ್ಯಾಲಯದ ಸಂಗೀತ ವಿಭಾಗದ ಪ್ರಾಧ್ಯಾಪಕ ಡಾ ಸ್ವಪ್ನಿಲ್ ಚಾಪೇಕರ ಅವರು ಮಕ್ಕಳ ನೃತ್ಯವನ್ನು ಪ್ರಶಂಸಿಸಿದರು. ಸಂಸ್ಕಾರ ಭಾರತೀಯ ಅಧ್ಯಕ್ಷೆ ಲೀಲಾವತಿ ಕುಲಕರ್ಣಿ ಅವರು ಸಂಸ್ಕಾರ ಭಾರತೀಯ ಉದ್ದೇಶಗಳನ್ನು ಹಾಗೂ ನೃತ್ಯ ಸಂಗೀತದ ಮಹತ್ವವನ್ನು ತಿಳಿಸಿದರು. ಭರತನಾಟ್ಯ ಪರೀಕ್ಷೆಯಲ್ಲಿ ಉತ್ತಮ(Rank)ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಾದ ಪ್ರಾರ್ಥನಾ ಕುಲಕರ್ಣಿ, ಅಕ್ಷರಾ ಎಲೆಮೇಲೆ, ಸನ್ನಿಧಿ ಜೋಶಿ ಹಾಗೂ ಶ್ರವಂತಿ ಜೋಶಿ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಸಂಗೀತ ನೃತ್ಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಶ್ರುತಿ ಸಾಗರ್, ಸುರೇಖಾ ಧೋಟಿಹಾಳಕರ ಹಾಗೂ ಪತ್ರಕರ್ತ ನಾರಾಯಣ ಜೋಷಿ ಅವರಿಗೆ ಸನ್ಮಾನಿಸಲಾಯಿತು. ನಾಲ್ಕು ಚಕ್ರ ತಂಡದ ವತಿಯಿಂದ ಎಲ್ಲಾ ಮಕ್ಕಳಿಗೆ ಸಸಿಗಳನ್ನು ವಿತರಿಸಲಾಯಿತು. ಸಂಸ್ಕಾರ ಭಾರತೀಯ ಪ್ರಧಾನ ಕಾರ್ಯದರ್ಶಿ ಡಾ.ಅಂಬುಜಾ ಮಳಖೇಡಕರ, ನುಪುರ ಸಂಸ್ಥೆಯ ನಿರ್ದೇಶಕಿ ಹಾಗೂ ಸ್ಥಾಪಕಿ ಸೌಖ್ಯ ಪ್ರವೀಣ್ ಕುಲಕರ್ಣಿ, ದತ್ತಾತ್ರೇಯ ಸಬ್ನವೀಸ , ಸುನಂದಾ ಸಬ್ನವೀಸ, ಸುವಿಧಾ ಸಬ್ನವೀಸ್, ವರಲಕ್ಷ್ಮಿ ಕುಲಕರ್ಣಿ, ಕು.ಲಾಸ್ಯ ಕುಲಕರ್ಣಿ ಹಾಗೂ ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳು, ಪಾಲಕರು ಉಪಸ್ಥಿತರಿದ್ದರು. ಸನ್ನಿಧಿ ಜೋಶಿ ಪ್ರಾರ್ಥನೆ ಗೀತೆ ಹಾಡಿದಳು. ಅಕ್ಷರ ಎಲ್ಲರನ್ನು ಸ್ವಾಗತಿಸಿದರು. ಶ್ರವಂತಿ ವಂದಿಸಿದಳು. ನುಪುರ ಸಂಸ್ಥೆಯ ವಿದ್ಯಾರ್ಥಿಗಳು ನೃತ್ಯವನ್ನು ಪ್ರದರ್ಶಿಸಿದರು.



## ಅಭಿವೃದ್ಧಿ ಕೆಲಸ ಮಾಡಿದ ಸಚಿವ ದರ್ಶನಾಪುರಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಸುರಪುರ ತಾಲೂಕಿನ :ಕೆಂಭಾವಿ ಯಾದಗಿರಿ ಜಿಲ್ಲಾ ನೂತನ ಕಾಂಗ್ರೆಸ್ ಪಕ್ಷದ ಉಪಾಧ್ಯಕ್ಷರಾಗಿ ನೇಮಕವಾದ ಮಹಿಪಾಲರೆಡ್ಡಿ ಎಸ್ ಡಿಗ್ಗಾವಿ ಕೆಂಭಾವಿ ಅವರು ಇಂದು ಶಹಾಪುರ ನಗರದ ಸಮೀಪ ಇರುವ ಭೀಮರಾಯನ ಗುಡಿ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಸರ್ಕಾರದ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ ಶರಣಬಸಪ್ಪಗೌಡ ದರ್ಶನಾಪುರ ಅವರಿಗೆ ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ಸಿದ್ದನಗೌಡ ಪಾಟೀಲ ಕೆಂಭಾವಿ, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ವಾಮನರಾವು ದೇಶಪಾಂಡೆ, ಪುರಸಭೆ ಅಧ್ಯಕ್ಷ ರಹೀಮಾನ ಪಟೇಲ್ ಯಲಗೋಡ, ಡಿಸಿಸಿ ಬ್ಯಾಂಕ್ ನಿರ್ದೇಶಕ ಬಾಪುಗೌಡಪಾಟೀಲ,ಖಾಜಾಪಟೇಲ್ ಕಾಚೂರ,ನಗರ ಆಶ್ರಯ ಸಮಿತಿ ಅಧ್ಯಕ್ಷ ಶರಣಬಸ್ಸು ಕಾಕ ಡಿಗ್ಗಾವಿ, ಮುದಿಗೌಡ ಮಾಲಿಪಾಟೀಲ್,ಸಾಹೇಬಲಾಲ ಆಂದೇಲಿ,ರೇವಣಸಿದ್ದಪ್ಪಯಾಳಗಿ, ಶಿವರಾಜಬೂದುರ್,ರಾಮನಗೌಡ ಪೋಲಿಸ್‌ಪಾಟೀಲ,ಭೀಮನಗೌಡ ಕಾಚಾಪುರ ದೇವಪ್ಪ ಮ್ಯಾಗೇರಿ ಪರಶುರಾಮ ಬಳಬಟ್ಟಿ ಹಾಗೂ ಪುರಸಭೆ ಸದಸ್ಯರು ಹಾಗೂ ನಾಮನಿರ್ದೇಶನ ಸದಸ್ಯರು ಮತ್ತು ಆಶ್ರಯ ಸಮಿತಿ ಸದಸ್ಯರು ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು ಇದ್ದರು..



# ಯಾದಗಿರಿ ಟು ಹೈದರಾಬಾದ್ ಮುಖ್ಯ ರಸ್ತೆ ಸರಿಪಡಿಸಿ ಭೀಮರಾಯ.ಯಲ್ಹೇರಿ

ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್. ಜು. 23. ಯಾದಗಿರಿಯಿಂದ ಗುರುಮಠಕಲ್ ಹೋಗುವ ಹೈದ್ರಾಬಾದ್ ನ ರಾಜ್ಯ ಹೆದ್ದಾರಿ

ಅರಿಕೇರಿ ಯಿಂದ ಪಸ್ಪುಲ್ ವರಿಗೂ ಸುಮಾರು 4ಕಿ. ಮೀ ರಸ್ತೆ ಸಂಪೂರ್ಣ ಹಾಳಾಗಿದ್ದು ವಾಹನವಾಹನ ಸಂಚಾರ ಮಾಡಲು ತುಂಬಾ ತೊಂದರೆಯಾಗಿದೆ ಕೈಯಲ್ಲಿ ಜೀವ ಹಿಡಿದು ಹೋಡಾಡುವ ಪರಿಸ್ಥಿತಿ ಎದುರಾಗಿದೆ, ಅಲ್ಲದೆ ಈ ರಸ್ತೆಯು ಆಂಧ್ರ ಪ್ರದೇಶ, ತೆಲಂಗಾಣ ರಾಜ್ಯಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿದೆ , ಈ ಮಾರ್ಗ ಮಧ್ಯದಲ್ಲಿ ದಿನೆ ದಿನೆ ವಾಹನಗಳು ಹೊಡಾಡುತ್ತವೆ ವಾಹನಗಳು ಅಲೆದಾಡುತ್ತವೆ,



ಶೀಘ್ರದಲ್ಲಿ ರಸ್ತೆ ಸರಿಪಡಿಸಿ ಜನರ ಓಡಾಟಕ್ಕೆ ಅನುಕೂಲ ಮಾಡಿಕೊಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ತಾಲೂಕ ಅಧ್ಯಕ್ಷ ಭೀಮಾರಾಯ ಯಲ್ಹೇರಿ ಗುರುಮಿಠಕಲ್. ಭೀಮಾಶಂಕರ್, ಲಕ್ಷ್ಮಣ್ ಮುಂತಾದವರು ಆಗ್ರಹಿಸಿದ್ದಾರೆ.

## ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಗಳನ್ನು ಸ್ಥಾಪಿಸಲು ದೃಢ ನಿರ್ಧಾರ ಕೈಗೊಂಡು ಯಶಸ್ವಿ ಉದ್ಯಮಿಗಳಾಬೇಕು.-ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್




ಕಲಬುರಗಿ: ಜು,23– ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶದಲ್ಲಿ ಮಹಿಳಾ ಉದ್ಯಮಿಗಳಿಗೆ ಹಂಚಿಕೆಯಾದ ಕೈಗಾರಿಕಾ ಪ್ರದೇಶದಲ್ಲಿ ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಧೃಡ ನಿರ್ಧಾರವನ್ನು ಕೈಗೊಂಡು ಆರ್ಥಿಕವಾಗಿ ಸಬಲರಾಗಿ ಯಶಸ್ವಿ ಉದ್ಯಮಿಗಳಾಗಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶ 2ನೇ ಹಂತದಲ್ಲಿ ಬರುವ ಮಹಿಳಾ ಪಾರ್ಕನಲ್ಲಿ ಹಂಚಿಕೆಯಾಗಿರುವ ನಿವೇಶಗಳ ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರ ಗುರುತಿಸಿದ 40 ಎಕರೆ ಜಾಗದಲ್ಲಿ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಜಿಲ್ಲಾಡಳಿತದ ವತಿಯಿಂದ ಅಗತ್ಯ ಸಹಕಾರವನ್ನು ಮತ್ತು ಉದ್ಯಮಿಗಳಿಗೆ ಬೇಕಾದ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಕರ್ಯಗಳನ್ನು ಮತ್ತು ಅಗತ್ಯದ ಸಹಕಾರವನ್ನು ನೀಡಲಾಗುವುದು ಎಂದು ಅವರು ಹೇಳಿದರು.

2017–18 ನೇ ಸಾಲಿನಲ್ಲಿ 40 ಎಕರೆ ಸ್ಥಳದಲ್ಲಿ ಮಹಿಳೆಯರಿಗೆ ಉದ್ಯಮವನ್ನು ಪ್ರಾರಂಭಿಸಲು 230 ನಿವೇಶನ ಹಂಚಿಕೆ ಮಾಡಲಾಗಿದ್ದು, ಇಲ್ಲಿಯವರೆಗೆ ಕೇವಲ 7 ಘಟಕದಲ್ಲಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಇನ್ನೂಳಿದ ಎಲ್ಲ ನಿವೇಶನಗಳು ಹಂಚಿಕೆದಾರರಿಗೆ ಅವರ ಕೈಗಾರಿಕೆ ಪ್ರಾರಂಭಿಸಲು ವಿವಿಧ ಕೈಗಾರಿಕೆ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಅಗತ್ಯ ಸೌಲಭ್ಯ ನೀಡಲಾಗುವುದು ಎಂದು ಹೇಳಿದರು.

ಹಂಚಿಕೆದಾರರು ತಮ್ಮ ಕುಂದು ಕೊರತೆಗಳ ಮಾಹಿತಿಯನ್ನು ಸಭೆಯ ಗಮನಕ್ಕೆ ತಂದಾಗ ಜಿಲ್ಲಾಧಿಕಾರಿ ತಮ್ಮ ಅಹವಾಲುಗಳಿಗೆ ಸ್ಪಂದಿಸುವುದಾಗಿ ಹೇಳಿದರು.

ನಂದೂರು ಕೈಗಾರಿಕಾ ಪ್ರದೇಶದಲ್ಲಿ ನೀರಿನ ಕೊರತೆ ಬಗೆಹರಿಸಲು 5 ಬೋರ್‌ವೆಲ್‌ಗಳನ್ನು ಕೊರೆಸಲಾಗಿದೆ ಮತ್ತು ಪ್ರತಿಯೊಬ್ಬ ಉದ್ಯಮಿಗಳು ಇ –ಖಾತಾ ಮಾಡಿಸಿಕೊಳ್ಳಬೇಕು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯವಾದ ಪಟ್ಟಿಯನ್ನು ತಯಾರಿಸಿಕೊಂಡು ಅದನ್ನು ನಾಮಫಲಕಗಳಿಗೆ ಅಳವಡಿಸಿ ಉದ್ಯಮಿಗಳಿಗೆ ಬೇಕಾದ ಅಗತ್ಯ ಮಾಹಿತಿಯನ್ನು ನೀಡುವುದರ ಮುಖಾಂತರ ಉದ್ಯಮಿಗಳನ್ನು ಅಧಿಕಾರಿಗಳು ಪ್ರೋತ್ಸಾಹಿಸಬೇಕೆಂದು ಹೇಳಿದರು.

ಜಿಲ್ಲೆಯಲ್ಲಿಯುವ ಉದ್ಯಮಿಗಳನ್ನು ಪ್ರೋತ್ಸಾಹಿಸಲು ಕಾರ್ಯಾಗಾರ ತರಬೇತಿಗಳ ಮೂಲಕ ಅವರಿಗೆ ಉದ್ಯಮಗಳನ್ನು ಸ್ಥಾಪಿಸಲು ಅವರನ್ನು ಸಧೃಡರನ್ನಾಗಿ ಮಾಡುವ ಉದ್ದೇಶದಿಂದ ಇಂತಹ ಕಾರ್ಯಾಗಾರ ಹಮ್ಮಿಕೊಳ್ಳಲಾಗುತ್ತಿದೆ, ಜಿಲ್ಲೆಯ ಉದ್ಯಮಿಗಳೆಲ್ಲರು ಭಾಗವಹಿಸಬೇಕೆಂದು ಅವರಿಗೆ ಹೇಳಿದರು.

ಮಹಿಳೆಯರ ಸುರಕ್ಷತೆ ದೃಷ್ಠಿಯಿಂದ ಕೈಗಾರಿಕಾ ಪ್ರದೇಶದ ಸುತ್ತಲು ಬೀದಿ ದೀಪಗಳನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು, ಮತ್ತು ಕೈಗಾರಿಕಾ ಪ್ರದೇಶದ ಸುತ್ತಲು ಅನೈತಿಕ ಮತ್ತು ಅಹಿತಕರ ಘಟನೆಗಳು ಜರುಗದಂತೆ ಪೊಲೀಸ್ ಇಲಾಖೆಯಿಂದ ಅಗತ್ಯ ಸಹಕಾರ ಪಡೆದು ಕೈಗಾರಿಕಾ ಪ್ರದೇಶದ ಸುತ್ತಮುತ್ತಲು ಬಿಟ್ ಪೊಲೀಸ್ ವ್ಯವಸ್ಥೆಯನ್ನು ಮಾಡಿ ಯಾವುದೇ ರೀತಿಯ ಅನೈತಿಕ ಮತ್ತು, ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ಅಗತ್ಯ ಕ್ರಮವಹಿಸಲಾಗುವುದು ಎಂದು ಹೇಳಿದರು.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಜಂಟಿನಿರ್ದೇಶಕ ಅಬ್ದುಲ್ ಅಜೀಂ ಅವರು ಮಾತನಾಡಿ, ನಂದೂರು ಕೆಸರಟಗಿ, 40 ಎಕರೆ ಕೈಗಾರಿಕಾ ಪ್ರದೇಶದದಲ್ಲಿ ಉದ್ಯಮಿಗಳು ಜಾಗವನ್ನು ಖರೀದಿಸಿ ಅಲ್ಲಿ ಯಾವುದೇ ರೀತಿಯ ಘಟಕಗಳನ್ನು ಆರಂಭ ಮಾಡದೇ ಇರುವ ಕಾರಣ ಜಿಲ್ಲೆಯಲ್ಲಿ ಉದ್ಯಮಿಗಳು ಪ್ರೋತ್ಸಾಹಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಸಭೆಯನ್ನು ಹಮ್ಮಿಕೊಂಡಿದ್ದು, ಸಭೆಗೆ ಆಗಮಿಸಿ ಉದ್ಯಮಿಗಳು ತಮ್ಮ ಉದ್ಯಮ ಸ್ಥಾಪನೆಗೆ ಬೇಕಾದ ಮೂಲಭೂತ ಸೌಕರ್ಯಗಳು ಮತ್ತು ಜಿಲ್ಲಾಢಳಿತದಿಂದ ಬೇಕಾದ ಸಹಕಾರ ಪಡೆಯಲು ಘಟಕಗಳನ್ನು ಸ್ಥಾಪಿಸಲು ಇರುವ ಸಮಸ್ಯೆಗಳು ಕುರಿತು ಜಿಲ್ಲಾ ಕೈಗಾರಿಕಾ ಇಲಾಖೆ ಗಮನಕ್ಕೆ ತಂದು ಸಮಸ್ಯೆ ಪರಿಹಾರ ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಿ ಯಶಸ್ವಿ ಉದ್ಯಮಿಗಳಾಬೇಕೆಂದು ಹೇಳಿದರು.

ಫರ್ನಿಚರ್ ಇಂಡಸ್ಟ್ರೀಯ ಯಶಸ್ವಿ ಉದ್ಯಮಿ ಒಬ್ಬರು ಮಾತನಾಡಿ, ನಾವು ಉದ್ಯಮದಲ್ಲಿ ಯಶಸ್ವಿಯನ್ನು ಕಾಣಬೇಕಾದರೆ ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸಿ ದೃಢ ನಿಶ್ಚಯದಿಂದ ಘಟಕಗಳನ್ನು ಪ್ರಾರಂಭಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ. ಬೇರೆಯವರ ಮೇಲೆ ಆರೋಪಗಳನ್ನು ಮಾಡದೇ ಘಟಕದಲ್ಲಿ ಶ್ರಮವಹಿಸಿ ಕಾರ್ಯನಿರ್ವಹಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ ಎಂದು

ಇದೇ ಸಂದರ್ಭದಲ್ಲಿ ಕೆ.ಐ.ಎ.ಡಿ.ಬಿ. ಕಾರ್ಯನಿರ್ವಾಹಕ ಅಭಿಯಂತರ ಅಶೋಕ ಖಂಡ್ರೆ, ಕೈಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕು ನಳಿನಿ ಮಹಾಗಾಂವಕರ್ ಕೆ.ಐ.ಎ.ಡಿ.ಬಿ. ಸಹಾಯಕ ಕಾರ್ಯನಿವಾಹಕ ಅಭಿಯಂರರು ಪರಮೇಶ್ವರ, ಪಿ.ಡಿ.ಓ. ಸುರೇಖಾ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಸೇರಿದಂತೆ ಉದ್ಯಮಿಗಳು ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.23–ಪ್ರಸಕ್ತ 2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ (ಪಿ.ಯು.ಸಿ. ಹಾಗೂ ಸಮನಾಂತರ ಕೋರ್ಸ್ ಮತ್ತು ಪದವಿ ಮಟ್ಟದ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಮಾತ್ರ) ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ ಮೂಲಕ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 43 ಮೆಟ್ರಿಕ್ ನಂತರ ಬಾಲಕ/ ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಯಸುವ ಪಿ.ಯು.ಸಿ. ಹಾಗೂ ಸಮನಾಂತರ ಕೋರ್ಸ್ ಮತ್ತು ಪದವಿ ಮಟ್ಟದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಹಾಗೂ ಇತರೆ ಸಮುದಾಯದ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದಲ್ಲಿ 2025ರ ಆಗಸ್ಟ್ 2 ರೊಳಗಾಗಿ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲಿಚ್ಛಿಸುವ ಆಸಕ್ತಿಯುಳ್ಳ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತಾಲೂಕು ಮಾಹಿತಿ ಕೇಂದ್ರ/ವಿದ್ಯಾರ್ಥಿನಿಲಯವನ್ನು ಕಚೇರಿ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆದು ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

CITATION

IN THE COURT OF THE ADDL. CIVIL JUDGE AND JMFC., AT HUMNABAD

CRL.MISC.NO.1420/2025

1) Anita Wo Late Maruti Waggenor Aag 49 Ro Talmadgi Tq Chitguppa Dist . Bidar Advocate SUBHASHRAO KUNDAN

2) Pavithra Waggenor Do Late Maruti Waggenor Age 28 Ro Talamadagi Tq Chitaguppa

3) Yeshoda Waggenor Do Late Mauti Waggenor Wo Kiran Kumar Ag 25 Ro Talamadagi Tq Chitaguppa

4) Jeevan Waggenor So Late Maruti WaggenorAg24RoTalamadgiTqChitaguppa

5) Devid Waggenor So Late Maruti Age 22 Ro Talamadgi Tq Chitaguppa

Petitioners :-

Respondent :-

The Registrar of Birth and Death Through the Tahasildar Chitaguppa.

Sub :- Petition U/Sec 13(3) of Birth and Death Rgistration Act 1969.

Whereas the above named petitioners have fild the petition under section 13(3) of Birth and Death Registraion act 1969 praying this Honorable court to issue Death Certificate Husband of Petitioners No. 1 is wife , 2 & 3 are daughters and 4 and 5 are sons namely : Maruti S/o Late Sharnappa Waggenor who dird on 02-03-2020 at Village Talmadgi Tq Chitaguppa Dist Bidar .The Petitioners claiming the death Certificate of Said Maruti for transfer of Property and other official plurpose and home rcord.

Threfor,m it is hereby proclaimed that if any persons have got anyobjection in this regard, may approach to this court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22-07-2025

// By order of the court//
Chief Ministerial Officer,
Addl Civil Judge and JMFC court
Humnabad

CITATION

IN THE COURT OF THE PRL. CIVIL JUDGE AND JMFC., AT HUMNABAD

CRL.MISC.NO.507/2025

PETITIONERS :-

1. Satish S/o Late Sirgeppa, Age 39 Years Occ : Agriculture

2. Kamala Bai D/o Late Sirgeppa, Age 53 Years Occ : House Hold,

R/o Ksthslli Now at R/o Indra Nagar Tq: Humnabad Dist : Bidar.

3. Ravindra S/o Late Sirgeppa, Age 40 Years Occ : Agriculture

4. Rajappa @ Rajkumar S/o Late Sirgeppa, Age 50 Years Occu : Agriculture,

All R/o Kathalli Village Tq : Humnabad Dist : Bidar

RESPONDENT : -

The Rgistrar of Birth and Death– through the Tahasildar, Humnabad

Whereas the above named petitioners have filed the petition under section 13(3) of Birth and Death Registration Act 1969 Praying this Honorable court to idssue Death certificate of husband of petitioner No.1,3,4 Son and. 2 Daugter namely ;

Sirgeppa S/o Gundappa Who died on 05-06-2007 at Kathalli Village Tq : Humnabad, The Petitioners claiming the death certificate of deceased Sirgeppa for transer of property and other official purpose and home record. Therefore it is hereby proclaimed that if any person or persons have got any objction in this rgard he/they may approach to this Honorable court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this this 19th day of July-2025.

// By order of the court//
(SMT.MAHANANDA MATHAPATI)
Chief Ministerial Officer,
Prl.Civil Judge and JMFC court
Humnabad

## ರೇಷ್ಮೆ ಇಲಾಖೆ: ವಿವಿಧ ಕಾರ್ಯಕ್ರಮಗಳಡಿ ಸೌಲಭ್ಯ ಪಡೆಯಲು ರೈತರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರೇಷ್ಮೆ ಕೃಷಿಯು ಗುಡಿ ಮತ್ತು ಕೈಗಾರಿಕೆಯನ್ನು ಹೊಂದಿದ್ದು, ಗ್ರಾಮೀಣ ಜನರ ಆರ್ಥಿಕ ಸ್ಥಿತಿ ಸುಧಾರಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ. ಕೊಪ್ಪಳ ಜಿಲ್ಲೆಯಲ್ಲಿ ರೇಷ್ಮೆ ಕೃಷಿಯು ಅಭಿವೃದ್ಧಿ ಪ್ರಗತಿಯ ಪಥದಲ್ಲಿ ಸಾಗುತ್ತಿದೆ. ರೇಷ್ಮೆ ಇಲಾಖೆಯ ಸಿಬ್ಬಂದಿಯವರು ಪ್ರತಿಯೊಂದು ಹಳ್ಳಿಗೆ ಭೇಟಿ ನೀಡಿ ನೀರಾವರಿ ರೈತರನ್ನು ಸಂಪರ್ಕಿಸಿ ರೇಷ್ಮೆ ಕೃಷಿಯಿಂದಾಗುವ ಅನುಕೂಲಗಳ ಕುರಿತು ಹಾಗೂ ಸಿಗುವ ಸೌಲಭ್ಯಗಳ ಕುರಿತು ಮನವರಿಕೆ ಮಾಡಿ ರೇಷ್ಮೆ ಕೃಷಿಯ ವಿಸ್ತರಣೆಗೆ ಪ್ರಯತ್ನಿಸುತ್ತಿದ್ದಾರೆ. ರೇಷ್ಮೆ ಇಲಾಖೆಯಲ್ಲಿ ಈ ಕೆಳಕಂಡ ಸರಕಾರಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ರೈತರು ಈ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಜಿಲ್ಲಾಪಂಚಾಯತ್ ಕಾರ್ಯಕ್ರಮ: ಹಿಪ್ಪುನೇರಳೆ ನಾಟಿ ಮಾಡುವ ರೇಷ್ಮೆ ಕೃಷಿಕರಿಗೆ ಸಹಾಯಧನ ನೀಡುವ ಕಾರ್ಯಕ್ರಮದಡಿ ಯಶಸ್ವಿ ಗೂಡು ಉತ್ಪಾದನೆಗೆ ಹಿಪ್ಪುನೇರಳೆ ಗುಣಮಟ್ಟ ಮುಖ್ಯವಾದ ಅಂಶ. ಈ ನಿಟ್ಟಿನಲ್ಲಿ ಹಿಪ್ಪುನೇರಳೆ ತೆ–ೂಟ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ. ನೀರಾವರಿ ಸೌಲಭ್ಯವಿರುವ ರೈತರನ್ನು ಅಥವಾ ಕೃಷಿಕರನ್ನು ಆಯ್ಕೆ ಮಾಡಿ ಹಿಪ್ಪುನೇರಳೆ ನಾಟಿ ಮಾಡುವ ತೋಟ ವಿಸ್ತರಿಸುವ, ಸಾಂಪ್ರದಾಯಿಕ ಹಿಪ್ಪುನೇರಳೆ ತಳಿ ತೆಗೆದು ಹೆಚ್ಚಿನ ಇಳುವರಿ ನೀಡುವ ಹೊಸ ತಳಿಗೆ ಬದಲಾಯಿಸುವ ರೇಷ್ಮೆ ಕೃಷಿಕರಿಗೆ ಸಹಾಯಧನ ಒದಗಿಸಲಾಗುವುದು. ಒಬ್ಬ ಫಲಾನುಭವಿ ಗರಿಷ್ಠ 2 ಹೆಕ್ಟೆರ್‌ವರೆಗೆ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ. ಈ ಕಾರ್ಯಕ್ರಮದಡಿಯಲ್ಲಿ 1 ಎಕರೆ ಹೊಸ ಹಿಪ್ಪುನೇರಳೆ ನಾಟಿಗಾಗಿ ಸಾಮಾನ್ಯ ವರ್ಗದ ರೇಷ್ಮೆ ಬೆಳೆಗಾರರಿಗೆ ರೂ.45,000/– ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ರೇಷ್ಮೆ ಬೆಳೆಗಾರರಿಗೆ ರೂ.54,000/– ಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು. 1 ಎಕರೆ ಹಿಪ್ಪುನೇರಳೆ ನರ್ಸರಿಗಾಗಿ ಸಾಮಾನ್ಯ ವರ್ಗದ ರೇಷ್ಮೆ ಬೆಳೆಗಾರರಿಗೆ ರೂ.1,12,500/– ಗಳನ್ನು ಹಾಗೂ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ರೇಷ್ಮೆ ಬೆಳೆಗಾರರಿಗೆ ರೂ.1,35,000/– ಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು.

ರೇಷ್ಮೆ ಹುಳು ಸೋಂಕು ನಿವಾರಕ ಔಷಧ: ಹಾಲಿ ರೇಷ್ಮೆ ಬೆಳೆಗಾರರಿಗೆ ಜಿಲ್ಲಾ ಪಂಚಾಯತ್ ವತಿಯಿಂದ ಸೋಂಕು ನಿವಾರಕ, ಹಾಸಿಗೆ ಸೋಂಕು ನಿವಾರಕ ಹಾಗೂ ಸಸ್ಯ ಸಂವರ್ಧಕಗಳನ್ನು ಉಚಿತವಾಗಿ ನೀಡಲಾಗುವುದು. ಅರ್ಹ ಫಲಾನುಭವಿಗಳು ಇದರ ಪ್ರಯೋಜನಪಡೆದುಕೊಳ್ಳಬಹುದಾಗಿದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ: ರೇಷ್ಮೆ ಇಲಾಖೆಯಡಿಯಲ್ಲಿ ಹೊಸದಾಗಿ ಹಿಪ್ಪುನೇರಳೆ ನಾಟಿ, ಹಿಪ್ಪುನೇರಳೆ ನರ್ಸರಿ, ಹಿಪ್ಪುನೇರಳೆ ಮರಗಡ್ಡೆ ಕಾರ್ಯಕ್ರಮಗಳನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಆಸಕ್ತ, ನೀರಾವರಿ ಹೊಂದಿರುವ ರೈತರು ಇದರ ಪ್ರಯೋಜನವನ್ನು ಪಡೆದುಕೊಳ್ಳಬಹುದು.

ತಾಲ್ಲೂಕು ಪಂಚಾಯತ್ ಕಾರ್ಯಕ್ರಮ: ತಾಲೂಕು ಪಂಚಾಯತ್ ಉತ್ಪಾದನೆ ಅಥವಾ ಉತ್ಪಾದಕತೆ ಆಧಾರಿತ ಕಾರ್ಯಕ್ರಮ ಯೋಜನೆಯಡಿ ಮಾರ್ಗಸೂಚಿಗಳನ್ವಯ ಜಿಲ್ಲೆಯ ರೈತರಿಗೆ ರೇಷ್ಮೆ ಕೃಷಿ ಕೈಗೊಳ್ಳಲು ರೇಷ್ಮೆ ಕೃಷಿ ವಿಚಾರ ಸಂಕಿರಣಗಳನ್ನು ಹಾಗೂ ವಸ್ತು ಪ್ರದರ್ಶನಗಳನ್ನು ಪ್ರಚಾರ ಸಾಹಿತ್ಯಕ್ಕಾಗಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು. ಅರ್ಹ ಫಲಾನುಭವಿಗಳು ಇದರ ಪ್ರಯೋಜನ ಪಡೆಯಬಹುದು ಎಂದು ಕೊಪ್ಪಳ ರೇಷ್ಮೆ ಉಪನಿರ್ದೇಶಕರಾದ ಸುಂದರ್ ರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳು ಈ ದೇಶದಲ್ಲಿ ಆಸ್ತಿ, ಸಂಪತ್ತು ಆಗಿದ್ದಾರೆ, ಮಾನವ ಹಕ್ಕುಗಳು ದೊಡ್ಡವರಿಗೆ ಮಾತ್ರ

## ಸೀಮಿತವಲ್ಲ, ಮ್ಕಕಳ ಹಕ್ಕುಗಳು ಕೂಡಾ ಮಾನವ ಹಕ್ಕಗಳಲ್ಲಿ ಪರಿಗಣನೆ ಮಾಡಬೇಕು

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ : ಜುಲೈ 23– ಮಕ್ಕಳು ಈ ದೇಶದಲ್ಲಿ ಆಸ್ತಿ, ಸಂಪತ್ತು ಆಗಿದ್ದಾರೆ, ಮಾನವ ಹಕ್ಕುಗಳು ದೊಡ್ಡವರಿಗೆ ಮಾತ್ರ ಸೀಮಿತವಲ್ಲ, ಮ್ಕಕಳ ಹಕ್ಕುಗಳು ಕೂಡಾ ಮಾನವ ಹಕ್ಕಗಳಲ್ಲಿ ಪರಿಗಣನೆ ಮಾಡಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ನ್ಯಾಯಾಧೀಶರಾದ ಶ್ರೀ ಮರಿಯಪ್ಪ ಅವರು ಹೇಳಿದರು.

ಯಾದಗಿರಿ ಜಿಲ್ಲಾ ಬಾಲ ಭವನ ಸಮಿತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪಂಚಾಯತ್, ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅವರ ಸಹಯೋಗದಲ್ಲಿ ಲಿಂಗೇರಿ ಕೊನಪ್ಪ ಆರ್‌ನಾಡಗೌಡ ಸ್ಮಾರಕ ಶಾಲೆಯಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಈ ದೇಶದಲ್ಲಿ ಆಸ್ತಿ, ಸಂಪತ್ತು ಆಗಿದ್ದಾರೆ. ಮಾನವ ಹಕ್ಕುಗಳು ದೊಡ್ಡವರಿಗೆ ಮಾತ್ರ ಸೀಮಿತವಲ್ಲ. ಮ್ಕಕಳ ಹಕ್ಕುಗಳು ಕೂಡಾ ಮಾನವ ಹಕ್ಕಗಳಲ್ಲಿ ಪರಿಗಣನೆ ಮಾಡಬೇಕು. ಅದರಂತೆ ಇಂದಿನ ಮಕ್ಕಳು ನಾಳೆಯ ಪ್ರಜೆಗಳಲ್ಲ. ಅವರು ಇಂದಿನ ಪ್ರಜೆಗಳು. ಅವರನ್ನು ಬೆಳೆಸುವ ರೀತಿಯಲ್ಲಿ ದೇಶದ ಪ್ರಗತಿ, ಅಭಿವೃದ್ಧಿ ಅಡಗಿದೆ ಎಂದರು.

ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಶ್ರೀ ತಿಪ್ಪಣ್ಣ ಶಿರಸಗಿ ಅವರು ಮಾತನಾಡಿ, ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಮಾನಸಿಕ ಒತ್ತಡ ನಿವಾರಣೆಯಾಗುತ್ತದೆ ಎಂದು ತಿಳಿಸಿದರು.

ಮಕ್ಕಳು ಈಗಿನ ಕಾಲದಲ್ಲಿ ಮಕ್ಕಳು ಸ್ವಯಂ ರಕ್ಷಣೆ ಕರಾಟೆ, ಸ್ವಿಮಿಂಗ್ ಬಹಳ ಅವಶ್ಯಕತೆ ಇದೆ ತಾವುಗಳು ತಪ್ಪದೆ ಕಲಿಬೇಕು ಮತ್ತು ಇತರೆ ಸ್ಪರ್ಧೆಗಳಲ್ಲಿ ಮಕ್ಕಳು ಭಾಗವಹಿಸಬೇಕು ಈ ಶಾಲೆಯ ಮುಖ್ಯೋಪಾಧ್ಯರು ಹಾಗೂ ಸಹ ಶಿಕ್ಷಕರು ವೃಂದದವರು ಮಕ್ಕಳ ಶ್ರೇಯಸ್ಸಿಗೆ ಉತ್ತಮ ರೀತಿಯಲ್ಲಿ ಕೆಲಸಮಾಡುತ್ತಿರುವುದರಿಂದ ಒಳ್ಳೆಯ ಪ್ರತಿಭೆಗಳು ಹೊರ ಹೊಮ್ಮಲು ಸಹಕಾರಿಯಾಗುತ್ತದೆ ಮಕ್ಕಳು ತಮ್ಮ ಕಲೆಯನ್ನು ಪ್ರದರ್ಶಿಸಲು ಇಂತಹ ಸ್ಪರ್ಧೆಗಳು ಅವಶ್ಯಕವಾಗಿವೆ ಎಂದು ಹೇಳಿದರು.

## ನೆಲ–ಜಲ, ನಾಡು–ದೇಶ ರಕ್ಷಣೆ ನಿರಂತರವಾಗಿರಲಿ:ಸಾಕ್ಷಿ ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಕನ್ನಡ ನಾಡು, ನುಡಿ, ನೆಲ, ಜಲ ಭಾಷೆಗಾಗಿ ಎಲ್ಲರೂ ಒಗ್ಗೂಡಬೇಕು. ಕನ್ನಡ ಭಾಷೆಯ ಶ್ರೀಮಂತಿಕೆ ಮತ್ತು ಕನ್ನಡಕ್ಕಾಗಿ ಹೋರಾಟ ಮಾಡಿದವರನ್ನು ನಮ್ಮ ಮುಂದಿನ ಪೀಳಿಗೆಗೆ ತಿಳಿಸುವುದು ಎಲ್ಲ ಕರ್ತವ್ಯವಾಗಿದೆ ಎಂದು ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಸಾಕ್ಷಿ ಹಿರೇಮಠ್ ರವರು ಮಹಿಳಾ ಘಟಕದ ಹುಮನಾಬಾದ ತಾಲ್ಲೂಕಾ ಅಧ್ಯಕ್ಷರಾಗಿ ಸಪ್ನ ಎಸ್, ಉಪಾಧ್ಯಕ್ಷರಾಗಿ ಶ್ರೀದೇವಿ ಮಠಪತಿ ರವರನ್ನು ನೇಮಕ ಮಾಡಿ ಮಾತನಾಡುತ್ತಾ ತಿಳಿಸಿದರು. ಕನ್ನಡ ಅತ್ಯಂತ ಅರ್ಥಪೂರ್ಣವಾದ ಭಾಷೆ. ಕನ್ನಡವೇ ನುಡಿ, ಕನ್ನಡವೇ ನಾಡು, ಕನ್ನಡವೇ ಸಂಸ್ಕೃತಿ, ಸಾಹಿತ್ಯ, ಕನ್ನಡವೇ ಸರ್ವಸ್ವ ಆಗಬೇಕು. ಕನ್ನಡ ಎಂಬುದು ಮೂರಕ್ಷರಗಳ ಪದಪುಂಜವಯ್ಯ, ಕನ್ನಡಾಂಬೆ ಕೀರ್ತಿ ಪ್ರತೀಕ. ಕನ್ನಡತನ ನಮ್ಮದಾಗಬೇಕು. ಕನ್ನಡ ಭಾಷೆ ನಾಡುಕಟ್ಟುವ ಕೆಲಸಗಳು ಮತ್ತಷ್ಟು ಗಟ್ಟಿಯಾಗಬೇಕೆಂದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಡಾ. ರವಿ ಸ್ವಾಮಿ ನಿರ್ಣಾ, ಸುಭಾಷ್ ಕೆನಡೆ, ಉಪಸ್ಥಿತರಿದ್ದರು.

# ಜು. 25 ರಿಂದ ಶ್ರಾವಣ ನಿಮಿತ್ಯ ವಿಶ್ವ ಧರ್ಮ ಪ್ರವಚನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.23:ತಾಲೂಕಿನ ಮುಧೋಳ (ಬಿ) ಗ್ರಾಮದ ಗುರುಬಸವೇಶ್ವರ ಅನುಭವ ಮಂಟಪದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ನಿಮಿತ್ಯವಾಗಿ ದಿನಾಂಕ 25/07/2025 ರಿಂದ 24/08/2025 ರ ವರೆಗೆ ಸಾಯಂಕಾಲ 7:00 ರಿಂದ 9.00 ರ ವರೆಗೆ ವಿಶ್ವ ಧರ್ಮ ಪ್ರವಚನ ಪರಮ



ಪೂಜ್ಯ ಬಸವ ಮಣಿ ಮಾತಾಜಿ ಗುರುಬಸವ ಅನುಭವ

ಮಂಟಪ ಹುಬ್ಬಳ್ಳಿ ಅವರಿಂದ ಪ್ರವಚನ ಹಮ್ಮಿಕೊಳ್ಳಲಾಗಿದೆ.ಈ ಕಾರ್ಯಕ್ರಮದಲ್ಲಿ ಮುಧೋಳ(ಬಿ) ಗ್ರಾಮದ ಹಾಗೂ ಸುತ್ತಮುತ್ತಲಿನ ಗ್ರಾಮದ ಬಸವ ಭಕ್ತರು ಪ್ರವಚನ ಆಲಿಸಿ ಪ್ರವಚನದ ಲಾಭ ಪಡೆದುಕೊಳ್ಳಬೇಕೆಂದು ಈ ಮೂಲಕ ಗುರುಬಸವೇಶ್ವರ ಅನುಭವ ಮಂಟಪದ ಅಧ್ಯಕ್ಷರಾದ ಶರಣ ಶ್ರೀ ನಾಗಯ್ಯ ಸ್ವಾಮಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರುದ್ವಾರಾ ಕಾರ್ಯಕಾರಿ ಸಮಿತಿಯಿಂದ ಮನದೀಪ್ ಕೌರ್‌ಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 23 : ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಸದಸ್ಯನ್ನಾಗಿ ಮೊದಲ ಸಿಖ್ ಮಹಿಳೆ ಮನದೀಪ್ ಕೌರ್ ಅವರು ನೇಮಕಗೊಂಡಿರುವುದಕ್ಕೆ ಇಂದು ದಿನಾಂಕ 23–7–2025 ರಂದು ಬೀದರಿನ ಪ್ರಸಿದ್ಧ ಗುರುದ್ವಾರಾದಲ್ಲಿ ಗುರುದ್ವಾರಾದ ಕಾರ್ಯಕಾರಿ ಸಮಿತಿಯಿಂದ ಕೌರ್ ಅವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶ್ರೀ ನಾನಕ ಝಿರಾ ಸಾಹೇಬ್ ಫೌಂಡೇಷನ್ ಅಧ್ಯಕ್ಷ ಡಾ. ಎಸ್.ಬಲಬೀರಸಿಂಗ್,



ಗುರುದ್ವಾರದ ಉಪಾಧ್ಯಕ್ಷ ಸರದಾರ ಬಾಹಾದ್ದೂರ್ ಸಿಂಗ್, ಸಾಮಾನ್ಯ ಕಾರ್ಯದರ್ಶಿ ಎಸ್. ಬಲವಂತ ಸಿಂಗ್, ಕಾರ್ಯದರ್ಶಿ ಸರದಾರ ಸತಬೀರ್ ಸಿಂಗ್ ಸಂಧು, ಸದಸ್ಯರುಗಳಾದ ಎಸ್.ಆರವಿಂದರ್ ಸಿಂಗ್, ಎಸ್.ಗುರುಚರಣ ಸಿಂಗ್ ಫಾಡಿಸಾಜ್, ಎಸ್. ಹರ್ಪಾಲ್ ಸಿಂಗ್ ರಂಜನ್, ಎಸ್. ಇಂದರ ಸಿಂಗ್ ಶಾಹು, ಎಸ್.ಲಾಹೋರ್ ಸಿಂಗ್, ಎಸ್. ಲೋಚನ್ ಸಿಂಗ್, ಎಸ್. ಮಹಿಂದ್ರಸಿಂಗ್, ಎಸ್. ಮನಪ್ರೀತ ಸಿಂಗ್ ಖನುಜಾ, ಎಸ್. ಓಂಕಾರ ಸಿಂಗ್, ಎಸ್. ಪರ್ದಿಪ್ ಸಿಂಗ್ ರಂಜನ್, ಎಸ್. ರವಿಂದ್ರ ಸಿಂಗ್ ವಕೀಲರು, ಎಸ್. ಸರ್ಜಿತ್ ಸಿಂಗ್, ಎಸ್. ಪುನಿತ್ ಸಿಂಗ್ ಮತ್ತು ಎಸ್. ತೇಜಪಾಲ್ ಅವರು ಮನದೀಪ್ ಕೌರ್ ಮನಪ್ರೀತ ಸಿಂಗ್‌ಗೆ ಸನ್ಮಾನಿಸಿ ಶುಭಹಾರೈಸಿದರು.

ಈ ಸಂದರ್ಭದಲ್ಲಿ ಗುರುನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಉಪಸ್ಥಿತರಿದ್ದರು.

# ಗುರುಕಾರುಣ್ಯ ಪಬ್ಲಿಕ್ ಶಾಲೆಯಲ್ಲಿ ಮಕ್ಕಳ ಸಂಸತ ಚುನಾವಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.23: ಪಟ್ಟಣದ ಗುರುಕಾರುಣ್ಯ ಪಬ್ಲೀಕ ಶಾಲೆಯಲ್ಲಿ ಮಾದರಿ ಚುನಾವಣೆ ಕಾರ್ಯಕ್ರಮ ಬುಧವಾರ ಮಕ್ಕಳ ಮುಖಾಂತರ ನಡೆಯಿತು.

ಈ ಸಂದರ್ಭದಲ್ಲಿ ಶಾಲೆಯ ಆಡಳಿತಾಧಿಕಾರಿಗಳಾದ ಚನ್ನಬಸವ ಘಾಳೆ ಪ್ರಾಸ್ತವಿಕವಾಗಿ ಮಾತನಾಡಿ,

ಈ ಕಾರ್ಯಕ್ರಮದ ಮೂಲ ಉದ್ದೇಶ ಮಕ್ಕಳಿಗೆ ಭವಿಷ್ಯದಲ್ಲಿ ಉತ್ತಮ ನಾಯಕನನ್ನು ಗುರುತಿಸಿಬೇಕು, ಆಮಿಷಯ ಬಗ್ಗೆ ತಲೆ ಕೇಡಸಿಕೊಳ್ಳದೆ ಮತ ನೀಡಿ ಗೆಲ್ಲಿಸಿ ದೇಶ ಒಳ್ಳೆಯ ಭವಿಷ್ಯ ನಿರ್ಮಾಣ ಮಾಡುವ ಬಗ್ಗೆ ಜ್ಞಾನ ಬೆಳೆಯು ತ್ತದೆ ಎಂದು ಹೇಳಿದರು.

ಚುನಾವಣೆಗೆ ನೇರವಾಗಿ ಸ್ಪರ್ದಿಸಲು ಅವಕಾಶ ನೀಡದೆ ಅರ್ಹ ಅಭ್ಯರ್ಥಿಗಳನ್ನು ನಾಯಕ ಅರ್ಹತ್ತೆ ಬಗ್ಗೆ ವಿವರಣಾತ್ಮಕ ಮಕ್ಕಳಿಗೆ ಶಿಕ್ಷಕರು ತಿಳಿಸಿ ತದನಂತರ ಪರೀಕ್ಷೆಯನ್ನು ತೆಗೆದುಕೋಂಡಿರುವರು,ಅದರಲ್ಲಿ 11 ಚುನಾವಣೆಗೆ ಅರ್ಹರೆಂದು ಆಯ್ಕೆ ಮಾಡಿದರು.

ಶಿಕ್ಷಕರು ಮಕ್ಕಳಿಗೆ ಚುನಾವಣೆಯಲ್ಲಿ ಮತ ಹಾಕುವಾಗ ಯಾವುದೆ ಸಂದರ್ಭದಲ್ಲಿ ಆಮಿಷಕ್ಕೆ ಒಳಗಾಗದೆ ಶಾಲೆಯ ಹಾಗು ಮಕ್ಕಳ ಹಿತದೃಷ್ಟಿಯಲ್ಲಿ ಯಾರು ಅರ್ಹರು ಅವರನ್ನು ಮಾತ್ರ ಮಾಡಲು ತಿಳಿಸುವರು.

ಈ ಸಂದರ್ಭದಲ್ಲಿ ಚುನಾವಣೆ ನಿಂತ ಮಕ್ಕಳು ಸಹ ತಮ್ಮ ಗುರುತಿನೊಂದಿಗೆ ಒಳ್ಳೆಯ ಪ್ರಚಾರ ಮಾಡಿ ತಮ್ಮಗೆ ಯಾಕೆ ಮತ ಹಾಕಬೇಕು ಎಂದು ಪ್ರಚಾರ ಮಾಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ರಾಜೇಂದ್ರ ಪಾಟೀಲ,

ಶಾಲೆಯ ಪ್ರಾಂಶುಪಾಲರಾದ ನೀಲಕಂಠ ಪಾಂಡರೆ, ಎಸ್. ಎಸ್ ಮೈನಾಳೆ, ಮಹಾದೇವ ಬಿರಾದಾರ ಸೇರಿದಂತೆ ಶಾಲಾ ಸಿಬ್ಬಂದಿ ಇದ್ದರು.

ಕಾರ್ಯಕ್ರಮವನ್ನು ವಿವೇಕಾನಂದ ಬಿರಾದಾರ, ರೇಖಾ ಕೊಡ್ಡೆಕರ, ನಿರೂಪಿಸಿದರು.

# ಫಸಲ್ ಬಿಮಾ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ರೈತಬಾಂಧವರಲ್ಲಿ ಮನವಿ

ಬೀದರ.ಜು.23: ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮಾ ಯೋಜನೆ ರೈತ ಸಮುದಾಯಕ್ಕೆ ಉಪಯುಕ್ತವಾದ ಯೋಜನೆಯಾಗಿರುವುದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಲ್ಲಿ ಭಾಗವಹಿಸಿ ಲಾಭ ಪಡೆಯಬಹುದಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2025–26 ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುಮೋದನೆಯನ್ನು ನೀಡಲಾಗಿದೆ.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಮುಖ್ಯ ಬೆಳೆಗಳಿಗೆ ಗ್ರಾಮ ಪಂಚಾಯತಿ/ನಗರ ಸ್ಥಳೀಯ ಸಂಸ್ಥೆ ಮಟ್ಟದಲ್ಲಿ ತೊಗರಿ (ಮಳೆಯಾಶ್ರಿತ(ಮ.D)) ಹಾಗೂ ಸೋಯಾಅವರೆ (ಮ.D) ಬೆಳೆಗಳು ಮತ್ತು ಇತರೆ ಬೆಳೆಗಳಾದ ಹೆಸರು (ಮ.ಆ), ಸೂರ್ಯಕಾಂತಿ (ಮ.ಆ), ಉದ್ದು (ಮ.D), ಮುಸುಕಿನ ಜೋಳ(ಮ.D), ಶೇಂಗಾ (ಮ.ಆ), ಜೋಳ (ಮ.D), ಎಳ್ಳು(ಮ.D), ಸಜ್ಜೆ (ಮ.D), ಸೋಯಾಅವರೆ (ನೀರಾವರಿ(ನೀ)), ಭತ್ತ(ನೀ & ಮ.ಆ), ಹತ್ತಿ (ಮ.D) ಬೆಳೆಗಳನ್ನು ವಿವಿಧ ತಾಲ್ಲೂಕಿಗೆ ನಿಗದಿಪಡಿಸಿ, ಹೋಬಳಿ ಮಟ್ಟಕ್ಕೆ ಅನುಷ್ಠಾನಗೊಳಿಸಲು "ಯೂನಿವರ್ಸಲ್ ಸೋಂಪೊ ಜನರಲ್ ಇನ್ಶ್ಯೂರೆನ್ಸ್ ಕಂಪನಿ ಲಿಮಿಟೆಡ್" ವಿಮಾ ಸಂಸ್ಥೆಯನ್ನು ನಿಗದಿಪಡಿಸಲಾಗಿದೆ.

ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರು ಪಾಲ್ಗೊಳ್ಳಲು ಕೊನೆಯ ದಿನಾಂಕ: 31–07–2025 ಹಾಗೂ ಸೂರ್ಯಕಾಂತಿ (ಮ.ಆ) ಬೆಳೆಗೆ ದಿನಾಂಕ: 16–08–2025 ಆಗಿರುತ್ತದೆ.

ಬೆಳೆಸಾಲ ಪಡೆದ ರೈತರಿಗಾಗಿ ಆಪ್ಟಿಂಗ–ಔಟ ಮತ್ತು ಆಪ್ಟಿಂಗ–ಇನ್ ಎಂಬ ಅವಕಾಶವನ್ನು ರೈತರಿಗೆ ನೀಡಲಾಗಿದೆ. ಇದರಲ್ಲಿ ಬೆಳೆಸಾಲ ಪಡೆದ ರೈತರು ಬೆಳೆವಿಮೆ ಮಾಡಿಸುವುದು ಕಡ್ಡಾಯವಾಗಿರುವುದಿಲ್ಲ.ಬೆಳೆವಿಮೆ ಮಾಡಲು ಇಚ್ಛಿಸದ ಸಾಲ ಪಡೆದಂತಹ ರೈತರು ಬೆಳೆವಿಮೆ ಮಾಡಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕಕ್ಕಿಂತ 7 ದಿನದ ಮುಂಚಿತವಾಗಿ ಸಂಬಂಧಪಟ್ಟ ಬ್ಯಾಂಕಿಗೆ ಆಪ್ಟಿಂಗ–ಔಟ ಎಂಬ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಸದರಿ ಅರ್ಜಿ ನೀಡಿದ ರೈತರನ್ನು ವಿಮೆ ಯೋಜನೆಯಿಂದ ಬ್ಯಾಂಕ್‌ನವರು ಹೊರಗಿಡಬೇಕಾಗುತ್ತದೆ. ಸಾಲ ಪಡೆದಿರುವ ರೈತರ ಪೈಕಿ ಆಪ್ಟಿಂಗ–ಔಟ ನಮೂನೆ ನೀಡದ ಉಳಿದ ಎಲ್ಲಾ ರೈತರನ್ನು ವಿಮಾ ಯೋಜನೆಯಡಿ ತರುವುದು ಕಡ್ಡಾಯವಾಗಿರುತ್ತದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ

ಪಹಣಿ, ಆಧಾರ ಸಂಖ್ಯೆ ಜೊಡಿಸಿದ ಬ್ಯಾಂಕ್ ಖಾತೆ ವಿವರ ಮತ್ತು ಆಧಾರ ಕಾರ್ಡನ ಪ್ರತಿಯನ್ನು ಸಂಬಂಧಿಸಿದ ಬ್ಯಾಂಕ ಅಥವಾ ಸಿ.ಎಸ್.ಸಿ ಕೇಂದ್ರಗಳಿಗೆ ಒದಗಿಸಿ ನೋಂದಣಿ ಮಾಡಿಸಬಹುದು. ರೈತರು ನೋಂದಣಿಗಾಗಿ ಕಡ್ಡಾಯವಾಗಿ **FRUITS ID** (FID) ಹೊಂದಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ವಾಣಿಜ್ಯ/ಗ್ರಾಮೀಣ/ಸಹಕಾರಿ/ಬ್ಯಾಂಕುಗಳನ್ನು/ಸಾರ್ವಜನಿಕ ಸೇವಾ ಕೇಂದ್ರ ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜು.27 ರಂದು ರಂಗ ಗೀತೆಗಾಯನ ಹಾಗೂ ರಮಾಬಾಯಿ ನಾಟಕ ಪ್ರದರ್ಶನ

ಬೀದರ. ಜು.23 : ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ರಂಗಾಯಣ ಕಲಬುರಗಿ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಜುಲೈ.27 ರಂದು ಬೆಳಿಗ್ಗೆ 11 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ಬೀದರನಲ್ಲಿ 2021–22ನೇ ಸಾಲಿನ ರಂಗಗೀತೆಗಾಯನ ಹಾಗೂ ರಮಾಬಾಯಿ ನಾಟಕ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದ ಉದ್ಘಾಟಕರಾಗಿ ಬೀದರ ವಿಶ್ವವಿದ್ಯಾಲಯದ ಕುಲಸಚಿವರು ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಸುರೇಖಾ ಅವರು ಆಗಮಿಸಲಿದ್ದಾರೆ. ಕಾರ್ಯಕ್ರಮದ ಘನ ಉಪಸ್ಥಿತಿ ಬೆಂಗಳೂರು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಅಧ್ಯಕ್ಷತೆ ಕರ್ನಾಟಕ ರಂಗಾಯಣ ಕಲಬುರಗಿ ನಿರ್ದೇಶಕರಾದ ಸುಜಾತಾ ಜಂಗಮಶೆಟ್ಟಿ, ವಿಶೇಷ ಉಪನ್ಯಾಸಕರಾಗಿ ಸಂಗ್ರಾಮ ಎಂಗಳೆ ಹಿರಿಯ ರಂಗಕರ್ಮಿಗಳು ಬೀದರ. ಮುಖ್ಯ ಅತಿಥಿಗಳಾಗಿ ಬಸವರಾಜ ಹೂಗಾರ ಜಂಟಿ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗ ಕಲಬುರಗಿ, ಸುರೇಶ ಚನ್ನಶೆಟ್ಟಿ ಅಧ್ಯಕ್ಷರು ಕನ್ನಡ ಸಾಹಿತ್ಯ ಪರಿಷತ್ತು ಬೀದರ ಡಾ. ಸಂಜೀವಕುಮಾರ ಅತಿವಾಳೆ ಸದಸ್ಯರು, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು, ವಿಜಯಕುಮಾರ ಸೋನಾರೆ ಕರ್ನಾಟಕ ಜಾನಪದ ಅಕಾಡೆಮಿ ಬೆಂಗಳೂರು, ಮಹೇಶ ಪಾಟೀಲ ಮಾಜಿ ನಿರ್ದೇಶಕರು ಕರ್ನಾಟಕ ರಂಗಾಯಣ ಕಲಬುರಗಿ, ಶಂಭುಲಿಂಗ ವಾಲ್ದೊಡ್ಡಿ ಹಿರಿಯ ರಂಗಭೂಮಿ ಕಲಾವಿದರು ಬೀದರ, ಬಸವರಾಜ ಭತಮುರ್ಗೆ ಆಡಳಿತ ಮಂಡಳಿ ಸದಸ್ಯರು ಪಶು ವೈದ್ಯಕೀಯ ಮೀನುಗಾರಿಕೆ ವಿಶ್ವವಿದ್ಯಾಲಯ ಬೀದರ, ಬಿ.ಜೆ. ವಿಷ್ಣುಕಾಂತ ಚಲನಚಿತ್ರ ನಟರು ಹಾಗೂ ನಿರ್ದೇಶಕರು ಬೀದರ ಅವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರಣ ಸಾರ್ವಜನಿಕರು ನಾಟಕ ನೋಡಲು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕಾಗಿ ಅವರು ತಿಳಿಸಿದ್ದಾರೆ.

# ಶರಣರ ಸಂಗದಿಂದ ಮಾನಸಿಕ ನೆಮ್ಮದಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಶರಣ ಸಂಗಮದಿಂದ ಮಾನಸಿಕ ನೆಮ್ಮದಿ, ಶಾಂತಿ, ಸಮಾಧಾನ, ಸಂತೃಪ್ತಿ ದೊರೆ–ಯುತ್ತದೆ ಎಂದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ 313ನೆಯ ಮಾಸಿಕ ಶರಣ ಸಂಗಮ ಮತ್ತು ಹಿರಿಯ ಸಾಹಿತಿ ವೀರಣ್ಣ ಕುಂಬಾರ ಅವರ ನುಡಿ–ನಮನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಶರಣರ ವಚನಗಳ ನಿತ್ಯ ಪಠಣ ಮಾಡುವುದರಿಂದ ನಮ್ಮ ಜೀವನ ಪಾವನವಾಗುತ್ತದೆ. ಶರಣರು ಸಂತೃಪ್ತ ಜೀವನ ಸಾಗಿಸುವ ವಿಧಾನ ನಮಗೆ ಸರಳವಾಗಿ ಹೇಳಿಕೊಟ್ಟಿದ್ದಾರೆ.

ದಿನನಿತ್ಯ ಇಷ್ಟಲಿಂಗ ಪೂಜೆ, ಸತ್ಯಶುದ್ಧ ಕಾಯಕ, ದಾಸೋಹ ಹಾಗೂ ಶರಣರ ಸಂಗ ಮಾಡಿದರೆ ನಮ್ಮ ಜೀವನದಲ್ಲಿರುವ ಅಜ್ಞಾನ, ಮೂಢನಂಬಿಕೆ,

ಹಿರಿಯ ಸಾಹಿತಿ ವೀರಣ್ಣ ಕುಂಬಾರ ಅವರು ವಚನ–ನಿರ್ವಚನ ಜತೆಗೆ ಅಧುನಿಕ ವಚನಗಳನ್ನು ಬರೆಯುವ ಮೂಲಕ ಶರಣ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ.
– ಶಂಭುಲಿಂಗ ಕಾಮಣ್ಣ ಅಧ್ಯಕ್ಷರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಬೀದರ್

ದುಃಖ ಕಳೆಯುತ್ತದೆ ಎಂದು ತಿಳಿಸಿದರು.

ನಿರಂಜನ ಸ್ವಾಮೀಜಿ ಮಾತನಾಡಿ, ಅಧ್ಯಾತ್ಮ ಎಂಬುದು ಹಿಮಾಲಯದಲ್ಲಿ ಹೋಗಿ ಮಾಡುವುದು ಅಲ್ಲ, ಮನೆಯಲ್ಲಿಯೇ ಇದ್ದು–ಕೊಂಡು ಶರಣ ಮಾರ್ಗದಲ್ಲಿ ಸಾಗಿದರೆ ಸಮಾಧಾನದಿಂದ ಬಾಳಿದರೆ ಅದುವೇ ನಿಜವಾದ ಅಧ್ಯಾತ್ಮವೆಂದು ನುಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಮಾತನಾಡಿ, ವೀರಣ್ಣ ಕುಂಬಾರ ಅವರು ಶರಣ ಜೀವನ ಸಾಗಿಸಿ, ಹಿರೇಮಠ ಸಂಸ್ಥಾನದ ಸಾಹಿತ್ಯ ಕ್ಷೇತ್ರ–ಕ್ಕೆ ಬಹುದೊಡ್ಡ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಆಶೀರ್ವಚನ ನೀಡಿದರು.

ಈಶಪ್ರಸಾದ ಸ್ವಾಮೀಜಿ, ನೀಲಾಂಬಿಕಾ ತಾಯಿ, ದೇವಮ್ಮತಾಯಿ ಸಮ್ಮುಖ ವಹಿಸಿದ್ದರು.

ಕುಂಬಾರ ಪರಿವಾರದಿಂದ ಬಸವ ಗುರುವಿನ ಪೂಜೆ ನೆರವೇರಿತು.

ರಾಜು ಜುಬರೆ ವಚನ ಗಾಯನ ನಡೆಸಿ ಕೊಟ್ಟರು.

ದೀಪಕ ಠಮಕೆ ನಿರೂಪಿಸಿದರು.

ಸನ್ಮಾನ :

ಶ್ರಾವಣ ಮಾಸದಲ್ಲಿ ವಿವಿಧ ಕಡೆ ಪ್ರವಚನ ನಡೆಸಿ ಕೊಡುತ್ತಿರುವ ಡಾ.ಸಂಜುಕುಮಾರ ಜುಮ್ಮಾ, ಡಾ.ಶಿವಲಿಂಗ ಹೇಡೆ, ಭಾರತಿ ಪಾಟೀಲ, ಮಲ್ಲಮ್ಮ ನಾಗನಕೇರೆ, ರೇಖಾ ಮಹಾಜನ, ಲಕ್ಷ್ಮಣ ಮೇತ್ರೆ, ಪ್ರಕಾಶ ದೇಶಮುಖ, ಜೈರಾಜ ನಿಂಬೂರು, ಮಾರುತಿ ಗಾದಗೆ, ಶಿವಾನಂದ ಸ್ವಾಮಿ, ರೇಖಾ ಪಿ.ಎಂ. ಅವರನ್ನು ಪುಜ್ಯರು ಸನ್ಮಾನಿಸಿ, ಆಶೀರ್ವದಿಸಿದರು.

# ಕೊಟ್ಪಾ-2003ರ ಕಾಯ್ದೆ ಅಡಿಯಲ್ಲಿ ಜಿಲ್ಲೆಯಾದ್ಯಂತ ತಂಬಾಕು ನಿಷೇಧ ಕಾರ್ಯಾಚರಣೆ

ಕಲಬುರಗಿ ಜು 23: ಇಂದು ಜಿಲ್ಲೆಯಾದ್ಯಂತ ತಂಬಾಕು ನಿಷೇಧ ಕಾರ್ಯಾಚರಣೆ ಹಮ್ಮಿಕೊಂಡಿರುವ ನಿಟ್ಟಿನಲ್ಲಿ ನಗರದ ಸ್ಟೇಷನ್ ಬಜಾರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ನೇತೃತ್ವದಲ್ಲಿ ಕಾರ್ಯಾಚರಣೆ ಕೈಗೊಂಡು ಪರವಾನಿಗೆ ರಹಿತ ಮತ್ತು ನಿಯಮ ಉಲ್ಲಂಘನೆ ತಂಬಾಕು ವ್ಯಾಪಾರಸ್ಥರಿಗೆ ಕೊಟ್ಪಾ ಕಾಯ್ದೆ ಅಡಿಯಲ್ಲಿ ದಂಡ ವಿಧಿಸಲಾಗಿದೆ ಹಾಗೂ ತಂಬಾಕು ಸೇವನೆ ಮತ್ತು 21 ವರ್ಷದ ಒಳಗಿನ ಮಕ್ಕಳು ಆಕರ್ಷಿತರಾಗದಂತೆ ಜಾಗೃತಿ ಸಂದೇಶ ನೀಡಿದರು.

ಬುದುವಾರದಂದು ತಂಬಾಕು ನಿಯಂತ್ರಣ ಕಾನೂನು ಕೊಟ್ಪಾ 2003 ಕಾಯ್ದೆಯನ್ವಯ ಕಲಬುರ್ಗಿ ರೈಲ್ವೇ ನಿಲ್ದಾಣ ಹತ್ತಿರ ಇರುವ ತಂಬಾಕು ಮತ್ತು ತಂಬಾಕು ಉತ್ಪನ್ನಗಳು ಅನಧಿಕೃತ ಮಾರಾಟ ಮಾಡುವ ಅಂಗಡಿ ಮುಂಗಟ್ಟುಗಳ ಮೇಲೆ ದಾಳಿಯನ್ನು ಮಾಡಿ ಪರಿಶೀಲನೆ ಮಾಡಲಾಯಿತು. ಜಿಲ್ಲೆಯಾದ್ಯಂತ ಅನಧಿಕೃತ ತಂಬಾಕು




ಮಾರಾಟವನ್ನು ನಿಯಂತ್ರಿಸಲು ಈ ಕಾರ್ಯಾಚರಣೆಯನ್ನು ಮಾಡಲಾಯಿತು.

ಲೈಸನ್ಸ್ ಪಡೆಯದೆ ಅನಧಿಕೃತ ತಂಬಾಕು ಮಾರಾಟ ಮಾಡುವ ಅಂಗಡಿಗಳಲ್ಲಿ ತಂಬಾಕು ಉತ್ಪನ್ನ ಗಳ ಜಾಹಿರಾತು ಬೋರ್ಡ್ ಬಿತ್ತಿ ಪತ್ರ ಮತ್ತು ಎಲ್.ಸಿ.ಡಿ ಟಿ.ವಿ.. ಗಳ ಮುಖಾಂತರ ಪ್ರಚಾರವನ್ನು ಮಾಡುವಂತಿಲ್ಲ ಅಪ್ರಾಪ್ತ ವಯಸ್ಕರಿಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದು ಹಾಗೂ ಅಪ್ರಾಪ್ತ ವಯಸ್ಕರಿಂದ ತಂಬಾಕು ಉತ್ಪನ್ನಗಳ ಮಾರಾಟ ಮಾಡವುದು ಶಿಕ್ಷಾರ್ಹ ಅಪಾರದವಾಗಿದೆ.

ತಂಬಾಕು ಮಾರಾಟ ಅಂಗಡಿಗಳಲ್ಲಿ ಬೆಂಕಿಪೊಟ್ಟಣ, ಲೈಟರ್ ಮುಂತಾದ ಧೂಮಪಾನಕ್ಕೆ ಉತ್ತೇಜಿಸುವ ವಸ್ತುಗಳನ್ನು ತಂಬಾಕು ಮಾರಾಟವನ್ನು ಮಾಡುವಂತಹ ಅಂಗಡಿಗಳಲ್ಲಿ ಸಾರ್ವಜನಿಕರಿಗೆ ನೀಡಬಾರದು.

ಅನಧೀಕೃತ ತಂಬಾಕು ಉತ್ಪನ್ನಗಳ ಮಾರಾಟವು ಶಿಕ್ಷಾರ್ಹ ಅಪರಾಧವಾಗಿದ್ದು ಈ ರೀತಿಯಾಗಿ ಕಾನೂನು ಉಲ್ಲಂಘನೆ ಮಾಡುವ ಅಂಗಡಿಗಳ ಮಾಲೀಕರಿಗೆ ದಂಡ ವಿಧಿಸಿ ತಂಬಾಕಿನ ಉತ್ಪನ್ನಗಳ ಮಾರಾಟಕ್ಕೆ ಕಡ್ಡಾಯವಾಗಿ ಪರವಾನಗಿಯನ್ನು ಪಡೆಯಬೇಕು ಎಂದು ಹೇಳಿದರು.

ಕಾರ್ಯಾಚರಣೆಯಲ್ಲಿ ಕಾರ್ಯಾಚರಣೆಯಲ್ಲಿ ಗುಲಬರ್ಗಾ ಗ್ರೇಡ್–1 ತಹಶೀಲ್ದಾರ್ ಆನಂದ ಶೀಲವಂತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಡಾ.ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಸಮೀಕ್ಷಣ ಅಧಿಕಾರಗಳು ಡಾ.ರಾಕೇಶ್ ಕಾಂಬ್ಳೆ, ಮಹಾನಗರ ಪಾಲಿಕೆಯ ವೈದ್ಯಾಧಿಕಾರಿಗಳಾದ ಡಾ.ರಾಜೇಂದ್ರ ಭಾಲ್ಕೆ, ಆಹಾರ ಸುರಕ್ಷತಾ ಅಧಿಕಾರಿಗಳಾದ ಡಾ.ರತ್ನಾಕರ್ ತೋರಣ, ಕಲ್ಬುರ್ಗಿ ವಿಭಾಗೀಯ ಸಂಯೋಜ–ಕರಾದ ಶ್ರೀ ಮಹಾಂತೇಶ ಉಳ್ಳಾಗಡ್ಡಿ, ಜಿಲ್ಲಾ ಸಲಹೆಗಾರರಾದ ಶ್ರೀಮತಿ ಸುಜಾತ ಪಾಟೀಲ, ಸಮಾಜ ಕಾರ್ಯಕರ್ತರಾದ ಆರತಿ ಧನಶ್ರೀ, ಪೋಲಿಸ್ ಪೇದೆಗಳಾದ ರವಿ.ಎಂ ಬಿರಾದರ, ಶಾಂತಲಿಂಗ ಉಪಸ್ಥಿತರಿದ್ದರು.

**CITATION**

**IN THE COURT OF THE PRL., CIVIL JUDGE AND JMFC HUMNABAD AT HUMNABAD**

**CRL.MISC.No 1320 / 2025**

PETITIONERS : -

1) Mallappa So Saibanna Ag 64 Ro Mustari Tq Chitaguppa

Advocate SUBHASHRAO KUNDAN

2) Subash So Saibanna Age 62 Ro Mustari Tq Chitaguppa

3) Rajappa So Saibanna Age 60 Ro Mustari Tq Chitaguppa

4) Bandeppa So Saibanna Age 58 Ro Mustari Tq Chitaguppa Now at Rajendranagar Hydrabad.

5) Sursh So Saibanna Age 56 Ro Mustari Tq Chitaguppa Now at Lamigunda Rajendranagar Hydrabad

6) Nagashetty So Saibanna Age 47 Ro Mustari Tq Chitaguppa Dist Bidar

RESPONDENT :-

The Registrar of Birth and Death – through the Tahasildar, Chitaguppa

Whereas the above named petitioners have filed the petition under section 13(3) of Birth and Death Registration Act 1969 Praying this Honorable court to idssue Death certificate of Mother of petitioner No 1 to 6 Kashamma W/o Late Saibanna has died on 21-12-2018 Village Mustari Tq: Chitaguppa The petitioners claiming the death certificat of deceased Kashamma for transfer of property and other official purpose and home record. Therefore it is hereby proclaimed that if any person or persons have got any objection in this regard he/they may approach to this Honorable court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this this 19th day of July – 2025.

// By order of the court//

(SMT.MAHANANDA MATHAPATI)

Chief Ministerial Officer,

Prl.Civil Judge and JMFC court

Humnabad

**CITATION**

**IN THE COURT OF THE PRL., CIVIL JUDGE AND JMFC HUMNABAD AT HUMNABAD**

**CRL.MISC.No 1324 / 2025**

PETITIONERS : -

1) Mallappa Waggenor so Sharnappa Waggenor Ro Talmadgi Tq Chitaguppa

Advocate SUBHASHRAO KUNDAN

2) Tippamma Waggenor So Sharnappa Waggenor Age 62 Ro Talmadgi Tq Chitguppa

3) Fatima Akbar Khan Do Sharnappa Waggenor Age 69 Ro Talmadgi Tq Chitguppa

4) Dropathi Do Sharnappa Waggenor Age 72 Ro Markunda Tq Bidar

5) Anita wo Maruti Waggenor Age 49 Ro Talmadgi Tq Chitguppa

RESPONDENT :-

The Registrar of Birth and Death – through the Tahasildar, Humnabad.

Whereas the above named petitioners have filed the petition under section 13(3) of Birth and Death Registration Act 1969 Praying this Honorable court to idssue Death certificate of son of petitioner No.1and 2 and 3&4 are daughters, 5 is the daughters, 5 is the daughter – in law son and , 2 Dautghter– in law namely : Sharnappa s/o Khandappa Waggenor Has died on 25-12-1995 Village Talmadagi Tq: Chitguppa. The petitioners claming the death certificate of deceased Sharanappa for transfer of property and other official purpose and home record Therefore it is herby proclaimed that if any person or persons have got any objection in this rgard he/they may approach to this Honorable court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this this 19th day of July – 2025.

// By order of the court//

(SMT.MAHANANDA MATHAPATI)

Chief Ministerial Officer,

Prl.Civil Judge and JMFC court

Humnabad


ವಲಸೆ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಣೆ – ಕುರಿಗಾಹಿಗಳಿಗೆ ಇದು ರಕ್ಷ ಕವಚ.

# ಪಶು ಆಸ್ಪತ್ರೆಯಲ್ಲಿ ಪಶು ವೈದ್ಯರ ಅನುಪಸ್ಥಿತಿ ಸಲ್ಲದು, ಮಾನವೀಯತೆ ದೃಷ್ಟಿಯಿಂದ ಅವರಿಗೆ ಸಮಲತ್ತು ನೀಡಿ – ಶರಣಗೌಡ ಕಂದಕೂರ.

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ/ಗುರುಮಠಕಲ್: ಪಶುಪಾಲನ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಇಂದು ಗುರುಮಠಕಲ್ ಪಟ್ಟಣದ ಪಶು ಆಸ್ಪತ್ರೆಯಲ್ಲಿ ತಾಲೂಕಿನ ವಲಸೆ ಕುರಿಗಾಹಿಗಳಿಗೆ ಶಾಸಕರಾದ ಶರಣಗೌಡ ಕಂದಕೂರ ಅವರು ಗುರುತಿನ ಚೀಟಿ ವಿತರಣೆ ಮಾಡಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಾಸ್ತಾವಿಕ ನುಡಿಗಳ ನಾಡಿದ ಉಪನಿರ್ದೇಶಕರು ಆದ ರಾಜಗೋಪಾಲ್ ದೇಶಮುಖ್ ಅವರು 20 ಕ್ಕಿಂತ ಹೆಚ್ಚು ಕುರಿಗಳನ್ನು ಹೊಂದಿದ್ದು, ಒಂದು ಕಡೆಯಿಂದ ಇನ್ನೊಂದು ಕಡೆ ವಲಸೆ ಹೋಗುವ ಕುರಿಗಾಹಿಗಳಿಗೆ, ಸರಕಾರದಿಂದ ನೀಡಲಾಗಿರುವ ಈ ಗುರುತಿನ ಚೀಟಿ ಕುರಿಗಳ ಆರೈಕೆ,ಲಸಿಕೆ ಹಾಗೂ ಅಪಘಾತಗಳು, ಕುರಿಗಳ ಕಳವು ಆದಾಗ ಕುರಿಗಾಯಿಗಳಿಗೆ ರಕ್ಷಾ ಕವಚವಾಗಿ ಅವರ ನೆರವಿಗೆ ಬರಲಿದೆ, ಅಷ್ಟೇ ಅಲ್ಲದೆ ಕುರಿಗಾಹಿಗಳ ಮಕ್ಕಳು ಓದಲು ವಸತಿ ಶಾಲೆಗಳಲ್ಲಿ 10 ಪ್ರತಿಶತ ಮೀಸಲಾತಿ ಸಿಗುವುದು ಜಾನುವಾರು ಆಕಸ್ಮಿಕ ಸಾವು ಆದಾಗ ಮರಣೋತ್ತರ ಪರೀಕ್ಷೆ ಮಾಡಿ ಪರಿಹಾರ ಸಹ ಈ ಗುರುತಿನ ಚೀಟಿ ಹೊಂದಿರುವ ಕುರಿಗಾಹಿಗಳು ಪಡೆಯಬಹುದು ಎಂದು ಹೇಳಿದರು.

ತಾವು ಇರುವ ಸ್ಥಳದಲ್ಲಿಯೇ ಕುರಿಗಳಿಗೆ ಲಸಿಕೆ ಅವುಗಳ ಆರೈಕೆ, ವನ್ಯಜೀವಿಗಳಿಂದ ಕಳ್ಳರಿಂದ ಕುರಿಗಳ ರಕ್ಷಣೆಗೆ ಬಂದೂಕು ಸಹ ವಿತರಿಸಲಾಗುವುದು ಎಂದು ವಿವರಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶಾಸಕರು 113 ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸಿ ಈ ಗುರುತಿನ ಚೀಟಿಯ ಸದುಪಯೋಗ ಗ್ರಾಮೀಣ ಭಾಗದ ಜನರು ಈ ಗುರುತಿನ ಚೀಟಿ ಪಡೆಯುವುದರ ಮೂಲಕ ಸರಕಾರದ ಸೌಲಭ್ಯಗಳು ಪಡೆಯಬೇಕು, ಹೆಚ್ಚಿನ ಮಾಹಿತಿಯ ಕೊರತೆಯ ಕಾರಣ ಕಡಿಮೆ ಪ್ರಮಾಣದಲ್ಲಿ ಗುರುತಿನ ಚೀಟಿ ಪಡೆದಿದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಈ ಗುರುತಿನ ಚೀಟಿಯ ಲಾಭಗಳ ಕುರಿತು ತಿಳಿಸಿ ಈ ಗುರುತಿನ ಚೀಟಿ ಹೆಚ್ಚು ಜನರಿಗೆ ತಲುಪಿಸುವ ಕೆಲಸ ಮಾಡಲಾಗುವದು ಎಂದು ಹೇಳಿದರು.

ಪ್ರಭಾವಿಗಳು ಸರಕಾರಕ್ಕೆ ತಪ್ಪು ಮಾಹಿತಿ ನೀಡಿ ಬಂದೂಕು ಪಡೆದು ಅದರ ದುರ್ಬಳಕೆ ಮಾಡದಿರಲು ಹಾಗೂ ಪಶು ಆಸ್ಪತ್ರೆಗಳಲ್ಲಿ ಪಶು ವೈದ್ಯರು ಸಹ ಸ್ಥಿತಿ ಆಗದಂತೆ ಮಾನವೀಯತೆ ಆಧಾರದ ಮೇಲೆ ಪಶು ಸಂಗೋಪನೆ ಮಾಡುವವರಿಗೆ ಸೌಲತ್ತು ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪಶು ವೈದ್ಯಾಧೀಕಾರಿ ಶಶಿಕಿರಣ ಹಜಾರೆ, ಉಪನಿರ್ದೇಶಕರು ಶರಣಭೂಪಾಲರೆಡ್ಡಿ, ಸಂಜೀವ ರೆಡ್ಡಿ ಸಂಘದ ಅಧ್ಯಕ್ಷರು, ವಿಜಯಕುಮಾರ್ ಪಶು ವೈದ್ಯರು ಸೇರಿದಂತೆ ಸಿಬ್ಬಂದಿಗಳು ಮತ್ತು ವಿವಿಧ ಗ್ರಾಮಗಳಿಂದ ಬಂದಿರುವ ಕುರಿಗಾಹಿಗಳು ಹಾಜರಿದ್ದರು.

ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರಿಂದ ಜಲಧಾರೆ ಯೋಜನೆ ಕಾಮಗಾರಿಗಳ ಪರಿಶೀಲನೆ, ಓವರ್‌ಹೆಡ್ ಟ್ಯಾಂಕ್‌ನಿಂದ ಹಳ್ಳಿಗಳಿಗೆ ಪೈಪ್‌ಲೈನ್ ಯಾರ್ ಮಾಡ್ತಾರೆ?

# ಪೈಪ್‌ಲೈನ್ ಹಾಕ್ದೆ ನೀರ್ ಹ್ಯಾಂಗ್ ಕೊಡ್ತಿರಿ?

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ : ಜಲಧಾರೆ ಯೋಜನೆಯಡಿ ಬಹುದೊಡ್ಡ ಟ್ಯಾಂಕ್‌ಗಳನ್ನು ನಿರ್ಮಿಸುತ್ತಿದ್ದೀರಿ, ಆದರೆ ಆ ಟ್ಯಾಂಕ್‌ಗಳಿಂದ ಹಳ್ಳಿಗಳಿಗೆ ನೀರು ಸರಬರಾಜು ಮಾಡಲು ಪೈಪ್‌ಲೈನ್ ಯೋಜನೆ ನಿಮ್ಮಲ್ಲಿಲ್ಲ ಅಂದ ಮೇಲೆ ನೀರ್ ಹ್ಯಾಂಗ್ ನಮ್ಮ ಹಳ್ಳಿಗಳಿಗೆ ಕೊಡ್ತಿರಿ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಜಲಧಾರೆ ಕಾಮಗಾರಿ ಗುತ್ತಿಗೆದಾರ ತಂಡಕ್ಕೆ ಪ್ರಶ್ನೆ ಮಾಡಿದರು.

ಗುರುಮಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಜಲಧಾರೆ ಯೋಜನೆ ಕಾಮಗಾರಿಗಳನ್ನು ವೀಕ್ಷಿಸಿ ಅವರು ಮಾತನಾಡಿದರು.

ಓವರ್‌ಹೆಡ್ ಟ್ಯಾಂಕ್ ಏನೋ ಕಟ್ಟಿರಿ ಆದರೆ ಹಳ್ಳಿಗಳಿಗೆ ನೀರು ಸರಬರಾಜು ಮಾಡಬೇಕಾದ್ರೆ ಗ್ರಾಮ ಪಂಚಾಯತಿಯಲ್ಲಿ ನಿಮ್ಮ ಟ್ಯಾಂಕ್‌ನಿಂದ ನೀರು ಸರಬರಾಜು ಮಾಡಲು ಪೈಪ್‌ಲೈನ್ ಹಾಕಲು ಅಷ್ಟು ಹಣ ಇರೋದಿಲ್ಲ ಅಂದ ಮೇಲೆ ಸಾವಿರಾರು ಕೋಟಿ ರೂಪಾಯಿ ಯೋಜನೆ ಮಾಡಿ ಏನು ಉಪಯೋಗವಾಗುತ್ತದೆ ಎಂದು ಪ್ರಶ್ನಿಸಿದರು. ಜಲಾಧಾರೆ ಮತ್ತೊಂದು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಂತೆ ವಿಫಲವಾಗಬಾರದು ಅಂದರೆ ತಳಮಟ್ಟದಿಂದ ಎಲ್ಲವನ್ನು ಪರಿಶೀಲಿಸಬೇಕು, ಇದು ಕೇವಲ ಒಂದು ಹಳ್ಳಿಯ ಕಥೆಯಲ್ಲ ಇಡೀ ಜಿಲ್ಲೆಯ ಕಥೆಯಾಗಿದ್ದು, ಪೈಪ್‌ಲೈನ್ ಕಾಮಗಾರಿಗೆ ಸಾಕಷ್ಟು ಅನುದಾನ ಬೇಕಾಗಬಹುದು, ಇದಕ್ಕಾಗಿ ಆರ್‌ಡಬ್ಲುಪಿಎಸ್ ಅಧಿಕಾರಿಗಳು ಎಲ್ಲಾ ಜಲಧಾರೆ ಯೋಜನೆಯ ನೀರಿನ ಟ್ಯಾಂಕ್ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ಒಂದು ಅಂದಾಜು ಪಟ್ಟಿಯನ್ನು ತಯಾರಿಸಿ, ಜಿಲ್ಲಾ ಪಂಚಾಯತ್ ಸಿಇಒ ಮುಖಾಂತರ ಸರ್ಕಾರಕ್ಕೆ ಕಳುಹಿಸಿ, ಇದರ ಬಗ್ಗೆ ನಾನೂ ಕೂಡ ಸದನದಲ್ಲಿ ಚರ್ಚೆ ನಡೆಸುತ್ತೇನೆ ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ತಿಳಿಸಿದರು.

ಬಸವಂತಪೂರ, ಬಸವಂತಪೂರ ತಾಂಡಾ, ಹೋರುಂಚಾ, ಸೈದಾಪೂರ, ಚೆಪೆಟ್ಲಾ ಗ್ರಾಮಗಳಲ್ಲಿ ನಡೆಯುತ್ತಿರುವ ಕಾಮಗರಿಗಳನ್ನು ಪರಿಶೀಲಿಸಿ ಕಾಮಗಾರಿ ಗುಣಮಟ್ಟ ಕಾಪಾಡುವಂತೆ ಸೂಚಿಸಿದರು.

ಗುರುಮಠಕಲ್ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಜಲಧಾರೆ ಯೋಜನೆ ಗುತ್ತಿಗೆದಾರರು ಆ ಗ್ರಾಮಗಳಲ್ಲಿನ ಆರ್ ಒ ಪ್ಲಾಂಟ್ ದುರಸ್ತಿ ಮಾಡಿಸಿಕೊಡಬೇಕು, 10 ಸಾವಿರ ಲೀಟರ್ ಸಾಮರ್ಥ್ಯ ದ ಓವರ್ ಹೆಡ್ ಟ್ಯಾಂಕ್ ಗಳನ್ನು ಉನ್ನತಿಕರಣಗೊಳಿಸಿ 25 ಸಾವಿರ ಸಾಮರ್ಥ್ಯ ಕ್ಕೆ ಹೆಚ್ಚಿಸಿ, ಜಲಧಾರೆ ಸ್ಟೋರೇಜ್ ಟ್ಯಾಂಕ್ ನಿಂದ ಜೆಜೆಎಂ ಟ್ಯಾಂಕ್ ಗೆ ನೀರು ಸರಬರಾಜು ಮಾಡಲು ಪೈಪ್ ಲೈನ್ ಕಾಮಗಾರಿ ಮಾಡಲು ಯೋಜನೆ ತಯಾರಿಸಿ,ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಆರ್ ಡಬ್ಲ್ಯೂಎಸ್ ಇಇ ಆನಂದ, ಐರೆಡ್ಡಿ, ಜಲಧಾರೆ ಯೋಜನೆ ಗುತ್ತಿಗೆದಾರರು, ತಾಪಂ ಇಒ ಅಮರೇಶ ಪಾಟೀಲ, ಅರಣ್ಯ ಇಲಾಖೆ ಅಧಿಕಾರಿಗಳು, ಗ್ರಾಪಂ ಪಿಡಿಒಗಳು ಇದ್ದರು.

**ಕ್ರೀಯಾ ಯೋಜನೆ ಸಲ್ಲಿಸಿ**

ಆರ್‌ಡಬ್ಲುಎಸ್ ಮುಖ್ಯ ಇಂಜಿನಿಯರ್‌ಗೆ ಸ್ಥಳದಿಂದಲೇ ಫೋನ್ ಮಾಡಿದ ಶಾಸಕರು, ಜಿಲ್ಲೆಯಾದ್ಯಂತ ಜಲಧಾರೆ ಯೋಜನೆಯಡಿ ಕೇವಲ ಟ್ಯಾಂಕ್ ನಿರ್ಮಿಸಿ, ನೀರು ಸರಬರಾಜು ಮಾಡುವ ಯೋಜನೆ ಇಲ್ಲದಿದ್ದರೆ ವ್ಯರ್ಥವಾಗಲಿದ್ದು, ಕೂಡಲೇ ಈ ಯೋಜನೆಗೆ ಸಂಬಂಧಿಸಿದಂತೆ ಕ್ರೀಯಾ ಯೋಜನೆ ತಯಾರಿಸಿ, ಸರ್ಕಾರಕ್ಕೆ ಸಲ್ಲಿಸಬೇಕು, ಸಾಧ್ಯವಾದರೆ ನಾನು ಕೂಡ ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಚರ್ಚಿಸಿ ಮಂತ್ರಿಗಳಿಗೆ ಮಾಹಿತಿ ನೀಡುತ್ತೇನೆ, ಅದರ ಜೊತೆಗೆ ಅನುದಾನ ತರಲು ಸೂಕ್ತದಾರಿ ಸಿಗಲಿದೆ ಎಂದರು.

**ಪೈಪ್‌ಲೈನ್ ಪ್ಲಾನ್ ಇಲ್ಲಂದ್ರ ಪ್ರಾಜೆಕ್ಟ್ ವೇಷ್ಟ್**

ಇಡಿ ಜಿಲ್ಲೆಯಾದ್ಯಂತ ಜಲಧಾರೆ ಯೋಜನೆಯಡಿ ಕೇವಲ ಟ್ಯಾಂಕ್ ನಿರ್ಮಿಸಿ, ನೀರು ಸರಬರಾಜು ಮಾಡುವ ಯೋಜನೆ ಇದ್ದು, ಜಲ ಜೀವನ ಮಿಷನ್ ಟ್ಯಾಂಕ್‌ಗಳಿಗೆ ನೀರು ಸರಬರಾಜು ಮಾಡಲು ಪೈಪ್‌ಲೈನ್ ಕಾಮಗಾರಿ ಇಲ್ಲದಿದ್ದರೆ ಈ ಎಲ್ಲಾ ಪ್ರಾಜೆಕ್ಟ್ ವೇಷ್ಟ್ ಆಗುತ್ತದೆ. ಪೈಪ್‌ಲೈನ್ ಪ್ಲಾನ್ ಇಲ್ಲಂದ್ರ ಪ್ರಾಜೆಕ್ಟ್ ಮಾಡಿ ಏನು ಉಪಯೋಗ ಅಷ್ಟು ಹಣ ಗ್ರಾಪಂಗಳಲ್ಲಿ ಇರುವುದಿಲ್ಲ ನೀವು ಹೇಳಿದಷ್ಟು ಈ ಕೆಲಸ ಸುಲಭವಲ್ಲ ಅದನ್ನು ಕೂಡಲೇ ಪರಿಶೀಲಿಸಿ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

*ಗುರುಮಠಕಲ್ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಜಲಧಾರೆ ತಂಡ ತಾವು ಭರವಸೆ ಕೊಟ್ಟಂತೆ ಮತಕ್ಷೇತ್ರದ 64 ಹಳ್ಳಿಗಳಿಗೆ ಆರ್‌ಒ ಪ್ಲಾಂಟ್‌ಗಳನ್ನು ದುರಸ್ಥಿ ಮಾಡಿಕೊಡಬೇಕು ಎಂದು ತಾಕೀತು ಮಾಡಿದಾಗ ನಾವು ಸಿಎಸ್‌ಆರ್ ಫಂಡ್‌ನಲ್ಲಿ ಹೈದರಾಬಾದ್‌ನಲ್ಲಿ ಒಂದು ಯುನಿವರ್ಸಿಟಿ ಕಟ್ಟುತ್ತಿದ್ದೇವೆ ಎಂದಾಗ ಶಾಸಕ ಕಂದಕೂರ ಗರಂ ಆದರು, ಅಲ್ರಿ ನಮ್ ಭಾಗ ಅತ್ಯಂತ ಹಿಂದುಳಿದಿದೆ 1600 ಕೋಟಿ ಪ್ರಾಜೆಕ್ಟ್ ಇದು, ಇಲ್ಲಿ ಅಭಿವೃದ್ಧಿ ಮಾಡಬೇಕಾ ಹೈದರಾಬಾದ್‌ನಲ್ಲಿ ಮಾಡ್ತಿವಿ ಅಂತ ಹೇಳ್ತಿರಲ್ಲ, ಯಾವುದೇ ಸಬೂಬು ನೀಡದೇ ಇಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಕೈಜೋಡಿಸಿ ಎಂದು ತಾಕೀತು ಮಾಡಿದರು.

ಜಲಧಾರೆಗೆ ಸಂಭಂಧಪಟ್ಟಂತೆ ಗುರುಮಠಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಈಗಾಗಲೇ 99 ನೀರಿನ ಟ್ಯಾಂಕ್ ನಿರ್ಮಾಣ ಯೋಜನೆ ರೂಪಿಸಲಾಗಿದೆ. ಅದರಲ್ಲಿ 11 ಉನ್ನತಿಕರಿಸುವುದು ಮತ್ತು 15 ಹೆಚ್ಚುವರಿ ಟ್ಯಾಂಕ್‌ಗಳ ನಿರ್ಮಾಣ ಮಾಡಲು ಸೂಚಿಸಲಾಗಿದೆ.

ಗುರುಮಠಕಲ್ ಮತಕ್ಷೇತ್ರದಲ್ಲಿ ಜಲಧಾರೆ ಯೋಜನೆಗೆ ಸಂಬಂಧಿಸಿದಂತೆ 691 ಕಿ.ಮೀ. ಪೈಪ್‌ಲೈನ್ ಕಾಮಗಾರಿ ನಡೆಯಲಿದ್ದು, ಅದರಲ್ಲಿ ಸದ್ಯ 406 ಕಿ.ಮೀ. ಪೂರ್ಣಗೊಂಡಿ–ದ್ದು, ಇನ್ನುಳಿದ 285 ಕಿ.ಮೀ. ಕಾಮಗಾರಿ ಪ್ರಗತಿಯಲ್ಲಿದೆ ಎಂದು ಜಲಧಾರೆ ಗುತ್ತಿಗೆದಾರರ ತಂಡ ಮಾಹಿತಿ ನೀಡಿತು.

# ಮಾವಿನಕೆರೆಗೆ ಜಿಲ್ಲಾಧಿಕಾರಿಗಳು, ಪಾಲಿಕೆಯ ಆಯುಕ್ತರು ಭೇಟಿ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು, ಜುಲೈ 23–ನಗರದ ಮಾವಿನಕೆರೆ ಪ್ರದೇಶಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯು ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಜುಲೈ 21ರಂದು ಭೇಟಿ ನೀಡಿ ಪರಿಶೀಲಿಸಿದರು.

ಇದೆ ವೇಳೆ ಅವರು, ಕೆರೆ ಅಭಿವೃದ್ಧಿ ಕಾಮಗಾರಿಯ ವೀಕ್ಷಣೆ ನಡೆಸಿದರು. ಮಾವಿನಕೆರೆಗೆ ಬೇರೆ ಬೇರೆ ಕಡೆಗಳಿಂದ ಗಟಾರು ನೀರು ಹರಿದು ಬಂದು ಕೆರೆಯ ನೀರು ಕಲುಷಿತವಾಗುತ್ತಿದೆ ಎಂದು ಸಾರ್ವಜನಿಕರು ದೂರುತ್ತಿರುವ ಹಿನ್ನೆಲೆಯಲ್ಲಿ ಗಟಾರು ನೀರು ಕೆರೆಗೆ ಹರಿಯದೇ ಬೇರೆಡೆ ಸಾಗಿಸುವ ಬಗ್ಗೆ ಇದೆ ವೇಳೆ ಚರ್ಚಿಸಲಾಯಿತು.

ಸಾರ್ವಜನಿಕರು ಕೆರೆಗೆ ಕಸ ಮತ್ತು ಪ್ಲಾಸ್ಟಿಕ್ ಎಸೆಯದಂತೆ ಕೆರೆಯ ಸುತ್ತಲು ಕಾವಲು ವ್ಯವಸ್ಥೆಯನ್ನು ಸಿಬ್ಬಂದಿಯ ಮೂಲಕ ಖಾಯಂಗೊಳಿಸುವುದರ ಬಗ್ಗೆ ಸಹ ಇದೆ ವೇಳೆ ಚರ್ಚಿಸಲಾಯಿತು. ಇದೆ ವೇಳೆ ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಇನ್ನಿತರರು ಇದ್ದರು.


**CITATION**

**IN THE COURT OF THE PRL., CIVIL JUDGE AND JMFC HUMNABAD AT HUMNABAD**

**CRL.MISC.No 1321 / 2025**

PETITIONERS : -

1) Mallappa So Saibanna Ag 64 Ro Mustari Tq Chitaguppa

Advocate SUBHASHRAO KUNDAN

2) Subash So Saibanna Age 62 Ro Mustari Tq Chitaguppa.

3) Rajappa So Saibanna Age 60 Ro Mustari Tq Chitaguppa

4) Bandeppa So Saibanna Age 58 Ro Mustari Tq Chitaguppa Now at Rajendranagar Hydrabad.

5) Suresh So Saibanna Age 56 Ro Mustari Tq Chitaguppa Now at Lamigunda Rajendranagar Hydrabad.

6) Nagashetty So Saibanna Age 47 Ro Mustari Tq Chitaguppa Dist Bidar.

RESPONDENT :-

The Registrar of Birth and Death – through the Tahasildar, Chitaguppa

Whereas the above named petitioners have filed the petition under section 13(3) of Birth and Death Registration Act 1969 Praying this Honorable court to issue Death certificate of Father of petitioner No 1 to 6 Saibanna S/o Bandeppa has died on 28-05-2020 Village Mustari Tq: Chitaguppa The petitioners claiming the death certificat of deceased Saibanna for transfer of property and other official purpose and home record. Therefore it is here by proclaimed that if any person or persons have got any objection in this regard he/they may approach to this Honorable court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 19th day of July – 2025.

// By order of the court//

(SMT.MAHANANDA MATHAPATI)

Chief Ministerial Officer,

Prl.Civil Judge and JMFC court

Humnabad

**CITATION**

**IN THE COURT OF THE PRL., CIVIL JUDGE AND JMFC HUMNABAD AT HUMNABAD**

**CRL.MISC.No 1325 / 2025**

PETITIONERS : -

1) Mallappa Waggenor so Sharnappa Waggenor Ro Talmadgi Tq Chitaguppa

Advocate SUBHASHRAO KUNDAN

2) Tippamma Waggenor So Sharnappa Waggenor Age 62 Ro Talmadagi Tq Chitagauppa

3) Fatima Akbar Khan Do Sharnappa Waggenor Age 69 Ro Talmadgi Tq Chitaguppa

4) Dropathi Do Sharnappa Waggenor Age 72 Ro Markunda Tq Bidar

5) Anita wo Maruti Waggenor Age 49 Ro Talmadgi Tq Chitaguppa

RESPONDENT :-

The Registrar of Birth and Death – through the Tahasildar, Humnabad.

Whereas the above named petitioners have filed the petition under section 13(3) of Birth and Death Registration Act 1969 Praying this Honorable court to idssue Death certificate of Mother of petitioner No.1 and 2 sons and 3&4 are daughters, 5 is the daughter -in law son and .2 Daughter and dautghter – in law namely : Maremma w/o Sharnappa Waggenor has died on 02-04-1999 Village Talmadagi Tq: Chitguppa The petitioners claming the death certificate of deceased Maremma for transfer of property and other official purpose and home record Therefore it is herby proclaimed that if any person or persons have got any objection in this rgard he/they may approach to this Honorable court on 28/08/2025 at 11.00AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this this 19th day of July – 2025.

// By order of the court//

(SMT.MAHANANDA MATHAPATI)

Chief Ministerial Officer,

Prl.Civil Judge and JMFC court

Humnabad

## ಜು.25 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಬೆಂಗಳೂರಿನ ವೇರ್ ಹೌಸ್ ಆಸೋಸಿಯೇಟ್‌ನ ಎಸ್‌ಕೆ ಸೇಫ್ಟಿ ವಿಂಗ್ಸ್ ಪ್ರೈವೇಟ್ ಲಿಮಿಟೆಡ್ ನಲ್ಲಿ ಖಾಲಿ ಇರುವ ಹುದ್ದೆಗಳಿಗೆ ಜು.25 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಹರು ಭಾಗವಹಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಹಟ್ಟಪ್ಪ ಅವರು ತಿಳಿಸಿದ್ದಾರೆ.

**ವಿದ್ಯಾರ್ಹತೆ:**

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗಪಡೆದುಕೊಳ್ಳಬೇಕು. ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ–ವಿವರ (ಬಯೋಡೇಟಾ)ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086, 9900827768, 6360408094 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿ ಜೆಸ್ಕಾಂ: ಆನ್‌ಲೈನ್ ಸೇವೆಗಳಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಕಂಪ್ಲಿ ಜೆಸ್ಕಾಂ ಉಪವಿಭಾಗದ ಆರ್‌ಎಪಿಡಿಆರ್‌ಪಿ ಸಾಫ್ಟವೇರ್‌ನ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಕಂಪ್ಲಿ ಪಟ್ಟಣ ವ್ಯಾಪ್ತಿಯಲ್ಲಿ ಜು.25 ರ 08.30 ರಿಂದ ಜು.27 ರಾತ್ರಿ 10 ಗಂಟೆಯವರೆಗೆ 2 ದಿನಗಳ ಕಾಲ ಕಂಪ್ಲಿ ಜೆಸ್ಕಾಂನ ಆನ್‌ಲೈನ್‌ನಲ್ಲಿ ನೆಟ್‌ವರ್ಕ್ ಲಭ್ಯವಿರದ ಕಾರಣ ಬಿಲ್ ಪಾವತಿ ಹಾಗೂ ಇತ–ರೆ ಆನ್‌ಲೈನ್ ಸೇವೆಗಳಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಂಪ್ಲಿ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವಯೋಶ್ರೇಷ್ಠರಿಗೆ ರಾಜ್ಯ ಪ್ರಶಸ್ತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಅ.01 ರಂದು ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಹಿರಿಯ ನಾಗರಿಕರು ವಿವಿಧ ಕ್ಷೇತ್ರಗಳಲ್ಲಿ (ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ, ಕ್ರೀಡೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ) ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಹೆಚ್.ಗೋವಿಂದಪ್ಪ ಅವರು ತಿಳಿಸಿದ್ದಾರೆ.

ರಾಜ್ಯಮಟ್ಟದಲ್ಲಿ 06 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ಸೇರಿದಂತೆ ಒಟ್ಟು 07 ಪ್ರಶಸ್ತಿಗಳನ್ನು ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ವ್ಯಾಪ್ತಿಯಲ್ಲಿ ಅರ್ಹ ಹಿರಿಯ ನಾಗರಿಕರು ಹಾಗೂ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಿಂದ ನಿಗದಿತ 1 ಮತ್ತು 2ರ ನಮೂನೆಯ ಅರ್ಜಿಯ ಎಲ್ಲಾ ಕಲಂಗಳನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಆಗಸ್ಟ್ 25 ರೊಳಗಾಗಿ ದ್ವಿಪ್ರತಿಯಲ್ಲಿ ಪ್ರಸ್ತಾವನೆಯನ್ನು ಕಚೇರಿಗೆ ಸಲ್ಲಿಸಬೇಕು.

ಮಾಹಿತಿಗಾಗಿ ವೆಬ್‌ಸೈಟ್ www.dwdsc.karnataka.gov.in ಗೆ ಭೇಟಿ ನೀಡಿ ಪರಿಶೀಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.08392–267886 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಬಳ್ಳಾರಿ(ನಗರ) ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಒಟ್ಟು 15 ಅಂಗನವಾಡಿ ಸಹಾಯಕಿಯರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ಈಗಾಗಲೇ ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಯ್ಕೆಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು ಎಂದು ಬಳ್ಳಾರಿ ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

ಆಯ್ಕೆಪಟ್ಟಿಯನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ತಹಶೀಲ್ದಾರರ ಕಚೇರಿ, ತಾಲ್ಲೂಕು ಪಂಚಾಯತ್, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಆ.08 ಕೊನೆಯ ದಿನ. ಆಕ್ಷೇಪಣೆಗಳನ್ನು ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.08392–268609 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರುಗುಪ್ಪ: ಹುದ್ದೆಗಳ ನೇಮಕಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಸಿರುಗುಪ್ಪದ ಕ್ಷೇತ್ರ ಸಂಪನ್ಮೂಲ ಕೇಂದ್ರದಲ್ಲಿ ರಾಜ್ಯ ಯೋಜನಾ ಕಚೇರಿ ವತಿಯಿಂದ ಸಮನ್ವಯ ಶಿಕ್ಷಣ ಕಾರ್ಯತಂತ್ರದಡಿ 2025–26ನೇ ಸಾಲಿಗೆ ಸಿರುಗುಪ್ಪದ ಎಸ್‌ಆರ್‌ಪಿ ಕೇಂದ್ರದಲ್ಲಿ ಖಾಲಿ ಇರುವ ಫಿಜಿಯೋಥೆರಪಿಸ್ಟ್ ಮತ್ತು ಸಹಾಯಕರ ಹುದ್ದೆಗಳ ನೇಮಕಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

**ವಿದ್ಯಾರ್ಹತೆ:**

ಫಿಜಿಯೋಥೆರಪಿಸ್ಟ್ ಹುದ್ದೆಗೆ ಬಿಪಿಟಿ/ ಡಿಪಿಟಿ ಮತ್ತು ಸಹಾಯಕರ ಹುದ್ದೆಗೆ 7ನೇ ತರಗತಿ ಉತ್ತೀರ್ಣರಾಗಿರಬೇಕು.

ಅರ್ಜಿಯನ್ನು ಜು.26 ರೊಳಗಾಗಿ ಸಿರುಗುಪ್ಪ ಕ್ಷೇತ್ರ ಸಂಪನ್ಮೂಲ ಕೇಂದ್ರ ಕಚೇರಿಯಲ್ಲಿ ಸಲ್ಲಿಸಬೇಕು ಎಂದು ಸಿರುಗುಪ್ಪ ಕ್ಷೇತ್ರ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆ.15 ರಂದು ಜಿಲ್ಲಾ ಕೇಂದ್ರದಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ

## ಅಚ್ಚುಕಟ್ಟಾಗಿ ಆಯೋಜಿಸಲು ಸಕಲ–ಸಿದ್ಧತೆ ಮಾಡಿಕೊಳ್ಳಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಬರುವ ಆಗಸ್ಟ್ 15 ರಂದು 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಕೇಂದ್ರದಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ಬೇಕಾದ ಎಲ್ಲಾ ರೀತಿಯ ಸಕಲ–ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾ ಕೇಂದ್ರದಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಆಯೋಜನೆ ಕುರಿತಂತೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಬಾರಿ ಜಿಲ್ಲಾ ಕೇಂದ್ರದಲ್ಲಿ ನಡೆಯುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಕಂದಾಯ ಸಚಿವರಾದ ಕೃಷ್ಣೆ ಬೈ–ರೇಗೌಡ ಅವರು ಧ್ವಜಾರೋಹಣ ನೆರವೇರಿಸಿ, ಧ್ವಜಾರೋಹಣದ ಸಂದೇಶ ನೀಡುವರು. ಹಾಗಾಗಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿಯ ಮಾಹಿತಿ ಮತ್ತು ವಿವಿಧ ಇಲಾಖೆಗಳ ಅಭಿವೃದ್ಧಿ ಕಾರ್ಯಗಳ ಪ್ರಗತಿ ಕಾರ್ಯದ ಪೂರ್ಣ ಮಾಹಿತಿ ಲಭ್ಯತೆಯಲ್ಲಿಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಕೇಂದ್ರದಲ್ಲಿ ಆ.15 ರಂದು ಬೆಳಿಗ್ಗೆ 08 ಕ್ಕೆ ನಗರದ ಡಾ.ರಾಜ್‌ಕುಮಾರ್ ಉದ್ಯಾನವನದ ಮಹಾತ್ಮಗಾಂಧೀಜಿಯವರ ಪುತ್ಥಳಿಗೆ ಪುಷ್ಪಾರ್ಚನೆ, 8.15 ಕ್ಕೆ ಹೆಚ್.ಆರ್.ಗವಿಯಪ್ಪ ವೃತ್ತದ ಬಳಿ ಬೃಹತ್ ಸ್ಥಂಬದಲ್ಲಿ ಧ್ವಜಾರೋಹಣಾ, 8.30 ಕ್ಕೆ ಬಿಎಂಸಿಆರ್‌ಸಿ ಬಳಿಯ ಮಹಾತ್ಮ ಗಾಂಧೀಜಿಯವರ ಪ್ರತಿಮೆಗೆ ಪುಷ್ಪನಮನ, 8.45 ಕ್ಕೆ ಬಿಎಂಸಿಆರ್‌ಸಿ ಮೈದಾನದಲ್ಲಿ ವಿವಿಧ ತುಕಡಿಗಳಿಂದ ಗೌರವ ವಂದನೆ ಸ್ವೀಕಾರ, ತುಕಡಿಗಳಿಂದ ಪರೇಡ್ ವೀಕ್ಷಣೆಯ ಬಳಿಕ 09 ಗಂಟೆಗೆ ಧ್ವಜಾರೋಹಣಾ ನೆರವೇರಿಸಿ ಸಂದೇಶ ನೀಡುವರು ಎಂದು ತಿಳಿಸಿದರು.

ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಸಮಿತಿಗಳನ್ನು ರಚಿಸಿದ್ದು, ಎಲ್ಲರ ಸಹಮತ, ಸಹಭಾಗಿತ್ವ ಮತ್ತು ಸಮನ್ವಯತೆಯೊಂದಿಗೆ ಯಾವುದೇ ಲೋಪದೋಷವಾಗದಂತೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೈಕ್, ಶಾಮಿಯಾನ, ಆಸನಗಳು, ಉಪಹಾರ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ ಹಾಗೂ ಇತರೆ ವ್ಯವಸ್ಥೆಗಳನ್ನು ಪರಿಪೂರ್ಣವಾಗಿ ಸಿದ್ಧತೆಯಲ್ಲಿಟ್ಟುಕೊಳ್ಳಬೇಕು. ಮುಖ್ಯವಾಗಿ ಹವಮಾನ ಕುರಿತು ಅಗತ್ಯ ಮುಂಜಾಗ್ರತೆ ವಹಿಸಬೇಕು. ಯಾವುದೇ ಕೊರತೆಯಾಗದಂತೆ ಸುವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಪರೇಡ್ ಆಯೋಜನೆಗೆ ಸಂಬಂಧಿಸಿದಂತೆ ಅಗತ್ಯ ತಕ್ಕಂತೆ ಶಾಲಾ ತಂಡಗಳನ್ನು ಆಯ್ದುಕೊಂಡು ಪೂರ್ವ ತಯಾರಿ ನಡೆಸಬೇಕು. ಈ ಸಂದರ್ಭದಲ್ಲಿ ಲಘು ಉಪಹಾರ, ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು ಎಂದು ಆಹಾರ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ರಾಷ್ಟ್ರ ಮತ್ತು ರಾಜ್ಯ ಮಟ್ಟದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಸನ್ಮಾನಿಸಲಾಗುವುದು. ಸಮಿತಿ ರಚಿಸಿ ಅರ್ಹರನ್ನು ಆಯ್ಕೆ ಮಾಡಬೇಕು. ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲು ಅಧಿಕಾರಿಗಳು ಮುತುವರ್ಜಿ ವಹಿಸಬೇಕು. ಕಾರ್ಯಕ್ರಮ ಸಂದರ್ಭದಲ್ಲಿ ವಿದ್ಯುತ್ ಪೂರೈಕೆ ನಿರಂತರವಾಗಿರಬೇಕು. ಅಡಚಣೆ ಉಂಟಾದಲ್ಲಿ ಪರ್ಯಾಯ ವ್ಯವಸ್ಥೆ ಸಿದ್ಧತೆಯಲ್ಲಿಟ್ಟುಕೊಂಡಿರಬೇಕು ಎಂದರು.

ಸಚಿವರ ಸಂದೇಶದ ಬಳಿಕ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಕಾರ್ಯಕ್ರಮಕ್ಕೆ ಪೂರಕವಾದ ಗೀತೆಗಳ ನೃತ್ಯ ಆಯೋಜಿಸಬೇಕು ಮತ್ತು ಅದೇ ದಿನದಂದು ಸಂಜೆ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕ್ರಮ ವಹಿಸಬೇಕು ಎಂದು ತಿಳಿಸಿದರು.

*ಕಡ್ಡಾಯವಾಗಿ ಪಾಲ್ಗೊಳ್ಳಿ:*

ರಾಷ್ಟ್ರೀಯ ಹಬ್ಬಗಳಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಭಾಗವಹಿಸಬೇಕು. ಈ ಕುರಿತು ಜಿಲ್ಲಾ ಮಟ್ಟದ ಎಲ್ಲಾ ಕಚೇರಿಗಳಿಗೆ ಆದೇಶ ಹೊರಡಿಸಲಾಗುವುದು ಎಂದರಲ್ಲದೇ, ಅಧಿಕಾರಿಗಳು ತಮ್ಮ–ತಮ್ಮ ಕಚೇರಿಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಅದೇ ರೀತಿಯಾಗಿ ನಗರದ ಮುಖ್ಯ ವೃತ್ತಗಳನ್ನು ಸಹ ದೀಪಾಲಂಕಾರ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಸಹಾಯಕ ಆಯುಕ್ತ ಪ್ರಮೋದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## 150 ಫಲಾನುಭವಿಗಳಿಗೆ ದ್ವಿಚಕ್ರ ವಾಹನ ವಿತರಿಸಿದ ಶಾಸಕ ಬಿ.ನಾಗೇಂದ್ರ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ 2022–23 ನೇ ಸಾಲಿನ ಸಚಿವರ ವಿಶೇಷ ಅನುದಾನದಡಿ ದ್ವಿಚಕ್ರ ವಾಹನ ವಿತರಣೆ ಯೋಜನೆಯಡಿ ಆಯ್ಕೆಯಾದ 150 ಫಲಾನುಭವಿಗಳಿಗೆ ಬಳ್ಳಾರಿ ತಾಲ್ಲೂಕು ಪಂಚಾಯತ್ ಕಾರ್ಯಾಲಯದ ಆವರಣದಲ್ಲಿ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ದ್ವಿಚಕ್ರ ವಾಹನಗಳನ್ನು ಸೋಮವಾರ ವಿತರಿಸಿದರು.

ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿ ಮಾತನಾಡಿದ ಅವರು, ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ, ಜೊತೆಗೆ ಅಭಿವೃದ್ಧಿ ಕಾಮಗಾರಿಗಳಿಗೂ ಒತ್ತು ನೀಡುವ ಮೂಲಕ ನಮ್ಮ ಸರ್ಕಾರ ದೇಶದಲ್ಲಿಯೇ ಮಾದರಿ ಸರ್ಕಾರವಾಗಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಮತ್ತು ಯುವನಿಧಿಗಳ ಮೂಲಕ ವಾರ್ಷಿಕವಾಗಿ ಸುಮಾರು 62 ಸಾವಿರ ಕೋಟಿ ರೂ. ಅನುದಾನ ಜನರಿಗೆ ನೀಡಲಾಗುತ್ತಿದೆ. ಜನರೇ ಮೆಚ್ಚಿ ಹೊಗಳುವಂತಹ ಕೆಲಸಕ್ಕೆ ಇತ್ತೀಚೆಗೆ ವಿಜಯನಗರ ಜಿಲ್ಲೆಯಲ್ಲಿ ಆಯೋಜಿಸಿದ್ದ ಸಾಧನಾ ಸಮಾವೇಶ ಕಾರ್ಯಕ್ರಮವೇ ಸಾಕ್ಷಿಯಾಗಿತ್ತು ಎಂದರು.

ಬಳ್ಳಾರಿ ಜಿಲ್ಲೆಯಲ್ಲಿ ಎಲ್ಲಾ ಅಭಿವೃದ್ಧಿ ಕಾರ್ಯಗಳು ಸುಗಮವಾಗಿ ನಡೆಯುತ್ತಿವೆ. ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಗಾಂಜಾ ಮಾರಾಟ, ಜೂಜು ದಂಧೆಗಳಿಗೆ ಕಡಿವಾಣ ಹಾಕಲು ಈಗಾಗಲೇ ನಮ್ಮ ಸರ್ಕಾರದಿಂದ 'ಮನೆ–ಮನೆಗೆ ಪೊಲೀಸ್' ಎಂಬ ವಿನೂತನ ಕಾರ್ಯಕ್ರಮ ಆರಂಭಿಸಿದ್ದು, ಜಿಲ್ಲೆಯಲ್ಲಿಯೂ ಸಹ ಹಂತ–ಹಂತವಾಗಿ ಅನುಷ್ಠಾನಗೊಳಿಸಲಾಗುವುದು. ಎಲ್ಲಾ ವರ್ಗದವರನ್ನು ಮುನ್ನಲೆಗೆ ತರುವಂತಹ ಕೆಲಸ ನಮ್ಮ ಸರ್ಕಾರ ಮಾಡುತ್ತಿದೆ ಎಂದರು.

ಈ ವೇಳೆ ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ ಗೌಡ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು, ಬಳ್ಳಾರಿ ತಾಲ್ಲೂಕು ಅಧಿಕಾರಿ ಗಾದಿಲಿಂಗಪ್ಪ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕ ಮಲ್ಲಿಕಾರ್ಜುನ, ಬಳ್ಳಾರಿ ತಾಲ್ಲೂಕು ವ್ಯವಸ್ಥಾಪಕ ರೇವಣ್ಣ ಸಿದ್ದಪ್ಪ, ಬಳ್ಳಾರಿ ತಾಪಂ ಇಓ ಶ್ರೀಧರ್ ಐ ಬಾರಿಕಾರ ಸೇರಿದಂತೆ ಇತರರು ಇದ್ದರು.

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ: ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಪ್ರಸ್ತಕ ಸಾಲಿನಲ್ಲಿ ಕೇಂದ್ರ ಸರ್ಕಾರವು ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಜಿಲ್ಲೆಯ ವ್ಯಕ್ತಿ ಮತ್ತು ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

**ಬೇಕಾದ ದಾಖಲೆ:**

2 ಪಾಸ್‌ಪೋರ್ಟ್ ಭಾವಚಿತ್ರ (ವೈಯಕ್ತಿಕ ವಿಭಾಗ), ಅರ್ಜಿದಾರರ ವ್ಯಕ್ತಿ ಮತ್ತು ಸಂಸ್ಥೆಗಳ ಸ್ವವಿವರ ಹಾಗೂ ಸಾಧನೆಗಳ ಸಾರಾಂಶ ಪೂರಕ ದಾಖಲೆ, ಡ್ರಾಫ್ಟ್ ಸೈಟೇಷನ್(1 ಪುಟಕ್ಕೆ ಮೀರದಂತೆ) ಹಾಗೂ ಇತರೆ ದಾಖಲೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು www.awards.gov.in ಅಥವಾ www.depwd.gov.in ವೆಬ್–ಸೈಟ್ ಗೆ ಭೇಟಿ ನೀಡಬಹುದು.

ಆನ್‌ಲೈನ್‌ನಲ್ಲಿ ತಮ್ಮ ಎಲ್ಲಾ ದಾಖಲಾತಿಗಳನ್ನು ಭರ್ತಿ ಮಾಡಿ ಸಲ್ಲಿಸಿದ ಅರ್ಜಿ ಮತ್ತು ದಾಖಲೆಗಳ ಪ್ರತಿಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜು.31 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392–267886 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ

### ಕುರುಗೋಡು: ವಿವಿಧ ಗ್ರಾಮ ಪಂಚಾಯತ್ ಗಳಿಗೆ ಕೇಂದ್ರ

## ಮಾನಿಟರಿಂಗ್ ಅಧಿಕಾರಿಗಳು ಭೇಟಿ ಮತ್ತು ಪರಿಶೀಲನೆ



ಬಳ್ಳಾರಿ,ಜು.23–ಕುರುಗೋಡು ತಾಲ್ಲೂಕಿನ ಕೋಳೂರು ಹಾಗೂ ಓರ್ವಾಯಿ ಗ್ರಾಮ ಪಂಚಾಯತ್ ಗಳಿಗೆ ಕೇಂದ್ರ ಮಾನಿಟರಿಂಗ್ (ಎನ್‌ಎಲ್‌ಎಂ) ಅಧಿಕಾರಿಗಳಾದ ಡಾ.ದಯಾಕರ ರೆಡ್ಡಿ ಹಾಗೂ ಚೂಡಾಮಣಿ ರೆಡ್ಡಿ ತಂಡವು ಇತ್ತೀಚೆಗೆ ಭೇಟಿ ನೀಡಿ ವಿವಿಧ ಕಾಮಗಾರಿ ಮತ್ತು ಯೋಜನೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಕೋಳೂರು ಗ್ರಾಪಂ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಸಾಮಾಗ್ರಿ ಆಧಾರಿತ ಕಾಮಗಾರಿಗಳಾದ ಗ್ರಾಮ ಪಂಚಾಯತಿ ಕಟ್ಟಡ, ಎನ್‌ಆರ್‌ಎಲ್‌ಎನ್ ಶೇಡ್, ಮೆಟಲ್ ರಸ್ತೆ, ದನಗಳ ಶೆಡ್‌ಗಳ ಕಾಮಗಾರಿಗಳನ್ನು ಪರಿಶೀಲಿಸಿದರು. ಪ್ರಧಾನಮಂತ್ರಿ ಅವಾಜ್ ಯೋಜನೆಯಡಿ ನಿರ್ಮಾಣ ಹಂತದ ಮನೆಗಳು, ಮನರೇಗಾ ಯೋಜನೆಯಡಿ ಕಾಲುವೆ ಹೂಳು ತೆಗೆಯುವ ಕಾಮಗಾರಿ, ಸಾಮಾಜಿಕ ಅರಣ್ಯ ವಲಯದ ಮನರೇಗಾ ಯೋಜನೆಯಡಿ ಕಳೆದ ವರ್ಷ ಪೂರ್ಣಗೊಂಡ ಕಾಮಗಾರಿ, ತೋಟಗಾರಿಕೆ ಇಲಾಖೆಯ ಮನರೇಗಾ ಯೋಜನೆಯಡಿ ವೈಯಕ್ತಿಕ ದಾಳಿಂಬೆ ಕಾಮಗಾರಿ, ಪ್ರಧಾನ ಮಂತ್ರಿ ಸಡಕ್ ಯೋಜನೆಯಡಿ ಮದಿರೆ ಗ್ರಾಮದಿಂದ ವದ್ದಟ್ಟಿ ಗ್ರಾಮದವರೆಗೆ ಮುಖ್ಯರಸ್ತೆಯವರೆಗೆ ನಿರ್ಮಾಣ ಮಾಡಲಾಗಿರುವ ಡಾಂಬಾರ್ ರಸ್ತೆಗಳು ಸೇರಿದಂತೆ ಮನರೇಗಾ ಯೋಜನೆಯಡಿ 7 ವಹಿ ಹಾಗೂ ಇನ್ನಿತರ ಸ್ಥಳಗಳನ್ನು ಪರಿಶೀಲಿಸಿದರು.

ಬಳಿಕ ಕೂಲಿಕಾರರು ಮತ್ತು ಫಲಾನುಭವಿಗಳ ಜೊತೆಗೆ ಚರ್ಚಿಸಿ ಸಂವಾದ ನಡೆಸಿದರು. ಗ್ರಾಮ ಲೆಕ್ಕಾಧಿಕಾರಿಗಳ ಜೊತೆಗೆ ಸಂವಾದ ನಂತರ ಗ್ರಾಮದ ವಿಶೇಷ ಚೇತನರು, ವೃದ್ಧರು ಹಾಗೂ ವಿಧವೆಯರ ಪಿಂಚಣಿ ಕುರಿತು ಅವರನ್ನು ನೇರವಾಗಿ ಕೇಳುವುದರ ಮೂಲಕ ಮಾತುಕತೆ ನಡೆಸಿದರು.

ಎನ್‌ಆರ್‌ಎಲ್‌ಎನ್ ಸ್ವಸಹಾಯ ಸಂಘದ ಕುರಿತು ಹಾಗೂ ಸ್ವಸಹಾಯ ಸಂಘದ ಕಾರ್ಯಚಟುವಟಿಕೆಗಳ ಕುರಿತು ಸಂಘದ ಪ್ರತಿನಿಧಿಗಳ ಜೊತೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಕುರುಗೋಡು ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ವಿ.ನಿರ್ಮಲ, ತಾಪಂ ಸಹಾಯಕ ನಿರ್ದೇಶಕ ಪಿ.ಶಿವರಾಮರೆಡ್ಡಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಾದ ಜುಬೇದ, ತಿಮ್ಮಪ್ಪ, ಗ್ರಾಮ ಲೆಕ್ಕಾಧಿಕಾರಿ ಮಾರುತಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳಾದ ರಾಘವೇಂದ್ರ, ಕಿರಣ್, ಸಾಮಾಜಿಕ ಅರಣ್ಯ ಅಧಿಕಾರಿ ಸಿರಾ ಬಡೀಗಿ, ಕುರುಗೋಡು ತಾಪಂ ತಾಂತ್ರಿಕ ಐಇಸಿ ಸಂಯೋಜಕ ಚಂದ್ರಶೇಖರ, ತಾಂತ್ರಿಕ ಸಹಾಯಕರಾದ ರಿಸ್ವಾಮಿ, ಚೆಲ್ಲಾ ಲೋಕೇಶ್ ಸೇರಿದಂತೆ ಗ್ರಾಪಂ ಸಿಬ್ಬಂದಿಗಳು ಹಾಗೂ ಇತರರು ಹಾಜರಿದ್ದರು.

## ಜನರಿಗೆ ಸೌಲಭ್ಯ ನೀಡುವಲ್ಲಿ ಬೇಕಾದ ಬೇಡಿಕೆ ಕುರಿತು ಸರ್ಕಾರಕ್ಕೆ ಮನವಿ ಸಲ್ಲಿಸಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.23–ಇಲಾಖೆಗಳ ವಿವಿಧ ಯೋಜನೆಗಳಡಿ ಸೌಲಭ್ಯಗಳು, ಕೃಷಿ ಹಾಗೂ ಇತರೆ ಇಲಾಖೆಗಳ ಸಾಮಾಗ್ರಿ–ಸಲಕರಣೆಗಳು ಜನರಿಗೆ ವಿತರಿಸಲು ಸರ್ಕಾರ ಗುರಿ ನಿಗದಿಪಡಿಸುವುದಕ್ಕಿಂತ ಮುಂಚೆಯೇ ಜನರಿಗೆ ಯಾವ ಸೌಲಭ್ಯ ನೀಡಬೇಕು ಎನ್ನುವುದರ ಕುರಿತು ಆಯಾ ಇಲಾಖೆ ಅಧಿಕಾರಿಗಳು ಸರ್ಕಾರಕ್ಕೆ ಬೇಡಿಕೆ ಸಲ್ಲಿಸಬೇಕು ಎಂದು ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಹೇಳಿದರು.

ನಗರದ ಕೋಟೆ ಪ್ರದೇಶದ ತಾಲ್ಲೂಕು ಪಂಚಾಯತ್ ಕಾರ್ಯಾಲಯದ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಬಳ್ಳಾರಿ ತಾಲ್ಲೂಕಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) 1ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ಇಲಾಖೆಗಳ ಅಧಿಕಾರಿಗಳು ಜನರಿಗೆ ಯಾವ ಯಾವ ಸೌಲಭ್ಯ ನೀಡಬೇಕು ಅದನ್ನು ಗಮನಿಸಬೇಕು. ಜನರು ಸರ್ಕಾರದ ಬಳಿ ಹಣವಿಲ್ಲ ಎಂದು ಮನವರಿಕೆಯಾಗಬಾರದು. ಸರ್ಕಾರದಲ್ಲಿ ಅಗತ್ಯಕ್ಕಿಂತ ಸಾಕಷ್ಟು ಅನುದಾನ ಲಭ್ಯವಿದೆ. ಸರ್ಕಾರ ಅನುದಾನ ಬಿಡುಗಡೆವರೆಗೆ ಅಧಿಕಾರಿಗಳು ಕಾಯುವುದು ಬೇಡ. ನಿಮ್ಮ ಇಲಾಖೆಗಳಿಗೆ ಏನು ಬೇಕು ಅದರ ಬಗ್ಗೆ ಸರ್ಕಾರಕ್ಕೆ ಪತ್ರ ಬರೆಯಿರಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜನರ ಮತ್ತು ಅಧಿಕಾರಿಗಳ ಮಧ್ಯೆ ಸೇತುವೆಯಂತೆ ನಮ್ಮ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ನಮ್ಮ ಸರ್ಕಾರ ಅಧಿಕಾರಿಗಳಿಗೆ ನೂರಕ್ಕೆ ನೂರರಷ್ಟು ಬೆಂಬಲ ನೀಡುತ್ತಿದೆ. ಸರ್ಕಾರವೇ ಜನ ಸಾಮಾನ್ಯರ ಬಳಿ ತೆಗೆದು–ಕೊಂಡು ಹೋಗುವ ಕೆಲಸ ಜನಪ್ರತಿನಿಧಿಗಳಾದ ನಾವು ಮಾಡುತ್ತೇವೆ ಎಂದರು.

ಪ್ರಸ್ತಕ ಸಾಲಿನಲ್ಲಿ ಬಳ್ಳಾರಿ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 515 ಎಂ.ಎಂ ಮಳೆ ಬೇಡಿಕೆ ಇದ್ದು, ಈವರೆಗೆ ಒಟ್ಟು 165 ಎಂ.ಎಂ ಮಳೆಯಾಗಿದೆ. 138.4 ಎಂ.ಎಂ ಮಳೆ (ಶೇ.16 ರಷ್ಟು) ಕೊರತೆಯಾಗಿದೆ. ಮುಂದಿನ ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಬಳ್ಳಾರಿ ತಾಲ್ಲೂಕಿನಲ್ಲಿ ಅಗತ್ಯ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನಿದೆ ಎಂದು ಕೃಷಿ ಸಹಾಯಕ ನಿರ್ದೇಶಕರು ಸಭೆಗೆ ತಿಳಿಸಿದರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಮಾತನಾಡಿ, ಕೃಷಿ ಮತ್ತು ತೋಟಗಾರಿಕೆ ಅಧಿಕಾರಿಗಳು ಜೊತೆಗೂಡಿ ರೈತರಿಗೆ ತಾವು ಬೆಳೆದ ಬೆಳೆಗಳಿಗೆ ವಿಮೆ ಮಾಡಿಸುವಂತೆ ಜಾಗೃತಿ ನೀಡಬೇಕು. ಈವರೆಗೆ ಶೇ.01 ರಷ್ಟು ಸಹ ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿಲ್ಲ. ಬೆಳೆ ಹಾನಿಯಾದಾಗ ವಿಮೆಯು ರೈತರನ್ನು ಕೈ ಹಿಡಿಯುತ್ತದೆ. ಅವಧಿ ಮುಗಿದ ಬಳಿಕ ನೋಂದಾಯಿಸಿಕೊಂಡರೆ ಕೈ ಸುಟ್ಟು ಕೊಂಡಂತಾಗುತ್ತದೆ. ಹಾಗಾಗಿ ಆಯಾ ಪಿಡಿಒ ಗಳ ಸಹಕಾರದೊಂದಿಗೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವಂತೆ ರೈತರಿಗೆ ಹೆಚ್ಚಾಗಿ ಮಾಹಿತಿ ನೀಡಬೇಕು ಎಂದರು.

ಜಿಲ್ಲೆಯಲ್ಲಿ ಈ ಬಾರಿ ಮೆಣಸಿನಕಾಯಿ ಬೆಳೆ ಬೆಳೆಯಲು ರೈತರು ಹಿಂದೇಟು ಹಾಕುತ್ತಿದ್ದಾರೆ. ವಿವಿಧ ಯೋಜನೆಗಳಡಿ ಪರ್ಯಾಯ ತೋಟಗಾರಿಕೆ ಬೆಳೆ ಬೆಳೆಯಲು ರೈತರಿಗೆ ಮನವರಿಕೆ ಮಾಡುವ ಮೂಲಕ ಅವರಿಗೆ ತೋಟಗಾರಿಕೆ ಇಲಾಖೆಯಿಂದ ಉತ್ತೇಜನ ನೀಡಬೇಕು ಅಧಿಕಾರಿಗಳಿಗೆ ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಯನ್ನು ಮುಂಚೂಣಿಯಲ್ಲಿರಿಸಲು ಅಧಿಕಾರಿಗಳು ಸಾಕಷ್ಟು ಶ್ರಮವಹಿಸಬೇಕಿದೆ. ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಪ್ರೋತ್ಸಾಹ ನೀಡಬೇಕು. ಅಗತ್ಯಕ್ಕೆ ತಕ್ಕಂತೆ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಿ, ನಮ್ಮ ಜಿಲ್ಲೆ ಇತರೆ ಜಿಲ್ಲೆಗಳಿಗೆ ಮಾದರಿಯಾಗಬೇಕು ಎಂದರಲ್ಲದೇ, ಬಳ್ಳಾರಿ ನಗರ ಮತ್ತು ಬಳ್ಳಾರಿ ಗ್ರಾಮೀಣಕ್ಕೆ ಪ್ರತ್ಯೇಕವಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಸರ್ಕಾರಕ್ಕೆ ಪತ್ರ ಬರೆಯಿರಿ ಎಂದರು.

ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಈ ಕುರಿತಾಗಿಯೇ ಸಾಕಷ್ಟು ಹೆಣ್ಣುಮಕ್ಕಳು ಶಾಲೆಯಿಂದ ಹೊರಗುಳಿಯುತ್ತಿದ್ದಾರೆ. ಇದನ್ನು ತಪ್ಪಿಸಲು ಮುಂದಿನ ದಿನಗಳಲ್ಲಿ ವಿವಿಧ ಅನುದಾನದಡಿ ಜಿಲ್ಲೆಯಲ್ಲಿ ಹೈಟೆಕ್ ಶೌಚಾಲಯ ನಿರ್ಮಾಣಕ್ಕೆ ಒತ್ತು ನೀಡಲಾಗುವುದು. ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಬಳ್ಳಾರಿ ತಾಲ್ಲೂಕನ್ನು ಆಯ್ದುಕೊಳ್ಳಲಾಗುವುದು ಎಂದರು.

ಬಳ್ಳಾರಿ ತಾಲ್ಲೂಕು ವ್ಯಾಪ್ತಿಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ಕೈಗೆತ್ತಿಕೊಂಡಿರುವ ವಿವಿಧ ಬ್ಯಾಚ್‌ಗಳ ಕಾಮಗಾರಿಗಳನ್ನು ಗುಣಮಟ್ಟತೆಯಿಂದ ಪೂರ್ಣಗೊಳಿಸಬೇಕು. ಕೆರೆಗಳನ್ನು ಸ್ವಚ್ಛಗೊಳಿಸಬೇಕು. ಜನರಿಗೆ ಕುಡಿಯುವ ನೀರಿಗೆ ಸಮಸ್ಯೆಯಾಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಸಭೆಗೂ ಮುನ್ನ ಗ್ಯಾರಂಟಿ ಯೋಜನೆಯ ಯುವನಿಧಿಯ ಮೂರನೇ ವರ್ಷದ ನೋಂದಣಿ ಪ್ರಕ್ರಿಯೆ ಮಾಹಿತಿ ಕುರಿತ ಭಿತ್ತಿಚಿತ್ರ ಮತ್ತು ಡಿಎಪಿ ರಸಗೊಬ್ಬರ ಬಳಕೆ ಬದಲಾಗಿ ಸಂಯುಕ್ತ ರಸಗೊಬ್ಬರ ಬಳಕೆ ಮಾಡುವ ಕುರಿತ ಮಾಹಿತಿ ಭಿತ್ತಿಚಿತ್ರ ಗಣ್ಯರು ಅನಾವರಣಗೊಳಿಸಿದರು.

ಈ ವೇಳೆ ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ ಗೌಡ, ಬಳ್ಳಾರಿ ತಾಪಂ ಆಡಳಿತಾಧಿಕಾರಿಯೂ ಆದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದ, ಬಳ್ಳಾರಿ ತಾಪಂ ಇಓ ಶ್ರೀಧರ್ ಐ ಬಾರಿಕಾರ ಸೇರಿದಂತೆ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಜು.27 ಮೆಡಿಕಲ್ ಕಾಲೇಜಿನಲ್ಲಿ ಚಿಕ್ಕಮಕ್ಕಳ ತಜ್ಞರ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23–ನಗರದ ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಜು.27 ರಂದು ರಾಜ್ಯಮಟ್ಟದ ಚಿಕ್ಕಮಕ್ಕಳ ನರರೋಗ ತಜ್ಞರ ಸಮ್ಮೇಳನವನ್ನು ಆಯೋಜಿಸಲಾಗಿದೆ.

ಸಮ್ಮೇಳನದ ಪೂರ್ವಭಾವಿಯಾಗಿ ಜುಲೈ 26 ಕಾರ್ಯಾಗಾರವನ್ನು ಹಮ್ಮಿಕೊಳಲಾಗಿದೆ. ಕಾರ್ಯಾಗಾರ ಮತ್ತು ಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳಿಂದ ಸುಮಾರು 200 ಚಿಕ್ಕಮಕ್ಕಳ ತಜ್ಞರು, ಚಿಕ್ಕಮಕ್ಕಳ ನರರೋಗ ತಜ್ಞರು, ಸ್ನಾತಕೋತ್ತರ ವಿದ್ಯಾರ್ಥಿಗಳು ಪಾಲ್ಗೊಳ್ಳಲಿರುವರು.

ಬೆಂಗಳೂರಿನ ಚಿಕ್ಕಮಕ್ಕಳ ನರರೋಗ ತಜ್ಞರಾದ ಡಾ.ಸುರೇಶರಾವ್ ಅರೂರ್ ಮತ್ತು ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿಯ ಅಧ್ಯಕ್ಷ ಡಾ.ಸಿ.ಪಿ.ರವಿಕುಮಾರ ಸಮ್ಮೇಳನಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿರುವರು. ಜುಲೈ 27 ರಂದು ಬೆಳಗ್ಗೆ 10.30 ಗಂಟೆಗೆ ಮೆಡಿಕಲ್ ಕಾಲೇಜಿನ ಅತ್ರೇಯ ಸಭಾಂಗಣದಲ್ಲಿ ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ.ಚರಂತಿಮಠ ಅಧ್ಯಕ್ಷತೆಯಲ್ಲಿ ಸಮ್ಮೇಳನ ಉದ್ಘಾಟನೆಗೊಳ್ಳಲಿದೆ.

ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ. ಶ್ರೀರಾಮ ಕೋರಾ, ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿಯ ಕಾರ್ಯದರ್ಶಿ ಡಾ.ಕಿಶೋರ ಕೋಥಾ, ಸಮ್ಮೇಳನ ಕಾರ್ಯಾಧ್ಯಕ್ಷ ಡಾ.ಅಶೋಕ ಬಡಕಲಿ ಮತ್ತು ಡಾ.ಕೆಲೂಡೆಪ್ಪ ತಳವಾರ, ಕಾರ್ಯದರ್ಶಿ ಡಾ.ರಮೇಶ ಪೋಳ, ಚಿಕ್ಕಮಕ್ಕಳ ತಜ್ಞರ ಸಂಘದ ಡಾ.ಶ್ರೀಕಾಂತ ಅರಶಿನಗೋಡಿ ಮತ್ತು ಡಾ.ರಮೇಶ ಪತ್ತಾರ ಉಪಸ್ಥಿತರಿರುವರು. ಚಿಕ್ಕಮಕ್ಕಳ ನರರೋಗ ಕುರಿತು ಸಮ್ಮೇಳನದಲ್ಲಿ ಸಂಶೋಧನಾ ಲೇಖನಗಳನ್ನು ಮಂಡಿಸುವರು ಮತ್ತು ಪರಿಣಿತರು ಉಪನ್ಯಾಸ ನೀಡುವರೆಂದು ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು.

# ಹಾಸ್ಟೆಲ್ ಸುವ್ಯವಸ್ಥೆಗೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ–23: ರಾಜ್ಯದಲ್ಲಿನ ಹಾಸ್ಟೆಲ್‌ಗಳ ಮೂಲಭೂತ ಸೌಕರ್ಯಗಳ ಸುಧಾರಣೆಯಾಗಬೇಕು ಹಾಗೂ ವಿದ್ಯಾರ್ಥಿ ವೇತನ ಕೂಡಲೇ ಬಿಡುಗಡೆ ಮಾಡುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಬಾಗಲಕೋಟೆ ಜಿಲ್ಲಾ ಘಟಕ ನಗರದ ಬಸವೇಶ್ವರ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಿತು.

ರಾಜ್ಯದಲ್ಲಿ ಕಳೆದ ನಾಲ್ಕು ತಿಂಗಳಿಂದ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ನೀಡುತ್ತಿದ್ದ ಕಿಟ್‌ಗಳು ತಲುಪುತ್ತಿಲ್ಲ. 40–50 ವಿದ್ಯಾರ್ಥಿಗಳಿಗೆ ಕೇವಲ 2–3 ಶೌಚಾಲಯಗಳಿವೆ. 100 ವಿದ್ಯಾರ್ಥಿಗಳು ಇರಬೇಕಾದ ವಸತಿ ನಿಲಯಗಳಲ್ಲಿ 140–150 ವಿದ್ಯಾರ್ಥಿಗಳನ್ನು ಸೇರಿಸಲಾಗಿದೆ. ಪ್ರತಿ ತಿಂಗಳು ಊಟದ ವೆಚ್ಚಕ್ಕೆ ಪ್ರತಿ ವಿದ್ಯಾರ್ಥಿಗೆ 1,850 ರೂ. ಮಾತ್ರ ನೀಡಲಾಗುತ್ತಿದೆ. ಈ ಹಣದಲ್ಲಿ ಡಯಟ್ ಚಾರ್ಟ್‌ನಲ್ಲಿ ಇರುವಂತೆ ಸರಿಯಾಗಿ ಆಹಾರವನ್ನು ಕೊಡುವುದಕ್ಕೆ ಆಗುವುದಿಲ್ಲ ಕಾರಣ ಸರಕಾರ ಈ ಹಣವನ್ನು ಹೆಚ್ಚಳ ಮಾಡಬೇಕು ಎಂದು ಎಬಿವಿಪಿ ಕಾರ್ಯಕರ್ತರು ಆಗ್ರಹಿಸಿದರು.

ಶಿಕ್ಷಣದಿಂದ ವಂಚಿತರಾಗಬಾರದು ಎನ್ನುವ ಕಾರಣಕ್ಕೆ ಹಲವಾರು ಯೋಜನೆಗಳನ್ನು ಜಾರಿಗೊಳಿಸಲಾಗಿದ್ದರೂ ಅದರ ಪ್ರಯೋಜನ ವಿದ್ಯಾರ್ಥಿಗಳಿ ಸರಿಯಾಗಿ ದೊರಕುತ್ತಿಲ್ಲ ಎಂದು ದೂರಿದ ಅವರು, ವಿದ್ಯಾರ್ಥಿಗಳಿಗೆ ಸರಿಯಾದ ರೀತಿಯಲ್ಲಿ ಹಾಸ್ಟೆಲ್ ವ್ಯವಸ್ಥೆ ಹಾಗೂ ವಿದ್ಯಾರ್ಥಿ ವೇತನ ನೀಡುವಂತೆ ಒತ್ತಾಯಿಸಿದರು.

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವ್ಯಾಪ್ತಿಯಲ್ಲಿ 1,258 ಹಾಸ್ಟೆಲ್‌ಗಳಿದ್ದು 1,68,833 ವಿದ್ಯಾರ್ಥಿಗಳು ವಸತಿ ನಿಲಯಗಳಲ್ಲಿ ವಾಸವಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ 1972 ವಸತಿ ನಿಲಯಗಳಿದ್ದು 1,87,200 ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ಉಳಿಯಲು ಅವಕಾಶ ನೀಡಬಹುದಾಗಿದೆ. ಆದರೆ ರಾಜ್ಯದಲ್ಲಿ ಹಿಂದಿನ 3 ವರ್ಷಗಳ ಸರಕಾರದ ವರದಿ ಪ್ರಕಾರ ಅರ್ಜಿ ಸಲ್ಲಿಸಿದ 100 ವಿದ್ಯಾರ್ಥಿಗಳಲ್ಲಿ 40 ರಿಂದ 50 ವಿದ್ಯಾರ್ಥಿಗಳಿಗೆ ಮಾತ್ರ ವಸತಿ ನಿಲಯಗಳಲ್ಲಿ ಅವಕಾಶ ಸಿಗುತ್ತಿದೆ. ಇನ್ನುಳಿದ ವಿದ್ಯಾರ್ಥಿಗಳು ವಸತಿ ನಿಲಯಗಳಿಂದ ವಂಚಿತರಾಗುತ್ತಿದ್ದಾರೆ ಸರ್ಕಾರ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಆಯಾ ಜಿಲ್ಲೆಗಳಿಗೆ ಹೊಸ ವಸತಿ ನಿಲಯಗಳನ್ನು ಘೋಷಣೆ ಮಾಡಬೇಕೆಂದು ವಿದ್ಯಾರ್ಥಿ ಪರಿಷತ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿತು.

ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕೂಡಲೇ ಪೂರ್ಣಗೊಳಿಸಿ ಹಾಸ್ಟೆಲಗಳಿಗೆ ಪ್ರವೇಶಾತಿ ನೀಡಬೇಕು. ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಕಿಟ್‌ಗಳನ್ನು ತಕ್ಷಣವೇ ಎಲ್ಲ ವಿದ್ಯಾರ್ಥಿಗಳಿಗೆ ನೀಡಬೇಕು. ಪ್ರತಿ ವಿದ್ಯಾರ್ಥಿಗೆ ಊಟಕ್ಕೆ ನೀಡುವ 1850 ರೂ ಹಣವನ್ನು ಹೆಚ್ಚಳ ಮಾಡಬೇಕು. ರಾಜ್ಯದಲ್ಲಿ ಸಮಾಜ ಕಲ್ಯಾಣ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಇಲಾಖೆಗಳ ಹಾಸ್ಟೆಲ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕು. ಬಾಕಿ ಉಳಿದಿರುವ ಹಿಂದಿನ ವರ್ಷದ ವಿದ್ಯಾರ್ಥಿ ವೇತನವನ್ನು ತಕ್ಷಣವೇ ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡಬೇಕು ಎಂದು ಎಬಿವಿಪಿ ಸರ್ಕಾರವನ್ನು ಆಗ್ರಹಿಸಿತು.

# ರಸ್ತೆಗೆ ಡಿವೈಡರ್ ಹಾಕಿ ಬೆಳಕಿನ ವ್ಯವಸ್ಥೆ ಕಲ್ಪಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23–ಬಾಗಲಕೋಟೆ–ಆಲಮಟ್ಟಿ ರಸ್ತೆಯಲ್ಲಿ ಹಳೇ ರಾಂಪುರದಿಂದ ಹೊಸ ರಾಂಪುರ ರೇಲ್ವೆ ಗೇಟ್ ವರೆಗಿನ ರಸ್ತೆಯನ್ನು ದ್ವಿಪಥಗೊಳಿಸಿ ಡಿವೈಡರ್ ಹಾಕಿ ವಿದ್ಯುತ್ ದೀಪಗಳನ್ನು ಅಳವಡಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಈ ಕುರಿತು ರಾಂಪುರ ಗ್ರಾಮಸ್ಥರು ಮಂಗಳವಾರ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಶಾಸಕ ಎಚ್. ವಾಯ್.ಮೇಟಿ ಅವರಿಗೆ ಮನವಿ ಸಲ್ಲಿಸಿ, ಹಳೇ ರಾಂಪುರದಿಂದ ಹೊಸ ರಾಂಪುರ ಬಳಿಯ ರೇಲ್ವೆ ಗೇಟ್ ವರೆಗಿನ ರಸ್ತೆಯನ್ನು ಅಗಲೀಕರಣಗೊಳಿಸಿ ಡಿವೈಡರ್ ನಿರ್ಮಿಸಿ ಬೆಳಕಿನ ವ್ಯವಸ್ಥೆಯನ್ನು ಮಾಡಿಕೊಡುವಂತೆ ಕೋರಿದರು.

ಗ್ರಾಮಸ್ಥರ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಶಾಸಕರು, ಕೂಡಲೇ ಈ ವ್ಯವಸ್ಥೆಗೆ ಯೋಜನೆ ರೂಪಿಸಿಕೊಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಶೋಕ ಜಂಡೇದ, ಜಗದೀಶ ಜೈನಾಪೂರ, ವಾಸು ರೇವಣಕರ, ಲಕ್ಷ್ಮಣ ಹಡಗಲಿ, ಎಸ್.ಎಸ್. ಹೂಗಾರ, ಜಟ್ಟೆಪ್ಪ ಮಾದಾಪೂರ, ಬಿ.ಎನ್.ಕೊಣ್ಣೂರ, ಮುರುಘೇಂದ್ರ ಮೇಟಿ ಮತ್ತಿತರರು ಶಾಸಕ ಮೇಟಿ ಅವರಿಗೆ ಮನವಿ ಸಲ್ಲಿಸಿದರು.

# ಬೆನಕಟ್ಟಿಯಲ್ಲಿ ನಾಳೆ ದತ್ತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23–ಕನ್ನಡ ಸಾಹಿತ್ಯ ಪರಿಷತ್ತು ಬಾಗಲಕೋಟೆ ತಾಲ್ಲೂಕು ಘಟಕ ಹಾಗೂ ಶಿರೂರ ಮತ್ತು ಕಲಾದಗಿ ವಲಯ ಘಟಕಗಳ ಸಹಯೋಗದಲ್ಲಿ ಜು.25 ರಂದು ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ.

ದಿ.ರಾಮಪ್ಪ ಕೃಷ್ಣಪ್ಪ ಯಡಹಳ್ಳಿ ಹಾಗೂ ದಿ.ಭೀಮಪ್ಪ ಹನಮಪ್ಪ ಗೊರವರ ಸ್ಮರಣಾರ್ಥ ದತ್ತಿ ಕಾರ್ಯಕ್ರಮ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ಆವರಣದಲ್ಲಿ ಶುಕ್ರವಾರ ಮುಂಜಾನೆ 10–30 ಗಂಟೆಗೆ ಗುಳೇದಗುಡ್ಡದ ಒಪ್ಪತ್ತೇಶ್ವರ ಸ್ವಾಮೀಜಿಗಳ ಸಾನಿಧ್ಯದಲ್ಲಿ ನಡೆಯಲಿದೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಡಾ.ವೀರೇಶ ಬಡಿಗೇರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ತೋಟಗಾರಿಕೆ ವಿವಿ ವಿಸ್ತರಣಾ ವಿಭಾಗದ ನಿವೃತ್ತ ನಿರ್ದೇಶಕ ವಾಯ್.ಕೆ.ಕೋಟಿಕಲ್ ವಹಿಸುವರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಚಂದ್ರಶೇಖರ ಕಾಳನ್ನವರ ಆಶಯ ನುಡಿ ಹೇಳುವರು.

ಮುಖ್ಯ ಅತಿಥಿಗಳಾಗಿ ಮಾಲತೇಶ ಅಮಾತೆಪ್ಪನವರ, ಎಂ.ಎ.ಮುನವಳ್ಳಿ, ಲಕ್ಕಪ್ಪ ಬಾಳಕ್ಕನವರ ಆಗಮಿಸಲಿದ್ದು, 'ಶಿಕ್ಷಣದಲ್ಲಿ ನೈತಿಕ ಮೌಲ್ಯಗಳು' ಕುರಿತು ಶಿಕ್ಷಕ ರವಿ ಕಂಗಳ ಉಪನ್ಯಾಸ ನೀಡುವರು. ಮಾಜಿ ಸೈನಿಕ ಯಮನಪ್ಪ ನಿಂಬಲಗುಂದಿ, ದತ್ತಿದಾನಿಗಳಾದ ಕೆ.ಆರ್.ಯಡಹಳ್ಳಿ ಹಾಗೂ ಎನ್.ಬಿ.ಗೊರವರ ಉಪಸ್ಥಿತರಿರುವರು ಎಂದು ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ ಕಾರ್ಡ ವಿತರಣೆ ಕಾರ್ಮಿಕರಿಗೆ ಸರಕಾರದ ಸೌಲಭ್ಯ–ಸಚಿವ ಲಾಡ್




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23–ರಾಜ್ಯದಲ್ಲಿ ಸಂಘಟಿತ ಮತ್ತು ಅಸಂಘಟಿತ ಅಲೇಮಾರಿ ಕಾರ್ಮಿಕರೆಲ್ಲರಿಗೂ ಸರಕಾರದಿಂದ ದೊರೆಯಬಹುದಾದ ಪ್ರತಿಯೊಂದು ಸೌಲಭ್ಯಗಳನ್ನು ಒದಗಿಸುವ ಗುರಿ ಹೊಂದಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು.

ನವನಗರದ ಕಲಾಭವನದಲ್ಲಿ ಬುಧವಾರ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಸಹಯೋಗದಲ್ಲಿ ಹಮ್ಮಿಕೊಂಡ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ ಕಾರ್ಡ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಸಂಘಟಿತ ವಲಯದ ಕಾರ್ಮಿಕರು ಸಾಮಾಜಿಕ, ಆರ್ಥಿಕವಾಗಿ ದುರ್ಬಲರಾಗಿದ್ದು, ಸಂಘಟಿತ ಕಾರ್ಮಿಕರಿಗೆ ದೊರಕುವ ಕಾನೂನಾತ್ಮಕ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಅಂತಹ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸುವುದು ಸರಕಾರದ ಕರ್ತವ್ಯವಾಗಿದೆ ಎಂದರು.

ದೇಶದಲ್ಲಿ ದುಡಿಯುವ ವರ್ಗದಲ್ಲಿ ಶೇ.80ಕ್ಕಿಂತ ಹೆಚ್ಚು ಕಾರ್ಮಿಕರು ಅಸಂಘಟಿತ ವಲಯದಲ್ಲಿ ಇದ್ದಾರೆ ಎಂಬುದು ಅಂದಾಜಿಸಲಾಗಿದೆ. ಕಾರ್ಮಿಕರಿಗಾಗಿ ಮೂರು ಬಿಲ್ ಎಂಬ ಯೋಜನೆ ಜಾರಿಗೆ ತರಲಾಗಿದೆ. ಗಿಗ್ ಬಿಲ್ ಇದು ಬೆಂಗಳೂರು ನಗರದಂತಹ ಅಭಿವೃದ್ಧಿ ಹೊಂದಿದ ನಗರದಲ್ಲಿ ಆನ್‌ಲೈನ್ ಕಂಪನಿಗಳಲ್ಲಿ ಸೇಲ್ಸ್ ಮ್ಯಾನ್, ಡಿಲೇವರಿ ಕಾರ್ಮಿಕರಿಗೆ ಉಪಯುಕ್ತ ಯೋಜನೆಗಾಗಿದೆ. 5 ಲಕ್ಷದಷ್ಟು ಕಾರ್ಮಿಕರು ಇದರ ಪ್ರಯೋಜನ ಪಡೆದಿದ್ದಾರೆ. ಸಿನಿ ಬಿಲ್ ಇದರಲ್ಲಿ ಚಿತ್ರರಂಗದ ಲೈಟ್ ಬಾಯ್ ಹಿಡಿದು ನಾಯಕ ನಟ, ನಿರ್ದೇಶಕ ಹಾಗೂ ಸಹಕಲಾವಿದರು ಅಲ್ಲದೇ ರಂಗಭೂಮಿ ಕಲಾವಿದರು ಹಾಗೂ ಕಂಪನಿಗಳಿಗಳಲ್ಲಿ ಕೆಲಸ ಮಾಡುವವರಿಗೆ ಅನುಕೂಲವಾಗಲಿದೆ ಎಂದು ಸಚಿವ ಲಾಡ್ ಹೇಳಿದರು.

ಟ್ರಾನ್ಸಪೋರ್ಟ ಬಿಲ್ ಇದರಲ್ಲಿ ಚಾಲಕರು, ಕ್ಲೀನರ್, ಪಂಚರ, ಗ್ಯಾರೇಜನಲ್ಲಿ ಕಾರ್ಯನಿರ್ವಹಿಸುವ ಹಾಗೂ ಪೆಂಟಿಂಗ್ ಕೆಲಸದಲ್ಲಿ ತೊಡಗಿರುವವರಿಗೆ ಅನುಕೂಲವಾಗುವ ಯೋಜನೆಯಾಗಿದ್ದು, ಇದರಲ್ಲಿ ಈಗಾಗಲೇ 25 ಲಕ್ಷ ಜನರಿಗೆ ಸ್ಮಾರ್ಟಕಾರ್ಡ ವಿತರಿಸಲಾಗಿದೆ. ಅಲ್ಲದೇ ಅಪಘಾತದಲ್ಲಿ ಮರಣ ಹೊಂದಿದ ಚಾಲಕರಿಗೆ 5 ಲಕ್ಷ ರೂ,ಗಳ ವಿಮೆ ನೀಡಲಾಗುತ್ತಿದೆ.

ಒಟ್ಟಾರೆ ಕಾರ್ಮಿಕರಿಗೆ ಅನುಕೂಲವಾಗುವಂತಹ ಅಂಬೇಡ್ಕರ ಕಾರ್ಮಿಕರ ಸಹಾಯಹಸ್ತ, ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ, ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ, ದಿನಪತ್ರಿಕೆ ವಿತರಣಾ ಕಾರ್ಮಿಕ ಅಪಘಾತ ಪರಿಹಾರ, ವೈದ್ಯಕೀಯ ಸೌಲಭ್ಯ, ರಾಜ್ಯ ಮೋಟಾರ ಸಾರಿಗೆ ಹಾಗೂ ಇತರೆ ಕಾರ್ಮಿಕರ ಸಾಮಾಜಿಕ ಭದ್ರತೆ ಸೇರಿದತೆ ಇತರೆ ಸೌಲಭ್ಯಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಜೀವನಕ್ಕೆ ಉಪಯುಕ್ತ ಕಾರ್ಯನಿರ್ವಹಿಸುವಲ್ಲಿ ದುಡಿಯುವ ಕಾರ್ಮಿಕರ ಕಾರ್ಯ ಮಹತ್ವದ್ದಾಗಿದ್ದು, ಅಂತಹ ಕಾರ್ಮಿಕರು ನೆಮ್ಮದಿಯಿಂದ ಪರಾವಲಂಬಿಗಳಾಗದೇ ಆರ್ಥಿಕವಾಗಿ, ಸಾಮಾಜಿಕವಾಗಿ ಮುಂದೆ ಬರಲಿ ಎಂದು ಕಾರ್ಮಿಕ ಇಲಾಖೆ ಹಲವಾರು ಕಾರ್ಯಕ್ರಮ ಹಾಕಿಕೊಂಡಿದೆ. ಬೆವರು ಸುರಿಸಿ, ರಕ್ತ ಹರಿಸಿ, ಹಗಲಿರುಳು ದುಡಿದು ಯಜಮಾನನನ್ನು ಶ್ರೀಮಂತನಾಗಿಸುವಲ್ಲಿ ಕಾರ್ಮಿಕರು ನೋವು ಉಂಡು ನಲಿವು ಹಂಚಿದರವಾಗಿದ್ದಾರೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿಯೇ ಬಾಗಲಕೋಟೆ ಜಿಲ್ಲೆ ಕಾರ್ಮಿಕರಿಗೆ ಅತೀ ಹೆಚ್ಚು ಯೋಜನೆಗಳು ತಲುಪುವಂತಾಗಲಿ ಎಂದರು.

ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಜಂಟಿ ಕಾರ್ಯದರ್ಶಿ ಡಾ.ಎಸ್.ಬಿ.ರವಿಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಾರ್ಮಿಕರಿಗೆ ಸಾಂಕೇತಿಕವಾಗಿ ಸ್ಮಾರ್ಟ ಕಾರ್ಡಗಳನ್ನು ವಿತರಣೆ ಮಾಡಲಾಯಿತು.

ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಮಾಜಿ ಶಾಸಕ ಎಸ್.ಜಿ.ನಂಜಯ್ಯನಮಠ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಮಾಜಿ ಮೇಯರ್ ಅನೀಲಕುಮಾರ ಪಾಟೀಲ, ಕಾರ್ಮಿಕ ಇಲಾಖೆಯ ಬೆಳಗಾವಿ ಪ್ರಾದೇಶಿಕ ಉಪ ಆಯುಕ್ತ ಡಿ.ಜಿ.ನಾಗೇಶ, ಸಹಾಯಕ ಕಾರ್ಮಿಕ ಆಯುಕ್ತ ಕೆ.ಬಿ.ನಾಗರಾಜ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಕುರಡಿಕೇರಿ, ರಮೇಶ ವಂಗಿ, ರಾಕೇಶ ಶಿರಕನಹಳ್ಳಿ, ಅಶೋಕ ವಡ್ಡರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪೊಲೀಸ್ ವರಿಷ್ಠಾಧಿಕಾರಿ ಅಮರನಾಥರೆಡ್ಡಿ ಯವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಇಳಕಲ್ – ಇಲ್ಲಿನ ರಾಷ್ಟ್ರಕೂಟ ರೆಡ್ಡಿ ಪರಿವಾರ ಯುವ ಬಳಗ ಹುನಗುಂದ–ಇಲಕಲ್ಲ ತಾಲೂಕ ಘಟಕದ ವತಿಯಿಂದ ಸುಮಾರು 18 ತಿಂಗಳುಗಳ ಕಾಲ ಬಾಗಲಕೋಟೆಯಲ್ಲಿ ದಕ್ಷ ಅಧಿಕಾರಿ ಆಗಿ ಕೆಲಸ ನಿರ್ವಹಿಸಿದ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥರೆಡ್ಡಿ ಮಾತನಾಡಿ, ಬಾಗಲಕೋಟೆಯ ಜನ ಸಹೃದಯವಂತರು ಅವರ ಸೇವೆ ಅನನ್ಯವಾಗಿದ್ದು ಮತ್ತು ಪೊಲೀಸ್ ಇಲಾಖೆಗೆ ಉತ್ತಮ ಸ್ಪಂದನೆ ಕೊಡುತ್ತಾರೆ ಎಂದು ಹೇಳಿದರು ಹಾಗಾಗಿ ನಾನು ನಿಷ್ಠೆಯಿಂದ ಕೆಲಸ ನಿರ್ವಹಿಸಲು ಸಹಕಾರಿಯಾಯಿತು ಎಂದು ಹೇಳಿದರು ಸಾಹೇಬರು ಜನಸ್ನೇಹಿ ಪೊಲೀಸ್ ಅಧಿಕಾರಿಯಾಗಿ ಪೊಲೀಸ್ ಠಾಣೆಗೆ ಬರುವ ಪ್ರತಿಯೊಬ್ಬರಿಗೂ ಕಾನೂನಿನ ಅಡಿಯಲ್ಲಿ ಸರಿಯಾದ ನ್ಯಾಯ ಕೊಡಿಸುವ ದಕ್ಷ ಅಧಿಕಾರಿಯಾಗಿ ಕೆಲಸ ಮಾಡಿದರು ಎಂದು ಸಂಘದ ಅಧ್ಯಕ್ಷರಾದ ಡಾ// ಸಿದ್ದನಗೌಡ ಪಾಟೀಲ್ ಹೇಳಿದರು. ಸದಸ್ಯರಾದ ವಿಜಯ ತುಂಬದ ಮಾತನಾಡಿ ಅಮರನಾಥ ರೆಡ್ಡಿ ಯವರಂತ ನಿಷ್ಠಾವಂತ ಅಧಿಕಾರಿ ಸಿಕ್ಕಿರುವುದು ನಮ್ಮ ಜಿಲ್ಲೆಯ ಜನತೆಯ ಭಾಗ್ಯ ಎಂದು ಹೇಳಿದರು.

ಗೌರವ ಸತ್ಕಾರ ಕಾರ್ಯಕ್ರಮದಲ್ಲಿ. ಅಂಬರೇಶ ರಾಪೂರಂ, ಪ್ರಶಾಂತ ಪಾಟೀಲ್, ಶಶಿ ಗೂಗಿಹಾಳ, ಬಸವರಾಜ್ ಚಿಕ್ಕ ಓತಗೇರಿ, ಮುತ್ತು ಗೌಡರ. ಪ್ರಭುದೇವ್ ಬೆಳ್ಳಿಹಾಳ, ಶರಣಗೌಡ ಕಂದಕೂರ, ಸಚಿನ್ ಸಾಲಿಮಠ, ಜಗದೀಶ ಎಮ್ಮಿ, ರಾಮಪ್ಪ ಚಳಗೇರಿ, ಮುತ್ತಣ್ಣ ಮಸರಕಲ್ಲ, ಚಂದ್ರು ಗದಗಿನ, ಬಸನಗೌಡ ವಕೀಲರು, ರಾಜು ತಿಮ್ಮಾಪುರ, ಗೌರವ ಸತ್ಕಾರ ಕಾರ್ಯಕ್ರಮದಲ್ಲಿ ಇದ್ದರು.

### ಸಚಿವ ತಿಮ್ಮಾಪೂರ ನ್ಯಾಯಬೆಲೆ ಅಂಗಡಿಗೆ ಭೇಟಿ

# ಸರಿಯಾದ ರೀತಿ ಪಡಿತರ ವಿತರಿಸಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23–ಜಿಲ್ಲಾ ಉಸ್ತುವಾರಿ ಹಾಗೂ ಅಬಕಾರಿ ಸಚಿವರಾದ ಆರ್.ಬಿ.ತಿಮ್ಮಾಪುರ ಬುಧವಾರ ಬೆಳಿಗ್ಗೆ ನವನಗರದ ನ್ಯಾಯ ಬೆಲೆ ಅಂಗಡಿವೊಂದಕ್ಕೆ ಹಠಾತ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಸಾರ್ವಜನಿಕರು ಅಂಗಡಿಕಾರರ ವಿರುದ್ಧ ದೂರು ನೀಡಿದರು. ಪಡಿತರ ಚೀಟಿದಾರರೊಂದಿಗೆ ಸೌಜನ್ಯದಿಂದ ವರ್ತಿಸಿ, ಸರಿಯಾದ ರೀತಿಯಲ್ಲಿ ಪಡಿತರ ವಿತರಣೆ ಮಾಡಬೇಕು ಎಂದು ಸಚಿವ ತಿಮ್ಮಾಪೂರ ಅಂಗಡಿಕಾರರಿಗೆ ಸೂಚಿಸಿದರು.

ಪ್ರತಿ ತಿಂಗಳು ನಿಗದಿತ ಸಮಯದಲ್ಲಿ ಚೀಟಿದಾರರಿಗೆ ಯಾವುದೇ ತೊಂದರೆ ಆಗದಂತೆ ಪಡಿತರ ವಿತರಣೆ ಮಾಡಬೇಕು. ದೂರುಗಳು ಬಂದಲ್ಲಿ ತಮ್ಮ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಆರೋಗ್ಯ, ಆರ್ಥಿಕ ಶಕ್ತಿಯನ್ನು ಸಂಪಾದಿಸಲು ಜ್ಯೋತಿ ಗೊಂಡಬಾಳ ಸಲಹೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಆರೋಗ್ಯವನ್ನು ಕಾಪಾಡಿಕೊಳ್ಳುವ ಮೂಲಕ ದೇಹ, ಮನಸ್ಸು ಸದೃಢವಾಗಿ ಇಟ್ಟುಕೊಂಡರೆ ಆರ್ಥಿಕ ಶಕ್ತಿ ಮತ್ತು ಸಾಮಾಜಿಕ ಗೌರವ ದೊರೆಯುತ್ತದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯೆ ಜ್ಯೋತಿ ಎಂ. ಗೊಂಡಬಾಳ ಸಲಹೆ ನೀಡಿದರು.

ಅವರು ನಗರದ ಪ್ರಮೋದ ಮಂದಿರದಲ್ಲಿ ನಡೆಯುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಸತಿ ನಿಲಯದ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಮಹಿಳೆ ನಿಜವಾಗಲೂ ಶಕ್ತಿಶಾಲಿ, ಆದರೆ ಪುರುಷ ವ್ಯವಸ್ಥೆಯಲ್ಲಿ ತನ್ನನ್ನು ಗುರುತಿಸಿಕೊಳ್ಳುವಲ್ಲಿ ಆಕೆ ವಿಫಲವಾಗುತ್ತಿದ್ದಾಳೆ, ಭಯ ಮತ್ತು ಆತಂಕದ ಜೀವನ ಜೊತೆಗೆ ಆರ್ಥಿಕ ಸ್ವಾವಲಂಭನೆಯ ಹಿನ್ನಡೆ ಕಾರಣಕ್ಕೆ ಆಕೆ ಪುರುಷರ ಬಲದಲ್ಲಿ ಹುದುಗಿ ಹೋಗುತ್ತಿದ್ದಾಳೆ, ಅದಕ್ಕೆ ಆರೋಗ್ಯ, ಆರ್ಥಿಕ ಬಲ ಮತ್ತು ಸಾಮಾಜಿಕ ಶಕ್ತಿ ಸಂಪಾದಿಸಲು ವಿದ್ಯಾರ್ಥಿ ಜೀವನದಲ್ಲಿ ನೂರರಷ್ಟು ಅದಕ್ಕೆ ಬದ್ಧರಾಗಿ ಓದಿ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಸಮಾಜ ಸೇವಕರಾದ ಶಾರದಾ ಪಾನಘಂಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲೂಕ ಅಧಿಕಾರಿ ನಾಗರತ್ನ, ಅಧಿಕಾರಿ ರಮೇಶ ಹುಬ್ಬಳ್ಳಿ, ವಾರ್ಡನ್‌ಗಳಾದ ಸುಧಾ, ಗಿರಿಜಾ ಇತರರು ಇದ್ದರು.

# ಮಹಾ ಕುಂಭಮೇಳ ವಂಚಿತರು ಮಿನಿ ಕುಂಭಮೇಳಕ್ಕೆ ಬನ್ನಿ



ಮಲ್ಲಮ್ಮ ನುಡಿ ವಾರ್ತೆ

ಇಳಕಲ್ ಇಲ್ಲಿನ ಬನ್ನಿ ಕಟ್ಟೆಯ ಮಾರ್ಕಂಡೇಶ್ವರ ಶಾಲಾ ಪಕ್ಕದಲ್ಲಿನ ಜಿ ಪಿ ಪಾಟೀಲ್ ರವರ ಬೈಲು ಜಾಗದಲ್ಲಿ ಇದೇ ದಿನಾಂಕ 11.08.2025 ರಿಂದ 18.8.2025ರ ವರೆಗೆ ಇಲಕಲ್ ನಗರದಲ್ಲಿ 9 ಅಗ್ನಿಕುಂಡದ ಅತಿ–ರುದ್ರ ಮಹಾ ಯಜ್ಞ ಹಾಗೂ ಕಿರಿಯ(ಮಿನಿ) ಕುಂಭಮೇಳಕ್ಕೆ ಬಂದು ಕರ್ನಾಟಕದ ಜನ ನಾಗ ಸಾಧುಗಳ ಆಶೀರ್ವಾದ ಪಡೆಯಬೇಕು ಎಂದು ಶ್ರೀ ಮಹಾಂತ ಸಹದೇವಾನಂದಗಿರಿ ಸ್ವಾಮೀಜಿ ಪತ್ರಿಕಾಗೋಷ್ಠಿಯಲ್ಲಿ ಕರೆ ನೀಡಿದರು. ದೇವಾನಂದ ಕಾಶಪ್ಪನವರ್ ಮಾತನಾಡಿ ಉತ್ತರ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ಹಮ್ಮಿಕೊಂಡಿರುವ ಮಿನಿ ಕುಂಭಮೇಳಕ್ಕೆ ದೇಶದ ವಿವಿಧ ಕಡೆಗಳಿಂದ ಸಾಧು ಸಂತರು ಸ್ವಾಮೀಜಿಗಳು ಶರಣರು ಪುರೋಹಿತರು ಆಗಮಿಸಲಿದ್ದು ಇಲಕಲ್ಲನಲ್ಲಿ ಎಂಟು ದಿನಗಳವರೆಗೆ ಹಬ್ಬದ ವಾತಾವರಣ ಇರಲಿದೆ ಎಂದು ಹೇಳಿದರು. ಲಕ್ಷ್ಮಣ್ ಗುರಂ ಮಾತನಾಡಿ, 9 ಅಗ್ನಿಕುಂಡಗಳ ಯಜ್ಞಯಗಾದಿ ಪೂಜೆಗೆ. ಸಾಧು ಸಂತರು ಶರಣರ ಆಗಮಿಸುತ್ತಿದ್ದು ನಮ್ಮ ಭಾಗದ ಸಾರ್ವಜನಿಕರಿಗೆ ಮಿನಿ ಕುಂಭಮೇಳ ನೋಡುವ ಅವಕಾಶವನ್ನು ಇಲಕಲ್ಲ ಮಹಾನಗರದ ಜನತೆ ಒದಗಿಸಿ ಕೊಟ್ಟಿದ್ದು ಸಾರ್ವಜನಿಕರು ನಾಗರಿಕರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು ರಾಜುಗೌಡ ಪಾಟೀಲ್ ಮಾತನಾಡಿ ಇಲ್ಲಿ ನಡೆಯುವ ಮಿನಿ ಕುಂಭಮೇಳ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಮತ್ತು ಮಿನಿ ಕುಂಭ ಮೇಳಕ್ಕೆ ಬರುವ ಸರ್ವರಿಗೂ ಪ್ರಸಾದ ವ್ಯವಸ್ಥೆಯು ಕಮಿಟಿಯವರ ಆಯೋಜನೆ ಮಾಡಿದ್ದು. ಸಾರ್ವಜನಿಕರೆಲ್ಲರೂ ಸಾಧು–ಸಂತರ ಶರಣರ ಸ್ವಾಮೀಜಿಗಳ ಆಶೀರ್ವಾದ ಪಡೆದು ಕೃಪೆಗೆ ಪಾತ್ರರಾಗಬೇಕೆಂದು ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಅನೇಕ ಮುಖಂಡರು ವ್ಯವಸ್ಥಾಪಕರು ಕಮಿಟಿ ಆಯೋಜಕರು ಹಾಜರಿದ್ದರು.

# ಮಾಸಿಹೋದ ಶಾಲೆಯ ನಾಮಫಲಕ ಗಮನಹರಿಸಿದ ಶಿಕ್ಷಕರು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಯಾದಗಿರಿ ನಗರದ ಮುಸ್ಲಿಂಪುರ ಪ್ರದೇಶದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ನಾಮಫಲಕ ಮಾಸಿಹೋಗಿ ಓದಲಾಗದ ಸ್ಥಿತಿಯಲ್ಲಿದ್ದು, ದೀರ್ಘ ಕಾಲದಿಂದ ಶಾಲೆಯ ಗುರುತೇ ಕಾಣದಂತಾಗಿದೆ. ನಾಮಫಲಕವಿಲ್ಲದೆ ಶಾಲೆ ಅರಿವು ನೀಡದ ಸ್ಥಿತಿಯಲ್ಲಿ ಕಾಲಹರಣವಾಗಿದ್ದು, ಬಹು ವರ್ಷಗಳಿಂದ ಈ ಕಡೆ ಶಿಕ್ಷಕರು ಹಾಗೂ ಅಧಿಕಾರಿಗಳು ಗಮನ ಹರಿಸಿಲ್ಲ ಎಂಬ ಆರೋಪ ಕೇಳಿಬರುತ್ತಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಲೈಂಗಿಕ ದೌರ್ಜನ್ಯ ಆರೋಪ: ಶಾಸಕ ಪ್ರಭು ಚವಾಣ್ ಮಗನಿಗಾಗಿ ಪೊಲೀಸರ ಹುಡುಕಾಟ



ಬೀದರ. ಜು. 23 : ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿರುವ ಔರಾದ್ ವಿಧಾನಸಭಾ ಕ್ಷೇತ್ರದ ಶಾಸಕ ಪ್ರಭು ಚವಾಣ್ ಅವರ ಮಗ ಪ್ರತೀಕ್ ಚವಾಣ್ ಅವರ ಬಂಧನಕ್ಕೆ ಪೊಲೀಸರು ಶೋಧ ಕಾರ್ಯ ತೀವ್ರಗೊಳಿಸಿದ್ದಾರೆ.

ಇದಕ್ಕಾಗಿ ಭಾಲ್ಕಿ ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ಹಾಗೂ ಮಹಿಳಾ ಠಾಣೆಯ ಸಿಪಿಐ ರಾಮಪ್ಪ ಸಾವಳಗಿ ಅವರ ನೇತೃತ್ವದಲ್ಲಿ ಎರಡು ತಂಡಗಳನ್ನು ರಚಿಸಲಾಗಿದೆ. 'ನಮ್ಮ ಪೊಲೀಸರು ಪ್ರತೀಕ್ ಚವಾಣ್ ಅವರ ಮನೆಗೆ ಹೋಗಿದ್ದರು. ಈ ವೇಳೆ ಪ್ರತೀಕ್ ಚವಾಣ್ ಮನೆಯಲ್ಲಿ ಇರಲಿಲ್ಲ. ಅವರ ಮೊಬೈಲ್ ಕೂಡ ಸ್ವಿಚ್ ಆಫ್ ಆಗಿದೆ. ಅವರ ಹುಡುಕಾಟಕ್ಕೆ ಪೊಲೀಸರನ್ನು ಅನ್ಯ ರಾಜ್ಯಕ್ಕೆ ಕಳಿಸಿಕೊಡಲಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ.

'ಮದುವೆಯಾಗುವುದಾಗಿ ನಂಬಿಸಿ ನಿಶ್ಚಿತಾರ್ಥ ಮಾಡಿಕೊಂಡು, ವಿವಿಧ ಸ್ಥಳಗಳಿಗೆ ಕರೆದೊಯ್ದು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ' ಎಂದು ಮಹಾರಾಷ್ಟ್ರದ ಯುವತಿಯೊಬ್ಬರು ಶಾಸಕ ಪ್ರಭು ಚವಾಣ್ ಅವರ ಮಗ ಪ್ರತೀಕ್ ಚವಾಣ್ ವಿರುದ್ಧ ಜುಲೈ 20ರಂದು ಮಹಿಳಾ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು. ಇವರ ದೂರು ಆಧರಿಸಿ ಪ್ರತೀಕ್ ಚವಾಣ್ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದಕ್ಕೂ ಮುನ್ನ ಯುವತಿ, ಬೆಂಗಳೂರಿನಲ್ಲಿ ಗೃಹಸಚಿವರು ಹಾಗೂ ರಾಜ್ಯ ಮಹಿಳಾ ಆಯೋಗಕ್ಕೂ ದೂರು ಸಲ್ಲಿಸಿದ್ದಳು.

# ಜೂಜಾಟ:7 ಜನರ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಚಿತ್ತಾಪುರ:ಜು.23:ಪಟ್ಟಣದಲ್ಲಿರುವ ಬಾಪೂರಾವ್ ಕಲ್ಯಾಣ ಮಂಟಪ ಆವರಣದಲ್ಲಿ ಜೂಜಾಟ ಆಡುತ್ತಿರುವ ಖಚಿತ ಮಾಹಿತಿ ಪಡೆದುಕೊಂಡು ಕಲಬುರ್ಗಿ ಪೊಲೀಸ್ ಇಲಾಖೆಯ ಅಧಿಕಾರಿಗಳು ದಾಳಿ ಮಾಡಿ ಒಟು 59.220 ನಗದು ಹಣ ಜಪ್ತಿ ಮಾಡಿ ಏಳು ಜನರ ವಿರುದ್ದ ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ .ಈ ದಾಳಿಯ ವೇಳೆ ಸಿಕ್ಕಿ ಬಿದ್ದ ರಾಜಕೀಯ ದುರಿಣರಾದ ಕಾಂಗ್ರೆಸ್ ಮತ್ತು ಬಿಜೆಪಿ ಮುಖಂಡರು ಎಂದು ತಿಳಿದು ಬಂದಿದೆ.ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶಿವರುದ್ರಪ್ಪ ತಂದೆ ಶಿವಲಿಂಗಪ್ಪ ಬಿಣಿ ದಿಗ್ಗಾವ್ (54) ಚಿತ್ತಾಪುರರಾ ಮತೀರ್ಥ ದಗ್ರಾಮದವರಾದ ಮಾಜಿ ತಾಲೂಕ ಪಂಚಾಯತ್ ಅಧ್ಯಕ್ಷರು ಜಗನ್ ಗೌಡ ಗುರುನಾಥ್‌ರೆಡ್ಡಿ ಪಾಟೀಲ್ (58) ಬಂಕಲಗ ಗ್ರಾಮದ ಕಾಂಗ್ರೆಸ್ ಮುಖಂಡರಾದ ರವೀಂದ್ರರೆಡ್ಡಿ ಜಗದೇವ ರೆಡ್ಡಿ (55),ಚಿತ್ತಾಪುರ ಪಟ್ಟಣದ ವೆಂಕಟೇಶ ನಗರದ ನಿವಾಸಿಗಳಾದ ಶಿವಣ್ಣ ಶರಣಪ್ಪ ಹಿಟ್ಟಿನ್ (75) ಮತ್ತು ಅಕ್ಕಮಹಾದೇವಿ ದೇವಸ್ಥಾನ ರೇಷ್ಮೀ ಏರಿಯಾದ ನಿವಾಸಿಗಳಾದ ಕಾಂಗ್ರೆಸ್ ಮುಖಂಡ ಓಂಕಾರೇಶ್ವರ ಪ್ರಭುರಾಜ್ ರೇಷ್ಮೀ (57),ಬಿಜೆಪಿ ಮುಖಂಡರಾದ ಭೀಮನಳ್ಳಿಯ ಶರಣಗೌಡ ಬಸನಗೌಡ(74) ಹಾಗು ಸೋಮಶೇಖರ್ ಬಾಪೂರಾವ್ ಪಾಟೀಲ್ (64), 7 ಜನರ ವಿರುದ್ಧ ಸಕ್ಷನ್ 87 ಕೆಪಿ ಕಯ್ದೆ ಅಡಿಯಲ್ಲಿ ಪ್ರಕಟಣೆ ದಾಖಲಿಸಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ

# ಬಾಗಲಕೋಟೆಯಲ್ಲಿ ಮಾವಾ ಮಾರಾಟ-10 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.23- ಮಾವಾ ಮಾರಾಟ ಮಾಡುತ್ತಿದ್ದ ಸಾರ್ವಜನಿಕ ಸ್ಥಳಗಳ ಮೇಲೆ ದಾಳಿ ಮಾಡಿರುವ ನವನಗರ ಪೋಲಿಸರು ಓರ್ವ ಮಹಿಳೆ ಸೇರಿ 10 ಜನರನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸುಣ್ಣ, ಅಡಿಕೆ ಚೂರು ಮತ್ತು ತಂಬಾಕು ಸೇರಿಸಿ ಮಾವಾ ಎಂಬ ಮಾದಕ ವಸ್ತು ತಯಾರಿಸಿ ಪ್ಲಾಸ್ಟಿಕ್ ಪಾಕೀಟುಗಳಲ್ಲಿ ತುಂಬಿ ಎಗ್ಗಿಲ್ಲದೇ ನಗರದಲ್ಲಿ ಮಾರಾಟ ಮಾಡಲಾಗುತ್ತಿತ್ತು. ಇದರ ಹಾವಳಿ ತಡೆಯುವ ನಿಟ್ಟಿನಲ್ಲಿ ಡಿಎಸ್‌ಪಿ ನೇತೃತ್ವದಲ್ಲಿ ನವನಗರ ಸಿಪಿಐ ಮತ್ತು ಪಿಎಸ್‌ಐ ಅವರು ತಂಡ ರಚನೆ ಮಾಡಿ ಜುಲೈ 22 ಹಾಗೂ 23 ರಂದು ನವನಗರ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿದ್ದರು.ಕಾರ್ಯಾಚರಣೆಯಲ್ಲಿ ಮಾವಾ ಮಾರಾಟ ಮಾಡುತ್ತಿದ್ದ ಧೂಳಪ್ಪ ಅಲಿಯಾಸ್ ಮುತ್ತು ಉಳ್ಳಾಗಡ್ಡಿ, ಭಾಷಾಸಾಬ ಮುಜಾವರ, ತಾಜುದ್ದೀನ್ ಬಳ್ಳಾರಿ, ಮಹ್ಮದಇಸ್ಮಾಯಿಲ್ ಜಮಾದಾರ, ಬಸವರಾಜ ಸೂಳಿಕೇರಿ, ರಿಜ್ವಾನ ಶೇಖ್, ಅಬ್ದುಲ್ ರಹಿಮಾನ್ ಅತ್ತಾರ, ಹಫೀಜಾ ಗಂಡ ಇಮ್ತಿಯಾಜ್ ಮುದ್ದೇಬಿಹಾಳ,ಪರ್ವೇಜಖಾನ್, ಪರ್ವೇಜ ಮುಲ್ಲಾ ಬಂಧಿತ ಅರೋಪಿಗಳಾಗಿದ್ದು,ಬಂಧಿತರಿಂದ ಮಾದಕ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ.ಪ್ರಶಂಸೆ:ಮಾವಾ ಮಾರಾಟದ ಸ್ಥಳಗಳ ಮೇಲೆ ದಾಳಿ ನಡೆಸಿ 10 ಜನರನ್ನು ಬಂಧಿಸುವಲ್ಲಿಯಶಸ್ವಿಯಾಗಿರುವ ಪೋಲಿಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಜಿಲ್ಲಾ ಪೋಲಿಸ್ ಅಧೀಕ್ಷಕರು ಅಭಿನಂದಿಸಿ ಅವರ ಕಾರ್ಯವನ್ನು ಪ್ರಶಂಸಿದ್ದಾರೆ.

# ನಿರಂತರ ಮಳೆ ಹಿನ್ನೆಲೆ: ಭೂಕುಸಿತ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಕ್ಕೆ ಜಿಲ್ಲಾಧಿಕಾರಿಗಳ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜು 23: 2025ರ ಮಾನ್ಸೂನ್ ಅವಧಿಯಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಸುರಿಯುವ ಸಂಭವ ಇರುವ ಬಗ್ಗೆ ಭಾರತೀಯ ಹವಮಾನ ಇಲಾಖೆಯಿಂದ ಮುನ್ಸೂಚನೆ ನೀಡಲಾಗಿದ್ದು, ಭೂಕುಸಿತ ಪೀಡಿತ ಮತ್ತು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯ ಎಲ್ಲ ತಹಸೀಲ್ದಾರಗಳಿಗೆ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಸಹಾಯಕ ಆಯುಕ್ತರು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿ ಸೂಚನೆ ನೀಡಿದ್ದಾರೆ.

ಪ್ರಸ್ತುತ ಮುಂಗಾರು ಹಂಗಾಮಿನ ಅವಧಿಯಲ್ಲಿ ವಾಡಿಕೆಗಿಂತ ಅತೀ ಹೆಚ್ಚಿನ ಮಳೆಯು ಆಗುವ ಸಂಭವವಿರುವುದರಿಂದ ಪ್ರವಾಹ ಮತ್ತು ಭೂ ಕುಸಿತ ಉಂಟಾಗುವ ಸಾಧ್ಯತೆಯಿರುತ್ತದೆ ಎಂದು ನವದೆಹಲಿಯ ರಾಷ್ಟ್ರೀಯ ವಿಪತ್ತು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಆಗಬಹುದಾದ ಅವಘಡಗಳನ್ನು ನಿಯಂತ್ರಿಸಲು ಸೂಚಿಸಿರುವುದರಿಂದ ರಾಯಚೂರು ಜಿಲ್ಲೆಯಲ್ಲಿ ಪ್ರವಾಹದ ಮುನ್ನಚ್ಚರಿಕೆ ಕ್ರಮವಾಗಿ ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಗಳು ಹಾಗೂ ಹವಾಮಾನ ಎಚ್ಚರಿಕೆಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಿ, ಸ್ಥಳೀಯ ಅಧಿಕಾರಿಗಳಿಗೆ ಮತ್ತು ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳ ನಾಗರಿಕರಿಗೆ ಸಂಬಂಧಿತ ಮಾಹಿತಿಯನ್ನು ತ್ವರಿತವಾಗಿ ನೀಡಬೇಕು. ಪ್ರವಾಹ ಪೀಡಿತ ಗ್ರಾಮಗಳಲ್ಲಿ ನದಿ ದಡದಲ್ಲಿ ಯಾವುದೇ ಚಟುವಟಿಕೆ ನಡೆಸದಂತೆ ಹಾಗೂ ಜನ-ಜಾನುವಾರು ಹೋಗದಂತೆ ಡಂಗೂರ ಟಾಂ-ಟಾಂ ಸಾರುವುದು ಅಥವಾ ಮೈಕ್ ಮೂಲಕ ಜಾಗೃತಿ ಮೂಡಿಸಬೇಕು.

ಕಚೇರಿಗಳಲ್ಲಿ ಕಂಟ್ರೋಲ್ ರೂಮ್ ತೆರೆದು 24 ಗಂಟೆ ಕಂಟ್ರೋಲ್ ರೂಮ್‌ಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಯನ್ನು ನಿಯೋಜಿಸುವುದು ಹಾಗೂ ಸಾರ್ವಜನಿಕರಿಗೆ ಮಾಹಿತಿಗಾಗಿ ಪತ್ರಿಕೆಗಳಲ್ಲಿ ಕಂಟ್ರೋಲ್ ರೂಮ್ ವಿವರ ನೀಡಬೇಕು. ಜಿಲ್ಲೆಯ ತಾಲೂಕು ಮಟ್ಟದಲ್ಲಿ ಪ್ರವಾಹವನ್ನು ನಿಭಾಯಿಸಲು ವಿವಿಧ ಸಮಿತಿಗಳನ್ನು ರಚಿಸಿ ನೋಡಲ್ ಅಧಿಕಾರಿಗಳನ್ನು ನಿಯೋಜಿಸಬೇಕು.

ಈಗಾಗಲೇ ಗುರುತಿಸಿದ ಕಾಳಜಿ ಕೇಂದ್ರಗಳನ್ನು ಸನ್ನದ್ಧ ಸ್ಥಿತಿಯಲ್ಲಿಟ್ಟುಕೊಳ್ಳುವುದು ಹಾಗೂ ಕಾಳಜಿ ಕೇಂದ್ರಗಳನ್ನು ನಿಭಾಯಿಸಲು ಬೇಕಾದ ಕನಿಷ್ಟ ಸಿಬ್ಬಂದಿಯನ್ನು ಗುರುತಿಸಿಟ್ಟುಕೊಳ್ಳಬೇಕು.ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳೊಂದಿಗೆ ಸಮನ್ವಯದೊಂದಿಗೆ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಬೇಕು. ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳ ಸಭೆ ಕರೆದು ಈ ಬಗ್ಗೆ ಸೂಕ್ತ ಮುಂಜಾಗೃತ ಕ್ರಮ ತೆಗೆದುಕೊಳ್ಳಬೇಕು.

ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಯು ಕೇಂದ್ರ ಸ್ಥಾನದಲ್ಲಿದ್ದುಕೊಂಡು

ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಬೇಕು. ಪ್ರವಾಹ ಅಥವಾ ಮಳೆಗೆ ನಿಯೋಜಿಸಲ್ಪಟ್ಟ ತಾಲೂಕು ಮಟ್ಟದ ಅಧಿಕಾರಿ ಅಥವಾ ಸಿಬ್ಬಂದಿಗಳು ಸಹಾಯಕ ಆಯುಕ್ತರ ಅನುಮತಿಯಿಲ್ಲದೆ ರಜೆಯನ್ನು ಪಡೆಯತಕ್ಕದಲ್ಲ.

ಗ್ರಾಮ ಪಂಚಾಯತ್ ವಿಪತ್ತು ನಿರ್ವಹಣಾ ಸಮಿತಿಯನ್ನು ನವಿಕರಿಸಿ, ವಿಪತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಈ ಸಮಿತಿಯು

ಸಜ್ಜಾಗಬೇಕು.ಅಧಿಕಾರಿಗಳು ಹಾಗೂ ಸಿಬ್ಬಂದಿ ತಮ್ಮ ಜವಾಬ್ದಾರಿಗಳಲ್ಲಿ ಮತ್ತು ಕರ್ತವ್ಯದಲ್ಲಿ ಲೋಪ ಕಂಡು ಬಂದರೆ ಅಂತವರ ವಿರುದ್ಧ ಜಿಲ್ಲಾ ವಿಪತ್ತು ನಿರ್ವಹಣಾ ಕಾಯ್ದೆ 2005 ರನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರು ಸುದ್ದಿಗಳ ಗೌಪ್ಯತೆ ಕಾಪಾಡುತ್ತಿಲ್ಲ: ಚಿನಿವಾರ್ ಕಳವಳ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.23: ಮುದ್ರಣ ಹಾಗೂ ದೃಶ್ಯ ಮಾಧ್ಯಮದ ಪತ್ರಕರ್ತರು ಸುದ್ದಿಗಳ ಗೌಪ್ಯತೆಯನ್ನು ಕಾಪಾಡುತ್ತಿಲ್ಲ ಎಂದು ಹಿರಿಯ ಪತ್ರಕರ್ತ ಬಸವರಾಜ್ ಅ.ಚಿನಿವಾರ್ ಅವರು ಕಳವಳ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಯಾದಗಿರಿಗೆ ವರ್ಗಾವಣೆಗೊಂಡ ಪ್ರಜಾವಾಣಿ ವರದಿಗಾರ ಮಲ್ಲಿಕಾರ್ಜುನ್ ನಾಲವಾರ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಹಮ್ಮಿಕೊಂಡ ಬೀಳ್ಕೊಡುಗೆ ಸತ್ಕಾರ ಸಮಾರಂಭದಲ್ಲಿ ಮಾತನಾಡಿದ ಅವರು, ಕಳೆದ 25 ವರ್ಷಗಳಿಂದಲೂ ಮುದ್ರಣ ಮಾಧ್ಯಮದ ಪತ್ರಕರ್ತರು ತಮ್ಮ ಸುದ್ದಿಗಳ ಗೌಪ್ಯತೆಯನ್ನು ಪತ್ರಿಕೆಗಳು ಪ್ರಕಟಗೊಳ್ಳುವವರೆಗೂ ಕಾಪಾಡಿಕೊಳ್ಳುತ್ತಿದ್ದರು ಎಂದರು.

ಎಂತಹ ಸುದ್ದಿಗಳೇ ಇದ್ದರೂ ಸಹ ಮತ್ತೊಬ್ಬ ಪತ್ರಕರ್ತರೊಂದಿಗೆ ವಿನಿಮಯ ಮಾಡಿಕೊಳ್ಳುತ್ತಿರಲಿಲ್ಲ. ಅಲ್ಲದೇ ಒಂದು ವೇಳೆ ಬೇರೆ ಪತ್ರಕರ್ತರು ಸುದ್ದಿಯ ಕುರಿತು ಕೇಳಿದರೆ ಕೆಲವು ಅಂಶಗಳನ್ನು ಮಾತ್ರ ಹೇಳುತ್ತಿದ್ದರು. ಪತ್ರಕರ್ತ ತಾನು ಮಾಡಿದ ಸುದ್ದಿಯನ್ನು ಪತ್ರಿಕೆಯ ಸಂಪಾದಕರಿಗೆ ಮಾತ್ರ ಮುಟ್ಟಿಸುತ್ತಿದ್ದ. ಬೇರೆಯವರಿಗೆ ಸುದ್ದಿ ಸೋರಿಕೆ ಮಾಡುವುದು ವೃತ್ತಿಧರ್ಮಕ್ಕೆ ಅಪಮಾನ ಹಾಗೂ ಪತ್ರಿಕೆಗೆ ಮಾಡಿದ ಅವಮಾನ ಮತ್ತು ಸಂಪಾದಕರಿಗೆ ಮಾಡಿದ ಅವಮಾನ ಎಂದು ಭಾವಿಸುತ್ತಿದ್ದರು. ಈಗ ಹಾಗಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ದೃಶ್ಯ ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳು ಬಂದ ಮೇಲೆ ಮುದ್ರಣ ಮಾಧ್ಯಮಗಳೂ ಸಹ ದೃಶ್ಯ ಮಾಧ್ಯಮಗಳ ರೀತಿಯಲ್ಲಿಯೇ ತಮ್ಮ ಸುದ್ದಿಗಳನ್ನು ಬಹಿರಂಗಪಡಿಸುತ್ತಿವೆ. ಇದು ಕಾಲಕ್ಕೆ ತಕ್ಕಂತೆ ಅನಿವಾರ್ಯವಾಗಿದ್ದರೂ ಸಹ ಸುದ್ದಿಗಳ ಗೌಪ್ಯತೆ ಹಾಗೂ ಘನತೆ ಮತ್ತು ಗೌರವವನ್ನು ಉಳಿಸಿಕೊಳ್ಳುವಲ್ಲಿ ಸಮಸ್ಯೆಯಾಗಿದೆ ಎಂದು ಅವರು ಹೇಳಿದರು.ಜನಸಾಮಾನ್ಯರು ಊಟ, ಉಪಹಾರವನ್ನು ಹಂಚಿಕೊಳ್ಳುವ ರೀತಿಯಲ್ಲಿ ಮುದ್ರಣ ಹಾಗೂ ದೃಶ್ಯ ಮಾಧ್ಯಮಗಳ ಪತ್ರಕರ್ತರು ಪರಸ್ಪರ ವಿನಿಮಯ ಮಾಡಿಕೊಳ್ಳುತ್ತಿದ್ದಾರೆ. ಇದನ್ನೇ ಈ ಹಿಂದೆ ಆ ರೀತಿ ಮಾಡಿದರೆ ಪತ್ರಿಕಾ ಧರ್ಮಕ್ಕೆ ಮಾಡಿದ ಅಪಚಾರವಾಗುತ್ತಿತ್ತು. ಈಗ ಅಂತಹ ಅಪಚಾರದ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಪ್ರತಿಯೊಂದು ಸುದ್ದಿಗಳನ್ನೂ ಎಲ್ಲರೂ ಹಂಚಿಕೊಳ್ಳುವುದು ಸಾಮಾನ್ಯವಾಗಿ ಬಿಟ್ಟಿದೆ ಎಂದು ಅವರು ತಿಳಿಸಿದರು.

ಕಲ್ಯಾಣ ಕರ್ನಾಟಕದಲ್ಲಿ ರಾಜ್ಯ ಮಟ್ಟದಲ್ಲಿ ಹೆಸರು ಮಾಡುವಂತಹ ಉತ್ತಮ ಪತ್ರಕರ್ತರಿದ್ದಾರೆ. ಆದಾಗ್ಯೂ, ಅವರಿಗೆ ರಾಜ್ಯ ಮಟ್ಟದ ಪತ್ರಿಕೆಗಳಲ್ಲಿ ಸೂಕ್ತ ಸ್ಥಾನಮಾನ ಸಿಗುತ್ತಿಲ್ಲ. ಹಳೆಯ ಮೈಸೂರು ಭಾಗದವರು ಮತ್ತು ಮಧ್ಯ ಕರ್ನಾಟಕದವರಿಗೆ ಸ್ಥಾನಿಕ ಸಂಪಾದಕರನ್ನಾಗಿ ಮಾಡುವ ಮೂಲಕ ಕಲ್ಯಾಣ ಕರ್ನಾಟಕದ ಧೀಮಂತ ಪತ್ರಕರ್ತರಿಗೆ ಸಾಕಷ್ಟು ಅನ್ಯಾಯವನ್ನೂ ಮಾಡುತ್ತಿದ್ದಾರೆ. ಇದು ನಿಲ್ಲಬೇಕು ಎಂದು ಅವರು ಹೇಳಿದರು.

ಮಲ್ಲಿಕಾರ್ಜುನ್ ನಾಲವಾರ್ ಅವರು ಹೈದ್ರಾಬಾದ್‌ನಲ್ಲಿ ಸೇವೆ ಸಲ್ಲಿಸಿ, ಸ್ವ ಜಿಲ್ಲೆಯಲ್ಲಿ ನಾಲ್ಕು ವರ್ಷಗಳವರೆಗೆ ಸೇವೆ ಸಲ್ಲಿಸಿದ್ದಾರೆ. ಈಗ ನೆರೆಮನೆ ಯಾದಗಿರಿಗೆ ಹೋಗುತ್ತಿದ್ದಾರೆ. ಹೊಸದಾಗಿ ಜಿಲ್ಲೆಗೆ ಬರುವ ಪತ್ರಕರ್ತರಿಗೆ ಸ್ವಾಗತಿಸುವ ಹಾಗೂ ಇಲ್ಲಿಂದ ವರ್ಗಾವಣೆಯಾಗುವ ಎಲ್ಲ ಪತ್ರಕರ್ತರಿಗೂ ಸಂಘದಿಂದ ಸೂಕ್ತ ಗೌರವ ಕೊಡಬೇಕು. ಕೇವಲ ಪತ್ರಕರ್ತರಿಗೆ ಅಲ್ಲದೇ ಅವರ ಪತ್ನಿಗೂ ಸಹ ಗೌರವ ಕೊಡುವ ಮೂಲಕ ಸಂಘವು ಅವರೊಂದಿಗೆ ಇದೆ ಎಂಬ ರೀತಿಯಲ್ಲಿ ಗೌರವ ಕೊಡುವ ಕೆಲಸ ಆಗಬೇಕು ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ, ರಮೇಶ್ ಮೇಳಕುಂದಾ, ಬ್ರಹ್ಮಾನಂದ್ ಅರಳಿ, ಪ್ರವೀಣರೆಡ್ಡಿ, ಓಂಪ್ರಕಾಶ್ ಮಣ್ಣೂರ್, ಬಜರಂಗಬಲಿ, ದತ್ತಾತ್ರೇಯ್ ಪಾಟೀಲ್, ಸಿದ್ದು ಸಾತಿಹಾಳ್, ದೇವಿಂದ್ರ ಜಡಿ, ದಸ್ತಗೀರ್ ನದಾಫ್, ಸೋಮೇಶ್ ಪಾಟೀಲ್, ಬಾಬುರಾವ್ ಕೋಬಾಳ್, ಶರಣಯ್ಯ ಸ್ವಾಮಿ ಹಿರೇಮಠ್, ಅನಿಲ್ ಸ್ವಾಮಿ, ಪುರುಷೋತ್ತಮ್ ಮುಂತಾದವರು ಮಾತನಾಡಿ, ಮಲ್ಲಿಕಾರ್ಜುನ್ ನಾಲವಾರ್ ಅವರು ವಸ್ತುನಿಷ್ಠ ವರದಿಗಾರರಾಗಿ ಅತ್ಯಂತ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾರೆ. ಎಲ್ಲ ಪತ್ರಕರ್ತರೊಂದಿಗೂ ಸೌಹಾರ್ದಯುತ ಸಂಬಂಧ ಹೊಂದಿದ್ದಾರೆ. ಅವರು ನೆರೆಯ ಜಿಲ್ಲೆಗೆ ವರ್ಗಾವಣೆಗೊಂಡಿದ್ದು, ಶೀಘ್ರವೇ ಬಡ್ತಿ ಹೊಂದಿ ಮತ್ತೆ ಸ್ವಜಿಲ್ಲೆಗೆ ಆಗಮಿಸಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಪ್ರವೀಣ್ ಪಾರಾ, ಶಿವರಂಜನ್ ಸತ್ಯಂಪೇಟೆ, ಸಂಗಮನಾಥ ರೇವತಗಾಂವ್, ಗಂಗಾಧರ್ ಹಿರೇಮಠ್, ಮಹೇಶ್ ಚೌಕಿಮಠ್, ಶಂಕರಬಾಬು ರೆಡ್ಡಿ, ವಿಜಯಕುಮಾರ್ ಗಾಜರೆ, ಬಿರಾದಾರ್ ಶಿವಕುಮಾರ್, ರಾಚಪ್ಪ ಜಂಬಗಿ, ಶಿವಕುಮಾರ್ ಯಲ್ದೆ ಮುಂತಾದವರು ಉಪಸ್ಥಿತರಿದ್ದರು.

# ಜೈ ಕನ್ನಡಿಗರ ಸೇನೆ ವತಿಯಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕಾಳಗಿ:ಜು.23:ತಾಲೂಕಿನ ಕೋಡ್ಲಿ ಗ್ರಾಮದಲ್ಲಿರುವ ಸರ್ಕಾರಿ ಪ್ರೌಢ ಶಾಲೆಯಲ್ಲಿ 20 ವಿದ್ಯಾರ್ಥಿಗಳಿಗೆ 9ನೆ ತರಗತಿಯಿಂದ 10ನೇ ತರಗತಿಗೆ ಉತ್ತೀರ್ಣಗೊಳಿಸದೆ ಅವರನ್ನು ಪುನಃ 9ನೇ ತರಗತಿಗೆ ವರ್ಗಾಯಿಸಿದ ಪ್ರಾಂಶುಪಾಲರು ಹಾಗೂ ಶಿಕ್ಷಕರ ವಿರುದ್ಧ ಕೋಡ್ಲಿ ಸರ್ಕಲ್ ನಲ್ಲಿ ಪ್ರತಿಭಟನೆಯನ್ನು ಮಾಡಲಾಯಿತು

ಈ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಿಪಿಐಎಂ ಶಾಖೆ-ಯ ಕಾರ್ಯದರ್ಶಿ ಗುರುನಂದೇಶ್ ಕೋಣಿನ್ ಹಾಗೂ ಜೈ ತಾಲೂಕಾ ಅಧ್ಯಕ್ಷರಾದ ದಿಲೀಪಕುಮಾರ್ ಯಲಪಳ್ಳಿ ಅನ್ಯಾಯಕ್ಕೆ ಒಳಗಾಗಿರುವ ಸುಮಾರು 13 ವಿದ್ಯಾರ್ಥಿಗಳಿಗೆ ಕೂಡಲೇ ಅವರನ್ನು 9ನೇ ತರಗತಿಯಿಂದ 10ನೇ ತರಗತಿಗೆ ಉತ್ತೀರ್ಣಗೊಳಿಸಿ .ಮಕ್ಕಳ ಭವಿಷ್ಯದ ಜೊತೆ ಆಟವಾಡುತ್ತಿರುವ ಶಾಲೆಯ ಪ್ರಾಂಶುಪಾಲರು ಹಾಗೂ ಶಿಕ್ಷಕರ ವಿರುದ್ಧ ಸರ್ಕಾರದ ಕಾಯ್ದೆ ಕಾನೂನಿನ ಅಡಿಯಲ್ಲಿ ಕ್ರಮ ಕೈಗೊಳ್ಳುವಂತೆ ತಾಲೂಕು ಶಿಕ್ಷಣ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು

ಈ ಸಂದರ್ಭದಲ್ಲಿ ಜೈ ಕನ್ನಡಿಗರ ಸೇನೆಯ ತಾಲೂಕು ಉಪಧ್ಯಕ್ಷರಾದ ಶಿವಕುಮಾರ ಹಾದಿಮನಿ ಹಾಗೂ ಮಾದಿಗ ದಂಡೋರ ಪ್ರಧಾನ ಕಾರ್ಯದರ್ಶಿ ಸೂರ್ಯಕಾಂತ ಮುಕುಂದಿ ಹಾಗೂ ಯುವ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಾ ಅಧ್ಯಕ್ಷ ಸಚಿನ್ ರಾಠೋಡ ಹಾಗೂ ಯುವ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಾ ಉಪಾಧ್ಯಕ್ಷ ಶೇಖರ್ ನಾಟಿಕರ ಸುರೇಶ್ ಚನ್ನೂರ ವಿಶ್ವ ವಾಡೇಕರ್ . ಆಕಾಶ ತೆಂಗಳಿ ಶಿವರಾಜ ಕಟ್ಟಿಮನಿ. ಶಿವರಾಜ ಸುಗೂರ. ರಾಕೇಶ ತೆಳಗಿನದೊಡ್ಡಿ. ಸೈಲಿಸ್ ನರನಳ ನಾಗೇಶ ಹಾಗೂ ಇತರರಿದ್ದರು.

# ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡಬಾರದು: ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜು.23: ಜಿಲ್ಲೆಯಲ್ಲಿ ರಸಗೊಬ್ಬರ ಅಂಗಡಿಗಳ ಮಾಲೀಕರು ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮತ್ತು ಅನಧಿಕೃತವಾಗಿ ರಸಗೊಬ್ಬರ ದಾಸ್ತಾನು ಮಾಡಬಾರದು ಎಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಸಗೊಬ್ಬರ ತೈಯಾರಕ ಕಂಪನಿಯ ಮಾರ್ಕೆಟಿಂಗ್ ಅಧಿಕಾರಿಗಳು, ಕರ್ನಾಟಕ ಮಾರ್ಕೆಟಿಂಗ್ ಫೆಡರೇಶನ್ ಮತ್ತು ಕರ್ನಾಟಕ ರಾಜ್ಯ ಬೀಜ ನಿಗಮದ ಅಧಿಕಾರಿಗಳು ಹಾಗೂ ರಸಗೊಬ್ಬರ, ಕೀಟನಾಶಕಗಳ ಮಾರಾಟಗಾರರ ಸಂಘದ ಅಧ್ಯಕ್ಷರಿಗೆ ಕರೆದ ಸಭೆಯಲ್ಲಿ ಮಾತನಾಡಿದರು.

ರಸಗೊಬ್ಬರದ ಜೊತೆಗೆ ಜೈವಿಕ ಉತ್ತೇಜಕಗಳು, ಕೀಟನಾಶಕ ಹಾಗೂ ಉಪ ಪೋಷಕಾಂಶಗಳನ್ನು ಲಿಂಕ್ ಮಾಡಭಾರದು. ನಿಯಮಾನುಸಾರವೆ ಅವುಗಳ ಮಾರಾಟ ಮಾಡಬೇಕು. ನಾನು ಕನಕಗಿರಿ, ಕಾರಟಗಿ ಹಾಗೂ ಕುಷ್ಟಗಿ ಭಾಗದಲ್ಲಿ ಹೋದಾಗ ರೈತರು ಹೆಚ್ಚಿನ ಹಣ ಪಡೆದು ರಸಗೊಬ್ಬರ ಮಾರಾಟ ಮಾಡುತ್ತಿದ್ದಾರೆ ಎನ್ನುವ ದೂರುಗಳು ಬಂದವು. ಹಾಗಾಗಿ ಯಾರು ನಿಯಮ ಬಿಟ್ಟು ಮಾರಾಟ ಮಾಡಭಾರದು ಎಂದು ಹೇಳಿದರು.

ತಮ್ಮ ಯಾವುದೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತರಬೇಕು. ರೈತರ ಬೇಡಿಕೆಯಂತೆ ಜಿಲ್ಲೆಗೆ ರಸಗೊಬ್ಬರ ಬರುತ್ತಿದೆ ಕಳೆದ ಒಂದು ವಾರದಲ್ಲಿ ಜಿಲ್ಲೆಗೆ 3150 ಮೇಟ್ರಿಕ್ ಟನ್ ಯೂರಿಯಾ ಬಂದಿದೆ. ಇನ್ನೂ ಒಂದು ವಾರದಲ್ಲಿ 5 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಬರಲಿದೆ. ಜಿಲ್ಲೆಯ ರೈತರು ಯಾವುದೇ ಕಾರಣ-ಕ್ಕೆ ಆತಂಕ ಪಟ್ಟು ರಸಗೊಬ್ಬರ ಸ್ಟಾಕ್ ಮಾಡಭಾರದು ಎಂದರು.

ನ್ಯಾನೋ ಯೂರಿಯಾ ಮತ್ತು ಡಿಎಪಿ ರಸಗೊಬ್ಬರ ಬಳಕೆಗೆ ರೈತರು ಒತ್ತು ಕೊಡಬೇಕು. ಈ ಕುರಿತು ರಸಗೊಬ್ಬರ ಕಂಪನಿಯಗಳು ಕೃಷಿ ಇಲಾಖೆಯ ಜೊತೆಗೂಡಿ ರೈತರಿಗೆ ಮಾಹಿತಿ ಹಾಗೂ ಪ್ರಾತ್ಯಕ್ಷಿಕೆಗಳನ್ನು ಏರ್ಪಡಿಸುವ ಕೆಲಸ ಮಾಡಬೇಕು. ಇನ್ನೂ ಬಹಳಷ್ಟು ರೈತರಿಗೆ ನ್ಯಾನೋ ಯೂರಿಯಾ ಹಾಗೂ ಡಿಎಪಿ ಉಪಯೋಗಿಸುವ ಕುರಿತು ಸರಿಯಾದ ಮಾಹಿತಿ ಇಲ್ಲದಿರುವುದರಿಂದ ಅವರಿಗೆ ತಿಳಿಹೇಳಬೇಕೆಂದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ರಸಗೊಬ್ಬರ ತೈಯಾರಕ ಕಂಪನಿಯ ಮಾರ್ಕೆಟಿಂಗ್ ಅಧಿಕಾರಿಗಳು, ಕರ್ನಾಟಕ ಮಾರ್ಕೆಟಿಂಗ್ ಫೆಡರೇಶನ್ ಮತ್ತು ಕರ್ನಾಟಕ ರಾಜ್ಯ ಬೀಜ ನಿಗಮದ ಅಧಿಕಾರಿಗಳು, ರಸಗೊಬ್ಬರ, ಕೀಟನಾಶಕಗಳ ಮಾರಾಟಗಾರರ ಸಂಘದ ಅಧ್ಯಕ್ಷರು ಸೇರಿದಂತೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ಇತರೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೆಣ್ಣೆತೋರಾ ಹಿನ್ನೀರಿನಲ್ಲಿ ಯುವತಿಯ ಶವ ಪತ್ತೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.23: ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದ ಯುವತಿಯ ಮೃತದೇಹ ಪತ್ತೆಯಾಗಿದೆ. ಕಮಲಾಪುರ ತಾಲ್ಲೂಕಿನ ಭುಸಣಗಿ ಗ್ರಾಮದ ಸಾಕ್ಷಿ ಉಪ್ಪಾರ್ (22) ಎಂಬ ಯುವತಿಯ ಶವ ಪತ್ತೆಯಾಗಿದೆ. ಅಭಿಷೇಕ್ ಎಂಬಾತನ ಕಿರುಕುಳಕ್ಕೆ ಬೇಸತ್ತು ಹೊಸ ಕುರಿಕೋಟ ಸೇತುವೆ ಸಮೀಪದ ಬೆಣ್ಣೆತೂರ ಹಿನ್ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಳು. ಅಗ್ನಿಶಾಮಕ ದಳದ ಸತತ ಕಾರ್ಯಾಚರಣೆಯಿಂದ ಮೃತದೇಹ ಕೊನೆಗೂ ಪತ್ತೆಯಾಗಿದೆ. ಈ ಕುರಿತು ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.